ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 177 ಸಂಚಿಕೆ- 177 | PAGE-8 ಪುಟ-8 | ಭಾನುವಾರ 24.08.2025 | RS.2/- ಬೆಲೆ 2/-

## ವೈಭವದ ಶಂಕರಲಿಂಗೇಶ್ವರ ಜಾತ್ರಾ ಮಹೋತ್ಸವ





ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್ : ತಾಲೂಕಿನ ಘಾಟಬೋರಳ ಗ್ರಾಮದಲ್ಲಿ ಐತಿಹಾಸಿಕ ಶಂಕರಲಿಂಗೇಶ್ವರ ದೇವರ ಜಾತ್ರಾ ಮಹೋತ್ಸವ ವೈಭದಿಂದ ಜರುಗಿತು.

ಬೆಳಗ್ಗೆಯಿಂದ ದೇವಸ್ಥಾನದಲ್ಲಿ ಧಾರ್ಮಿಕ ಪರಂಪರೆಯಂತೆ ವಿವಿಧ ಪೂಜಾ ಕಾರ್ಯಕ್ರಮಗಳು ಜರುಗಿದವು. ಬಳಿಕ ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತರಿಗಾಗಿ ದಾರಿಯುದ್ದಕ್ಕೂ ಸೇರಿ ಶಂಕರಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ಬೃಹತ್

(2ನೇ ಪುಟ ನೋಡಿ)

# ಮುಂದಿನ ಗುರಿ ಬಾಹ್ಯಾಕಾಶ ನಿಲ್ದಾಣ:ಮೋದಿ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.23:ರಾಷ್ಟ್ರೀಯ ಬಾಹ್ಯಾಕಾಶ ದಿನದಂದು ಪ್ರಧಾನಿ ನರೇಂದ್ರ ಮೋದಿ ವಿಜ್ಞಾನಿಗಳಿಗೆ ಟಾರ್ಗೆಟ್ ಫಿಕ್ಸ್ ಮಾಡಿದ್ದು ಮುಂದಿನ ಹೆಜ್ಜೆ ಬಾಹ್ಯಾಕಾಶದ ಕುರಿತ ಆಳವಾದ ಅನ್ವೇಷಣೆ, ಅದಕ್ಕೆ ಸಿದ್ಧರಾಗಿರಿ ಎಂದು ಹೇಳಿದ್ದಾರೆ.

ಅಲ್ಲದೆ ಭಾರತ ತನ್ನದೇ ಆದ ಬಾಹ್ಯಾಕಾಶ ನಿಲ್ದಾಣವನ್ನು ನಿರ್ಮಿಸುವತ್ತ ಕೆಲಸ ಮಾಡುತ್ತಿದೆ ಎಂದರು. ಇದೇ ವೇಳೆ ಮುಂದಿನ ಐದು ವರ್ಷಗಳಲ್ಲಿ ಬಾಹ್ಯಾಕಾಶ ಕ್ಷೇತ್ರದಲ್ಲಿ ಐದು ಯುನಿಕಾರ್ನ್‌ಗಳನ್ನು ಸೃಷ್ಟಿಸಬಹುದೇ ಎಂದು ಖಾಸಗಿ ವಲಯಗಳನ್ನು ಕೇಳಿದ ಪ್ರಧಾನಿ ಮೋದಿ, ಖಾಸಗಿ ವಲಯ ಮುಂದೆ ಬಂದು ಅದು ವಾರಕ್ಕೆ ಒಂದರಂತೆ ಪ್ರತಿ ವರ್ಷ 50 ರಾಕೆಟ್‌ಗಳನ್ನು ಉಡಾವಣೆ ಮಾಡುವಂತೆ ಕೇಳಿದರು.

ದೇಶವು ಹೊಸ ಬಾಹ್ಯಾಕಾಶ ವಲಯ ಸುಧಾರಣೆಗಳ ಮೇಲೆ ಕೆಲಸ ಮಾಡುತ್ತಿದೆ. ಭಾರತವು ಶೀಘ್ರದಲ್ಲೇ ಖಾಸಗಿ ವಲಯದಿಂದ ನಿರ್ಮಿಸಲಾದ ಮೊದಲ ಪಿಎಸ್‌ಎಲ್‌ವಿ ರಾಕೆಟ್ ಅನ್ನು ಉಡಾವಣೆ ಮಾಡಲಿದೆ ಎಂದು ಮೋದಿ ಹೇಳಿದರು. ಅಭಿವೃದ್ಧಿಯಲ್ಲಿರುವ ಭಾರತದ ಮೊದಲ ಸಂವಹನ ಉಪಗ್ರಹವನ್ನು ಸಹ ಶೀಘ್ರದಲ್ಲೇ ಉಡಾವಣೆ ಮಾಡಲಾಗುವುದು ಎಂದರು. ರಾಷ್ಟ್ರೀಯ ಬಾಹ್ಯಾಕಾಶ ದಿನ 2025ರ ಹಿನ್ನೆಲೆಯಲ್ಲಿ ಮಾತನಾಡಿದ ಮೋದಿ, ಸಾರ್ವಜನಿಕ, ಖಾಸಗಿ ಸಹಭಾಗಿತ್ವದಡಿಯಲ್ಲಿ ಭೂ ವೀಕ್ಷಣಾ ಉಪಗ್ರಹ ನಕ್ಷತ್ರಪುಂಜವನ್ನು ಉಡಾವಣೆ ಮಾಡುವ ಸಿದ್ಧತೆಯೂ ನಡೆಯುತ್ತಿದೆ ಎಂದು ಹೇಳಿದರು. ಕಳೆದ 11



ವರ್ಷಗಳಲ್ಲಿ ಬಾಹ್ಯಾಕಾಶ ಕ್ಷೇತ್ರದ ಬೆಳವಣಿಗೆ ಮತ್ತು ಈಗ ಬಾಹ್ಯಾಕಾಶ ತಂತ್ರಜ್ಞಾನಗಳಲ್ಲಿ 350ಕ್ಕೂ ಹೆಚ್ಚು ನವೋದ್ಯಮಗಳ ಒಳಗೊಳ್ಳುವಿಕೆಯನ್ನು ಶ್ಲಾಘಿಸಿದರು. ಭಾರತ ಶೀಘ್ರದಲ್ಲೇ ತನ್ನ ಗಗನಯಾನ ಮಿಷನ್ ಮತ್ತು ಭಾರತೀಯ ಅಂತರಿಕ್ಷ ಬಾಹ್ಯಾಕಾಶ ನಿಲ್ದಾಣವನ್ನು ಪ್ರಾರಂಭಿಸಲಿದೆ ಎಂದು ಹೇಳಿದರು.

ನಾವು ಈಗಾಗಲೇ ಚಂದ್ರ ಮತ್ತು ಮಂಗಳ ಗ್ರಹಗಳಿಗೆ ಹೋಗಿದ್ದೇವೆ. ಈಗ ಅನೇಕ ನಿಗೂಢತೆಗಳು ಇರುವ ಬಾಹ್ಯಾಕಾಶದ ಆಳವಾದ ಪ್ರದೇಶಗಳಿಗೆ ಹೋಗಬೇಕಾಗಿದೆ. ನಕ್ಷತ್ರಪುಂಜದ ಆಚೆಗೆ ನಮ್ಮ ಗುರಿ ಇದೆ ಎಂದು ಪ್ರಧಾನಿ ಹೇಳಿದರು. ಭಾರತ ಸುಧಾರಣೆ, ಪ್ರದರ್ಶನ ಮತ್ತು ರೂಪಾಂತರದ ಭಾಗದಲ್ಲಿದೆ ಎಂದು ಹೇಳಿದರು. ವರ್ಷಗಳಲ್ಲಿ ಬಾಹ್ಯಾಕಾಶ ಕ್ಷೇತ್ರದಲ್ಲಿ ಅನೇಕ ಸುಧಾರಣೆಗಳನ್ನು ಮಾಡಲಾಗಿದೆ. ಭಾರತದ ಬಾಹ್ಯಾಕಾಶ ವಲಯದ ನೀತಿಗಳಿಗೂ ಯಾವುದೇ ಕೊನೆಯಿಲ್ಲ ಎಂದರು.ಬಾಹ್ಯಾಕಾಶ ಕ್ಷೇತ್ರದಲ್ಲಿ ಒಂದರ ನಂತರ ಒಂದರಂತೆ ಹೊಸ ಮೈಲಿಗಲ್ಲುಗಳನ್ನು ಸೃಷ್ಟಿಸುವುದು ಭಾರತ ಮತ್ತು ಭಾರತೀಯ ವಿಜ್ಞಾನಿಗಳ ಸ್ವಭಾವವಾಗಿದೆ. ಕೇವಲ ಎರಡು ವರ್ಷಗಳ ಹಿಂದೆ, ಭಾರತವು ಚಂದ್ರನ ದಕ್ಷಿಣ ಧ್ರುವವನ್ನು ತಲುಪುವ ಮೂಲಕ ಇತಿಹಾಸ ಸೃಷ್ಟಿಸಿದ ಮೊದಲ ದೇಶವಾಯಿತು. ಇನ್ನು ಶುಭಾಂಶು ಶುಕ್ಲಾ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ತ್ರಿವರ್ಣ ಧ್ವಜ ಹಾರಿಸುವ ಮೂಲಕ ಪ್ರತಿಯೊಬ್ಬ ಭಾರತೀಯನಿಗೂ ಹೆಮ್ಮೆ ತಂದರು. ಇನ್ನು ಬಾಹ್ಯಾಕಾಶ ಕ್ಷೇತ್ರದಲ್ಲಿ ಖಾಸಗಿ ವಲಯವು ಭಾಗಿಯಾಗಿ ನೂತನ ಆವಿಷ್ಕಾರಗಳನ್ನು ಸೃಷ್ಟಿಸುವಂತೆ ಪ್ರೋತ್ಸಾಹಿಸಿದರು ಭಾರತೀಯ ಬಾಹ್ಯಾಕಾಶ ವಲಯವು ಬರೀ ಉಪಗ್ರಹಗಳ ಉಡಾವಣೆಗೆ ಸೀಮಿತವಾಗಿಲ್ಲ. ಅದು ಜೀವನ ಸುಲಭತೆಯಲ್ಲಿ ಅತ್ಯಗತ್ಯ ಪಾತ್ರವನ್ನು ವಹಿಸುತ್ತಿದೆ. ಮೀನುಗಾರರಿಗೆ ಎಚ್ಚರಿಕೆ, ವಿಪತ್ತು ಎಚ್ಚರಿಕೆ, ಪ್ರಧಾನಿ ಗತಿ ಶಕ್ತಿ ಸೇರಿದಂತೆ ಸರ್ಕಾರಿ ಯೋಜನೆಗಳನ್ನು ಸಹ ಹೊಂದಿದೆ ಎಂದು ಪ್ರಧಾನಿ ಹೇಳಿದರು. ಬಾಹ್ಯಾಕಾಶ ತಂತ್ರಜ್ಞಾನವು ಜನರಿಗೆ ಪರಿಹಾರಗಳನ್ನು ತರಬೇಕು ಎಂದರು.

## ಕೃಷ್ಣಾ ನದಿಯಲ್ಲಿ ಎತ್ತಿನ ಮೈ ತೊಳೆಯುತ್ತಿದ್ದ ರೈತನನ್ನು ಎಳೆದೊಯ್ದ ಮೊಸಳೆ



ಮಲ್ಲಮ್ಮ ನುಡಿ ವಾರ್ತೆ ವಿಜಯಪುರ:ಅ.23: ಅಮವಾಸ್ಯೆ ಹಿನ್ನೆಲೆ ಎತ್ತಿನ ಮೈ ತೊಳೆಯಲು ಕೃಷ್ಣಾ ನದಿ ತೀರಕ್ಕೆ ಹೋಗಿದ್ದ ರೈತನನ್ನು ಮೊಸಳೆ ಎಳೆದೊಯ್ದಿರುವ

(2ನೇ ಪುಟ ನೋಡಿ)

## ಧರ್ಮಸ್ಥಳ ಪ್ರಕರಣ: ಸುಳ್ಳು ಹೇಳಿಕೆ ಆರೋಪ; ದೂರುದಾರ ಚಿನ್ನಯ್ಯ 10 ದಿನ ಕಸ್ಟಡಿಗೆ



ಮಲ್ಲಮ್ಮ ನುಡಿ ವಾರ್ತೆ ಮಂಗಳೂರು:ಅ.23: ಕಳೆದ ಎರಡು ದಶಕಗಳ ಅವಧಿಯಲ್ಲಿ ಧರ್ಮಸ್ಥಳ ಸುತ್ತಮುತ್ತ ನೂರಾರು ಶವಗಳನ್ನು ಹೂತಿಟ್ಟಿದ್ದೇನೆ ಎಂದು ಹೇಳಿಕೊಂಡು ಬಂದಿದ್ದ ಅನಾಮಿಕ ದೂರುದಾರ ಸಿ ಎನ್ ಚಿನ್ನಯ್ಯ ಅಲಿಯಾಸ್ ಚೆನ್ನನನ್ನು 10 ದಿನಗಳ ಕಾಲ ವಿಶೇಷ ತನಿಖಾ ತಂಡದ ಕಸ್ಟಡಿಗೆ ಒಪ್ಪಿಸಿ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿಯ ನ್ಯಾಯಾಲಯ ಇಂದು ಶನಿವಾರ ಆದೇಶ ಹೊರಡಿಸಿದೆ.

ಧರ್ಮಸ್ಥಳ ಮಂಜುನಾಥ ಸ್ವಾಮಿ ದೇವಸ್ಥಾನದ ಮಾಜಿ ನೈರ್ಮಲ್ಯ ಕೆಲಸಗಾರನಾಗಿದ್ದ ದೂರುದಾರನು ನೀಡಿದ ಹೇಳಿಕೆಗಳು ಮತ್ತು ದಾಖಲೆಗಳಲ್ಲಿ ಅಸಂಗತತೆ ಕಂಡುಬಂದ ನಂತರ ಸುಳ್ಳು ಸಾಕ್ಷ್ಯ ನುಡಿದ ಆರೋಪದ ಮೇಲೆ ಬಂಧಿಸಲಾಯಿತು. ಅವರನ್ನು ಪೊಲೀಸ್ ಕಸ್ಟಡಿಗೆ ಒಪ್ಪಿಸಲಾಗಿದೆ.

ಪೊಲೀಸ್ ಮಾಹಿತಿಯ ಪ್ರಕಾರ, ಇಲ್ಲಿಯವರೆಗೆ ಮುಖವಾಡ ಧರಿಸಿ ಸಮಿತಿಯ ಮುಂದೆ ಹಾಜರಾದ ದೂರುದಾರನನ್ನು ಸಿ ಎನ್ ಚಿನ್ನಯ್ಯ ಎಂದು ಗುರುತಿಸಲಾಗಿದೆ.

ಹಲವಾರು ಗಂಟೆಗಳ ವಿಚಾರಣೆಯ ನಂತರ ಅವರನ್ನು ವೈದ್ಯಕೀಯ

(2ನೇ ಪುಟ ನೋಡಿ)

## ಮುಸುಕು ಮನುಷ್ಯನ ಹಿಂದಿರುವವರು ತನಿಖೆಯಿಂದ ಬಯಲು:ರಾಮಲಿಂಗಾರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.23ಮುಸುಕುಧಾರಿ ಮನುಷ್ಯನನ್ನು ಬಂಧಿಸಲಾಗಿದೆ ತನಿಖೆಯ ನಂತರ ಆತನ ಹಿಂದಿರುವವರು ಯಾರೆಂಬ ಕುರಿತಂತೆ ಸತ್ಯಾಂಶ ಹೊರಬರಲಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಮಾಧ್ಯಮಕ್ಕೆ ತಿಳಿಸಿದ್ದಾರೆ.

ಧರ್ಮಸ್ಥಳದ ವಿವಿಧೆಡೆ ಅತ್ಯಾಚಾರ, ಕೊಲೆಯಾದವರ ಶವಗಳನ್ನು ಹೂತಿರುವುದಾಗಿ ಮುಸುಕುಧಾರಿ ಮನುಷ್ಯ ನ್ಯಾಯಾಲಯದ ಮುಂದೆ ಹೇಳಿದ್ದರಿಂದ ತನಿಖೆಗೆ ನ್ಯಾಯಾಲಯ ಸೂಚಿಸಿತ್ತು. ಅದರಂತೆ ಮುಖ್ಯಮಂತ್ರಿಗಳು ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ಎಸ್‌ಐಟಿ ರಚಿಸಿ ತನಿಖೆಗೆ ಸೂಚಿಸಿದ್ದರು. ಅದರಂತೆ ಅವನು ತೋರಿಸಿದ ಕಡೆ ಶವಗಳಿಗಾಗಿ ಹುಡುಕಾಟ ನಡೆಸಲಾಗಿತ್ತು.



ಈಗ ಮುಸುಕುಧಾರಿ ಹೇಳಿದ್ದು, ಸುಳ್ಳೆಂಬುದು ತಿಳಿದು ಬಂದಿದ್ದರಿಂದ ಅವನನ್ನು ಎಸ್‌ಐಟಿಯವರು ಬಂಧಿಸಿ ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದು, 10 ದಿನ ವಶಕ್ಕೆ ಪಡೆದಿರುವ ಪೊಲೀಸರು ಆತನಿಂದ ಸತ್ಯಾಸತ್ಯತೆಯನ್ನು ಹೊರಗೆ ತೆಗೆಯಲಿದ್ದಾರೆ. ತನಿಖೆಯ ನಂತರ ಸತ್ಯಾಂಶ ಹೊರಬರುವುದು,

(2ನೇ ಪುಟ ನೋಡಿ)

## ಮಳೆ ಹಾನಿ ಪ್ರದೇಶಗಳಿಗೆ ಸಚಿವರ ಭೇಟಿ; ಸರ್ವೆ ಮಾಡಿ ವರದಿ ಸಲ್ಲಿಸಲು ಸೂಚನೆ: ಸಚಿವ ರಹೀಂ ಖಾನ್



ಮಲ್ಲಮ್ಮ ನುಡಿ ವಾರ್ತೆ ಬೀದರ, ಅ.23 : ಜಿಲ್ಲೆಯಲ್ಲಿ ಇತ್ತೀಚಿಗೆ ಸುಳಿದ ಮಳೆಯಿಂದ ಹಾನಿಗಿಡಾದ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸರ್ವೆ ಮಾಡಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಹಜ್ ಮತ್ತು ಪೌರಾಡಳಿತ ಸಚಿವ ರಹೀಂ ಖಾನ್ ಸೂಚನೆ ನೀಡಿದರು.

(2ನೇ ಪುಟ ನೋಡಿ)

## ಬೇಜವಾಬ್ದಾರಿ ಎಪಿಎಂಸಿ ಅಧಿಕಾರಿಗಳ ಅಮಾನತ್ತಿಗೆ ಸಚಿವ ಶಿವಾನಂದ ಪಾಟೀಲ್ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.23: ಅಭಿವೃದ್ಧಿ ಯೋಜನೆಗಳ ಅನುಷ್ಠಾನದಲ್ಲಿ ನಿರ್ಲಕ್ಷ್ಯತೋರುವ ಹಾಗೂ ವಿಳಂಬ ನೀತಿ ಅನುಸರಿಸುವ ಎಪಿಎಂಸಿ ಅಧಿಕಾರಿಗಳನ್ನು ಅಮಾನತು ಮಾಡಿ ಎಂದು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಅವರು ಹಿರಿಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕೃಷಿ ಮಾರುಕಟ್ಟೆ ಇಲಾಖೆ ಸಭಾಂಗಣದಲ್ಲಿ ಶನಿವಾರ ನಾಲ್ಕು ಕಂದಾಯ ವಿಭಾಗಗಳ

(2ನೇ ಪುಟ ನೋಡಿ)

## ಮುಸುಕುಧಾರಿ ಹಿಂದಿರುವ ಜಾಲ ಪತ್ತೆ : ಪರಮೇಶ್ವರ್

ಮಲ್ಲಮ್ಮನುಡಿವಾರ್ತೆ ಮಂಗಳೂರು/ ಉಡುಪಿ:ಅ.23:ಧರ್ಮಸ್ಥಳ ಗ್ರಾಮದಲ್ಲಿ ನೂರಾರು ಶವಗಳನ್ನು ಹೂತಿಟ್ಟ ಪ್ರಕರಣದಲ್ಲಿ ಮುಸುಕುಧಾರಿ ಬಂಧನ ಆಗಿರುವುದಾಗಿ ಗೃಹ ಸಚಿವ ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಮಾಸ್ಕ್‌ಮ್ಯಾನ್ ಬಂಧನ ಆಗಿರುವುದು ನಿಜ. ಆತ ಪೊಲೀಸ್ ಕಸ್ಟಡಿಯಲ್ಲಿ ಇದ್ದಾನೆ. ತನಿಖೆ ಪೂರ್ಣಗೊಳ್ಳುವವರೆಗೆ ಯಾವುದೇ ಮಾಹಿತಿ ನೀಡಲು ಸಾಧ್ಯವಿಲ್ಲ. ಅಧಿಕಾರಿಗಳು ತನಿಖೆ ಮುಂದುವರಿಸುತ್ತಾರೆ. ಹೆಚ್ಚಿನ ಮಾಹಿತಿ ಎಸ್‌ಐಟಿಯಿಂದ ಪಡೆಯುತ್ತೇನೆ. ಇದರ ಹಿಂದೆ ಯಾವ ಜಾಲ ಇದೆ ಅನ್ನುವುದನ್ನು ಪತ್ತೆ ಮಾಡಲಾಗುವುದು ಎಂದು ಹೇಳಿದರು. ಎಸ್‌ಐಟಿ ತನಿಖೆಯ ಮುಕ್ತಾಯ ಆಗುತ್ತಾ ಅಂತ ಹೇಳಲು ಬರುವುದಿಲ್ಲ. ಜೊತೆಗೆ ಬಂಧಿತನಿಗೆ ಮಂಪರು ಪರೀಕ್ಷೆ ಮಾಡಬೇಕಾ?



ಬೇಡವಾ ಅನ್ನೋದು ಎಸ್‌ಐಟಿ ನಿರ್ಧಾರ ಮಾಡುತ್ತೆ. ಅಲ್ಲದೇ ಸುಜಾತ ಭಟ್ ವಿಚಾರ ಕೂಡ ತನಿಖೆಯಲ್ಲಿದೆ. ತನಿಖೆಯ ವರದಿಗಳು ಬರುವವರೆಗೆ ಬಹಿರಂಗಪಡಿಸಲು ಸಾಧ್ಯವಿಲ್ಲ. ಯಾವುದೇ ವಿಚಾರ ಬಹಿರಂಗಗೊಂಡರೆ ಎಸ್‌ಐಟಿ ತನಿಖೆಗೆ ಅಡ್ಡಿಯಾಗುತ್ತದೆ. ಯಾವುದನ್ನೂ ಈಗ ಬಹಿರಂಗಪಡಿಸಲು ಸಾಧ್ಯವಿಲ್ಲ ಎಂದರು. ಬಿಜೆಪಿಯವರು ಅನೇಕ

(2ನೇ ಪುಟ ನೋಡಿ)

## ಭಾಲ್ಕಿ ಶ್ರೀಮಠದಿಂದ ಕನ್ನಡದ ಸಂರಕ್ಷಣೆ



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಅ.23:ಗಡಿಭಾಗದಲ್ಲಿ ವಚನ ಸಾಹಿತ್ಯ ಮತ್ತು ಕನ್ನಡ ಭಾಷೆಯ ಸಂರಕ್ಷಣೆಯಲ್ಲಿ ಹಿರೇಮಠ ಸಂಸ್ಥಾನದ ಕೊಡುಗೆ ಅನನ್ಯವಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಹೇಳಿದರು. ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಅಮೃತ ಮಹೋತ್ಸವ ಸ್ವಾಗತ ಸಮಿತಿ ವತಿಯಿಂದ ಶನಿವಾರ ಆಯೋಜಿಸಿದ್ದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ನಡೆದು ಬಂದ ದಾರಿ ರಾಷ್ಟ್ರೀಯ

(2ನೇ ಪುಟ ನೋಡಿ)

## ಮಾದಕ ಗಾಂಜಾ ವಶ: ನಾಲ್ವರ ಬಂಧನ



ಮಲ್ಲಮ್ಮ ನುಡಿವಾರ್ತೆ ಕೊಪ್ಪಳ :ಅ.23: ಸಾರ್ವಜನಿಕ ಸ್ಥಳಗಳಲ್ಲಿ ಗಾಂಜಾ ಮಾರಾಟ ಮಾಡುತ್ತಿದ್ದವರ ಮೇಲೆ ದಾಳಿ ನಡೆಸಿ ನಾಲ್ವರು ಆರೋಪಿಗಳನ್ನು

(2ನೇ ಪುಟ ನೋಡಿ)

## ಟೆರಟೋಮಾ ಗಡ್ಡೆ ತೆಗೆದು ವಿಶೇಷ ಸಾಧನೆ ತೋರಿದ ರಾಯಚೂರು ತಾಯಿ ಮಕ್ಕಳ ಆಸ್ಪತ್ರೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 23 : ರಾಯಚೂರು ತಾಯಿ ಮಕ್ಕಳ ಆಸ್ಪತ್ರೆಯು ವರ್ಷದಲ್ಲಿ ದಾಖಲೆಯ 1203 ಹೆರಿಗೆ ಮಾಡಿಸಿ ಕೀರ್ತಿ ತೋರಿದ ಬೆನ್ನಲ್ಲೇ ಇಲ್ಲಿನ ತಜ್ಞರ ತಂಡವು ಟೆರಟೋಮಾ ಗಡ್ಡೆ ತೆಗೆದು ವಿಶೇಷ ಸಾಧನೆ ಮಾಡಿದೆ.ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಳೆದ ವರ್ಷ ಆರಂಭಿಸಿದ ರಾಯಚೂರು ತಾಯಿ ಮಕ್ಕಳ ಆಸ್ಪತ್ರೆಯ ಪ್ರಸೂತಿ ಹಾಗೂ ಅರವಳಿಕೆ ತಜ್ಞರ ತಂಡವು ಸುಸಜ್ಜಿತ ವೈದ್ಯಕೀಯ ಸೌಲಭ್ಯಗಳೊಂದಿಗೆ ಶಸ್ತ್ರಚಿಕಿತ್ಸಾ ಹಾಗೂ ಸರಳ ಹೆರಿಗೆಗಳನ್ನು ಸುಲಲಿತವಾಗಿ ನಿರ್ವಹಿಸುವ ಜೊತೆಗೆ ಹೆರಿಗೆಗೆ ಆಗಮಿಸುವ ತಾಯಂದಿರರಲ್ಲಿ ಆಕಸ್ಮಿಕವಾಗಿ ಕಂಡು ಬರುವ ತಾಯಿಯ ಜೀವಕ್ಕೆ ಅಪಾಯವಾಗಬಹುದಾದ ಅಂಡಾಶಯ ಟೆರಟೋಮಾ ಗಡ್ಡೆಯನ್ನು ಯಶಸ್ವಿಯಾಗಿ ಶಸ್ತ್ರಚಿಕಿತ್ಸೆ ಮೂಲಕ ಹೊರಗೆದು ತಾಯಿ ಆರೈಕೆಗೆ ಕೈಜೊಡಿಸಿದೆ.

ಇದೆ ತಿಂಗಳು ತಾಯಿ ಮಕ್ಕಳ ಆಸ್ಪತ್ರೆಗೆ ತಮ್ಮ ಎರಡನೇ ಹೆರಿಗೆಗೆಂದು ಆಗಮಿಸಿದ 23 ವರ್ಷದ ಮಹಿಳೆಯನ್ನು

(2ನೇ ಪುಟ ನೋಡಿ)

# ಒಂದನೇ ಪುಟದಿಂದ

## ಜಾತ್ರಾ ಮಹೋತ್ಸವ

ಅನ್ನದಾಸೋಹ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು.

ಈ ಸಂದರ್ಭದಲ್ಲಿ ಜಿಪಂ. ಮಾಜಿ ಉಪಾಧ್ಯಕ್ಷ ಪ್ರಕಾಶ ಪಾಟೀಲ್, ಸಂಭಾಜಿ ಪಾಟೀಲ್, ರಾಜಕುಮಾರ ಪಾಟೀಲ್, ರಂಜೀತ ಮಾನಕರೆ, ಜ್ಞಾನೇಶ್ವರ ಭೋಸ್ಲೆ, ಸಿದ್ಧಾರ್ಥ ಪರಾಂಜಪೆ, ವಿಷ್ಣು ಜಮಾದಾರ, ಸುಧಾಮ ಘಂಟೆ, ಮನೋಜಕುಮಾರ ಭೋಸ್ಲೆ, ಅಭಿಮನ್ಯು ನಿರಗುಡೆ, ಕಾಮರೆಡ್ಡಿ, ಗೋರಕ ಸಗರ, ಕುಮಾರ ಪಾಟೀಲ್, ಬಾಬುರಾವ ಜಾಧವ, ರತನ್ ಜಮಾದಾರ, ಗೋಪಾಲ ನಲ್ಲೆ, ಕೃಷ್ಣ ಘಂಟೆ, ಯೋಗೇಶ ಘಂಟೆ, ಮಾಣಿಕ ಜಮಾದಾರ, ಸಾಯಿ ಸೇರಿ ಅನೇಕರಿದ್ದರು.

**ದರ್ಶನ ಪಡೆದ ಎಂಎಲ್ಸಿ ಪಾಟೀಲ್**

ಶಂಕರಲಿಂಗ ದೇವರ ಜಾತ್ರಾ ಮಹೋತ್ಸವ ನಿಮಿತ್ತ ತಾಲೂಕಿನ ಘಾಟಬೋರಳ ಗ್ರಾಮದ ಐತಿಹಾಸಿಕ ಶಂಕರಲಿಂಗ ದೇವಸ್ಥಾನದಲ್ಲಿ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ವಿಶೇಷ ಪೂಜೆ ಸಲ್ಲಿಸಿ, ದರ್ಶನ ಪಡೆದರು.

**ಕುಸ್ತಿ ಪಂದ್ಯಾವಳಿ ಆಯೋಜನೆ**

ಜಾತ್ರಾ ಮಹೋತ್ಸವ ನಿಮಿತ್ತ ತಾಲೂಕಿನ ಘಾಟಬೋರಳ ಗ್ರಾಮದ ಶಂಕರಲಿಂಗ ದೇವಸ್ಥಾನದ ಆವರಣದಲ್ಲಿ ಶನಿವಾರ ರೋಚಕ ಕುಸ್ತಿ ಪಂದ್ಯಾವಳಿ ನಡೆಯಿತು.

ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ಅವರು ಕುಸ್ತಿ ಪಂದ್ಯಾವಳಿ ವೀಕ್ಷಿಸಿದರು. ಪಂದ್ಯಾವಳಿಯಲ್ಲಿ ಭಾಗವಹಿಸಿದ ಕುಸ್ತಿ ಪಟುಗಳ ಪ್ರತಿಭೆ ನೋಡುಗರರ ಗಮನ ಸೆಳೆಯಿತು.

## ಶ್ರೀಮಠದಿಂದ ಕನ್ನಡದ ಸಂರಕ್ಷಣೆ

ವಿಚಾರ ಸಂಕಿರಣ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ನಿಜಾಂನ ಆಳ್ವಿಕೆಯಲ್ಲಿ ಶತಾಯಿಷಿ ಡಾ.ಚನ್ನಬಸವ ಪಟ್ಟದ್ದೇವರು ಹೊರಗಡೆ ಉರ್ದು ಬೋರ್ಡ್ ಅಳವಡಿಸಿ ಒಳಗಡೆ ಕನ್ನಡ ಕಲಿಸಿ ಭಾಷೆಯ ಅಭಿಮಾನ ಮೆರೆದು ನಮ್ಮೆಲ್ಲರಿಗೂ ಸ್ಫೂರ್ತಿಯಾಗಿದ್ದಾರೆ. ಸ್ವತಂತ್ರ ಪೂರ್ವ ಮತ್ತು ನಂತರದಲ್ಲಿ ಶಿಕ್ಷಣ ಸಂಸ್ಥೆ ಕಟ್ಟಿ ಈ ಭಾಗವನ್ನು ಬೆಳಗಿಸುವ ಕೆಲಸ ಮಾಡಿದ್ದಾರೆ. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಕೂಡ ತಮ್ಮ ಹಿರಿಯ ಪೂಜ್ಯರ ದಾರಿಯಲ್ಲಿ ನಡೆದು ಬಡವರು, ದುರ್ಬಲ ವರ್ಗದವರಿಗೆ ಅನ್ನ, ಅಕ್ಷರ, ಆಶ್ರಯ ಕಲ್ಪಿಸಿ ಆದರ್ಶಪ್ರಾಯವಾಗಿದ್ದಾರೆ. ವಚನ ಸಾಹಿತ್ಯವನ್ನು ಜನಮಾನಸಕ್ಕೆ ತಲುಪಿಸುವ ಕಾರ್ಯ ಮಾಡುತ್ತಿರುವುದು ನಮ್ಮೆಲ್ಲರಿಗೆ ಹೆಮ್ಮೆ ತರಿಸಿದೆ ಎಂದರು.

ವಚನ ಸಾಹಿತ್ಯದಲ್ಲಿ ಅದ್ಭುತ ಶಕ್ತಿ ಅಡಗಿದೆ. ದೇವರಿಗೆ ಕನ್ನಡ ಭಾಷೆ ಕಲಿಸಿದ ಹಿರಿಮೆ 12ನೆಯ ಶತಮಾನದ ವಚನಕಾರರಿಗೆ ಸಲ್ಲುತ್ತದೆ. ಇಂದಿನ 21ನೆಯ ಶತಮಾನಕ್ಕೆ ವಚನ ಸಾಹಿತ್ಯ ಮಾರ್ಗದರ್ಶನವಾಗಬೇಕಿದೆ ರಾಜ್ಯದಲ್ಲಿ ಅನ್ಯ ಭಾಷೆಗಳ ಹಾವಳಿ ಹೆಚ್ಚಿದೆ ಕನ್ನಡ ಭಾಷೆ ದಯನೀಯ ಸ್ಥಿತಿಗೆ ತಲುಪಿದೆ. ಇದು ಹೀಗೆ ಮುಂದುವರೆದರೇ ಮುಂದಿನ ಎರಡ್ಮೂರು ದಶಕಗಳಲ್ಲಿ ಕನ್ನಡ ಕೇವಲ ಮಾತನಾಡುವ ಭಾಷೆಯಾಗಿ ಉಳಿಯಲಿದೆ ಎಂದು ಆತಂಕ ವ್ಯಕ್ತ ಪಡಿಸಿದರು.

ದೇಶದಲ್ಲಿ ಇದು ವರೆಗೂ 250 ಭಾಷೆಗಳು ಅಸ್ತಿತ್ವ ಕಳೆದು ಕೊಂಡಿವೆ. ಅನ್ಯ ಭಾಷೆಗಳು ವೇಗವಾಗಿ ಬೆಳೆಯುತ್ತಿವೆ. ರಾಜ್ಯದಲ್ಲಿ ಆಂಗ್ಲ ಶಾಲೆಗಳಿಗೆ ಹೆಚ್ಚು ಆದ್ಯತೆ ನೀಡಲಾಗುತ್ತಿದೆ. ಇದರಿಂದ ಕನ್ನಡ ಭಾಷೆ ಬೆಳವಣಿಗೆ ಕುಸಿಯುತ್ತಿದೆ. ಹಾಗಾಗಿ ಕನ್ನಡ ಭಾಷೆ ಉಳಿಯಬೇಕಾದರೇ ಸರಕಾರ ರಾಜ್ಯ ಶಿಕ್ಷಣ ನೀತಿ ತರುವ ಕೆಲಸ ಮಾಡಬೇಕಿದೆ. ಈ ನಿಟ್ಟಿನಲ್ಲಿ ಪೂಜ್ಯರು ಕೂಡ ರಾಜ್ಯ ಶಿಕ್ಷಣ ನೀತಿ ಜಾರಿಗೆ ತರಲು ಧ್ವನಿಯೆತ್ತಬೇಕು ಎಂದು ತಿಳಿಸಿದರು.

ನವದೆಹಲಿ ಸೂರ್ಯ ಫೌಂಡೇಶನ್ ಅಧ್ಯಕ್ಷ ಅನಂತ ಬಿರಾದಾರ್ ಅಧ್ಯಕ್ಷತೆ ವಹಿಸಿದ್ದರು.

ಕಲಬುರಗಿಯ ಹಿರಿಯ ಸಾಹಿತಿ ಡಾ.ಕಲ್ಯಾಣರಾವ ಪಾಟೀಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಸಾನ್ನಿಧ್ಯ ವಹಿಸಿದ್ದರು.

ಈ ಸಂದರ್ಭದಲ್ಲಿ ಮಾಣಿಕನಗರ ಮಾಣಿಕಪ್ರಭು ಸಂಸ್ಥಾನದ ಆನಂದ ಮಹಾರಾಜರು, ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ನಿರ್ದೇಶಕಿ ಡಾ.ಗೀತಾ ಈಶ್ವರ ಖಂಡ್ರೆ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಸಂತೋಷ ಹಾನಗಲ್, ಜಿಲ್ಲಾ ಕಸಾಪ ಅಧ್ಯಕ್ಷ ಸುರೇಶ ಚನ್ನಶೆಟ್ಟಿ, ಗುರುನಾನಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ರೇಷ್ಮಾ ಕೌರ, ಹಿರಿಯ ಸಾಹಿತಿ ಜಗನ್ನಾಥ ಹೆಬ್ಬಾಳೆ ಸೇರಿದಂತೆ ಹಲವರು ಇದ್ದರು.

ಆಕಾಶವಾಣಿ, ದೂರದರ್ಶನ ಕಲಾವಿದ ನವಲಿಂಗ ಪಾಟೀಲ್ ನಿರೂಪಿಸಿದರು. ರಾಜು ಜುಬರೆ ವಂದಿಸಿದರು.

ಬಸವಲಿಂಗ ಪಟ್ಟದ್ದೇವರು ಶರಣ ತತ್ವದ ಕುಸುಮ

ಗಡಿಭಾಗದಲ್ಲಿ ಸರ್ವ ಸಮಾನತೆಯನ್ನು ಸ್ಥಾಪಿಸಲು ದಿಟ್ಟ ಹೆಜ್ಜೆಯನ್ನಿಟ್ಟ ಮಠ ಭಾಲ್ಕಿಯ ಹಿರೇಮಠ. ಇದರ ಹಿರಿಯ ಸ್ವಾಮೀಜಿ ಆಗಿರುವ ಬಸವಲಿಂಗ ಪಟ್ಟದ್ದೇವರು ಶರಣ ತತ್ವದ ಕುಸುಮ ಆಗಿದ್ದಾರೆ ಎಂದು ಸಾಹಿತಿ ಸೋಮನಾಥ ಯಾಳವಾರ ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಅನುಭವ ಮಂಟಪದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ನಡೆದ ಶ್ರೀಗಳ ಜೀವನ ಸಾಧನೆ ಗೋಷ್ಠಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾಗಿದ್ದು ಬಾಗುತ್ತದೆ ಎಂಬ ಮಾತಿಗೆ ಪರಿಪೂರ್ಣ ಹೋಲಿಕೆ ಆಗುವವರು ಪಟ್ಟದ್ದೇವರು. ಓದಿದವರು ದಣಿಯುವಷ್ಟು, ತಣಿಯುವಷ್ಟು ಸಾಧನೆಯನ್ನು ಬಸವಲಿಂಗ ಪಟ್ಟದ್ದೇವರು ಮಾಡಿದ್ದಾರೆ ಎಂದು ತಿಳಿಸಿದರು.

ಕಲಬುರಗಿಯ ಪ್ರಗತಿಪರ ಚಿಂತಕ ಆರ್.ಕೆ,ಹುಡುಗಿ ಮಾತನಾಡಿ, ಮಾತೃ ಭಾಷೆಯ ಬಗ್ಗೆ ನಮಗೆ ಅಪಾರ ಗೌರವ, ಪ್ರೀತಿ ಇರಬೇಕು. ಕನ್ನಡ ಭಾಷೆ ನಮ್ಮ ತಾಯಿ ಆಗಿರಬೇಕು. ಇಂಗ್ಲಿಷ ನಮ್ಮ ಗೆಳತಿ ಆಗಿರಬೇಕು. ಚನ್ನಬಸವ ಪಟ್ಟದ್ದೇವರು ಇದ್ದದ್ದಕ್ಕಾಗಿಯೇ ಬಸವಲಿಂಗ ಪಟ್ಟದ್ದೇವರು ನಮ್ಮ ಮಧ್ಯದಲ್ಲಿ ಇದ್ದಾರೆ ಎಂದು ತಿಳಿಸಿದರು.

ಪತ್ರಕರ್ತ ಸಿದ್ದಪ್ಪ ಮೂಲಗೆ ಮಾತನಾಡಿ, ಜನಮುಖಿಯಾಗಿ ಬಾಳುತ್ತಿರುವ ಕೆಲವೇ ಕೆಲವು ಮಠಾಧೀಶರಲ್ಲಿ ಬಸವಲಿಂಗ ಪಟ್ಟದ್ದೇವರು ಒಬ್ಬರು. ಬಸವಲಿಂಗ ಪಟ್ಟದ್ದೇವರು ಮಠದ ಆಸ್ತಿಯನ್ನು ಕರಗಿಸದೆ, ಕಪ್ಪುಚುಕ್ಕೆ ಇಲ್ಲದೆ ಬದುಕಿರುವ ರೀತಿ ಅವರ್ಣನೀಯ. ಇವರು ಸಾಕಷ್ಟು ನೋವು, ಅಪಮಾನ, ಬಡತನವನ್ನು ಅನುಭವಿಸಿ ಮಠವನ್ನು ಬೆಳೆಸಿರುವ ರೀತಿ ಮಾದರಿ ಆಗಿದೆ ಎಂದು ತಿಳಿಸಿದರು.

ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷೆ ಭಾರತಿ ವಸ್ತ್ರದ, ದಾಸ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಬಾಲಾಜಿ ಅಮರವಾಡಿ ಇದ್ದರು.

ಬಸವತತ್ವವನ್ನು ಎಲ್ಲೆಡೆ ಪಸರಿಲು ಪಟ್ಟದ್ದೇವರು ಮಾಡುತ್ತಿರುವ ಕಾರ್ಯ ಪ್ರಶಂಸನೀಯ

ಕನ್ನಡ ಬಾರದ ತೆಲುಗು ನಿವಾಸಿಗಳಿಗಾಗಿ ಬಸವಲಿಂಗ ಪಟ್ಟದ್ದೇವರು ಬಸವಣ್ಣನವರ ವಚನಗಳನ್ನು ಅನುವಾದಿಸುವ ಮೂಲಕ, ತಾವು ಬರೆದ ಮತ್ತು ಇತರರ ಅನೇಕ ಮೌಲಿಕ ಕೃತಿಗಳನ್ನು ತೆಲುಗು ಭಾಷೆಗೆ ಅನುವಾದಿಸುವ ಮುಖಾಂತರ ಬಸವತತ್ವವನ್ನು ಎಲ್ಲೆಡೆ ಪಸರಿಸುವ ಕಾರ್ಯ ಮಾಡುತ್ತಿದ್ದಾರೆ ಎಂದು ಹೈದರಾಬಾದ್ ಉಸ್ಮಾನಿಯಾ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥ ಲಿಂಗಣ್ಣ ಗೊನಾಳ ಹೇಳಿದರು.

ಬಸವತತ್ವ ಸಾರ್ವಕಾಲಿಕತೆಗೊಳಿಸುವಲ್ಲಿ ಬಸವಲಿಂಗ ಪಟ್ಟದ್ದೇವರ ಕೊಡುಗೆಯ 2ನೇ ಗೋಷ್ಠಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶರಣರ ಚಿಂತನೆಗಳನ್ನು ಜನರಿಗೆ ಪರಿಣಾಮಕಾರಿಯಾಗಿ ಮುಟ್ಟಿಸುವ ನಿಟ್ಟಿನಲ್ಲಿ ಪ್ರವಚನ, ನಾಟಕ, ಬಸವ ಸಂದೇಶ ಯಾತ್ರೆಯ ಮೂಲಕ ಅವಿರತ ಪ್ರಯತ್ನ ಮಾಡುತ್ತಿರುವ ರೀತಿ ಅದ್ಭುತ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಧಾರವಾಡದ ಪ್ರಗತಿಪರ ಚಿಂತಕ ಸಿದ್ದನಗೌಡ ಪಾಟೀಲ ಮಾತನಾಡಿ, ಬಸವಣ್ಣ ಜಾತಿ ವ್ಯವಸ್ಥೆಯನ್ನು ತೊಲಗಿಸಿ ಸಮ ಸಮಾಜವನ್ನು ನಿರ್ಮಿಸಲು ಶ್ರಮಿಸಿದ್ದ ಮಹಾನ್ ದಾರ್ಶನಿಕ. ವೈದಿಕ ಚಿಂತನೆ, ಆಚರಣೆಗಳಿಗೆ ಪರ್ಯಾಯ ಧರ್ಮವೇ ಶರಣ ಧರ್ಮ. ಲಿಂಗಾಯತ ಧರ್ಮ ಹುಟ್ಟಲೇ ಇಲ್ಲ ಎಂದು ಬಿಂಬಿಸುವ ಹುನ್ನಾರ ನಡಿಯುತ್ತಿದೆ ಎಂದು ಹೇಳಿದರು.

ಲಾತೂರ್‌ನ ಪ್ರಗತಿಪರ ಚಿಂತಕ ರಾಜಶೇಖರ ಸೋಲಾಪೂರೆ ಉಪನ್ಯಾಸ ಮಾಡಿದರು.

ಬೀದರ್ ಜಿಲ್ಲಾ ದಲಿತ ಸಾಹಿತ್ಯ ಪರಿಷತ್ ಅಧ್ಯಕ್ಷ ಎಸ್.ಎಂ.ಜನವಾಡಕರ್, ಶರಣ ಸಾಹಿತ್ಯ ಪರಿಷತ್ ಜಿಲ್ಲಾಧಕ್ಷ ಶಂಭುಲಿಂಗ ಕಾಮಣ್ಣ, ಆದಿವಾಸಿ ಸಾಹಿತ್ಯ ಪರಿಷತ್ ಜಿಲ್ಲಾಧಕ್ಷ ವಿಜಯಕುಮಾರ ಡುಮ್ಮೆ, ಸಾಂಗ್ಲಿಯ ಸುಭಾಷ ಪಾಟೀಲ, ಉಮರ್ಗಾದ ಬಸವತತ್ವ ಪ್ರಸಾಕರು ಜವಾಹರ ಚನಶೆಟ್ಟಿ ಇದ್ದರು. ಲಕ್ಷ್ಮಣ ಮೇತ್ರೆ ನಿರೂಪಿಸಿದರು.

## ಸರ್ವೆ ಮಾಡಿ ವರದಿ ಸಲ್ಲಿಸಲು ಸೂಚನೆ: ಸಚಿವ ರಹೀಂ ಖಾನ್

ಅವರು ಶನಿವಾರ ಬೀದರ ತಾಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಹಾನಿಗಿಡಾದ ಮನೆ, ರಸ್ತೆ, ಬೆಳೆ ಮುಂತಾದವುಗಳನ್ನು ಪರಿಶೀಲನೆ ನಡೆಸಿದರು.

ಮಾಲೆಗಾಂವ್ ಸರ್ಕಲ್, ಜನವಾಡ ಸರ್ಕಲ್ ಗಳ ಹಳ್ಳಿಗಳಾದ ಮಾಲೆಗಾಂವ್, ಚಿಲ್ಲರ್ಗಿ, ಗಾದಗಿ, ಯರನಳ್ಳಿ ಮತ್ತು ಸಾಂಗ್ವಿ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿ,

ಜಿಲ್ಲೆಯಲ್ಲಿ ಸಾಮಾನ್ಯ ಮಳೆಗಿಂತ ಮೂರು ಪಟ್ಟು ಹೆಚ್ಚಾಗಿದ್ದು, ಅನೇಕ ರೀತಿಯ ಸಮಸ್ಯೆಗಳನ್ನು ಸೃಷ್ಟಿಸಿದೆಂದರು. ತೀವ್ರ ಹಾನಿಗಿಡಾದ ಮನೆಗಳಿಗೆ ತಕ್ಷಣ 7 ರಿಂದ 10 ಸಾವಿರ ನೀಡಲಾಗುತ್ತಿದೆ. ನಂತರ ಸರ್ವೆ ಕೈಗೊಂಡು ಪೂರ್ಣ ಪರಿಹಾರ ನೀಡಲಾಗುವುದು. ಬೆಳೆಗಳ ಹಾನಿ ಬಗ್ಗೆ ಈಗಾಗಲೇ ಕೃಷಿ ಮತ್ತು ತೋಟಗಾರಿಕೆ ಇಲಾಖೆಯವರಿಗೆ ಸರ್ವೆ ಮಾಡಲು ಸೂಚನೆ ನೀಡಲಾಗಿದೆ ಎಂದರು.

ತಾವು ಕೂಡ ಮುಖ್ಯಮಂತ್ರಿಗಳಿಗೆ, ಕೃಷಿ ಮತ್ತು ತೋಟಗಾರಿಕೆ ಹಾಗೂ

ಜಿಲ್ಲಾ ಉಸ್ತುವಾರಿ ಸಚಿವರಿಗೆ ಆದಂತೆ ಹಾನಿಯ ಬಗ್ಗೆ ತಿಳಿಸಲಾಗಿದೆ. 100 ರಿಂದ 200 ಕೋಟಿ

ಪರಿಹಾರ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ ಎಂದರು.

ಚಿಲ್ಲರ್ಗಿಯಲ್ಲಿ 7 ಮನೆ, ಗಾದಗಿಯಲ್ಲಿ 5 ಮನೆ, ಹಮಿಲಾಪೂರನಲ್ಲಿ 6 ಮನೆಗಳು ಹಾನಿಯಾಗಿದ್ದು ಮತ್ತು ರೈತ ಬೆಳೆಗಳಾದ ಹೆಸರು, ಉದ್ದು, ಹೆಚ್ಚು ಹಾನಿಗೆ ಒಳಗಾಗಿದ್ದು, ಸರ್ವೆ ಮಾಡಿ ಪರಿಹಾರ ನೀಡಲಾಗುವುದು ಎಂದರು.ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ

ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ, ಬೀದರ ಸಹಾಯಕ ಆಯುಕ್ತ ಮೊಹಮದ್ ಶಕೀಲ್, ಕೃಷಿ ಇಲಾಖೆ ಜಂಟಿ ನಿರ್ದೇಶಕರಾದ ದೇವಿಕಾ, ಬೀದರ ತಹಸಿಲ್ದಾರ್ ರವೀಂದ್ರ ಧಾಮಾ, ಬೀದರ ತಾಲೂಕು ಪಂಚಾಯತ್ ಇಓ ಮಾಣಿಕರಾವ ಪಾಟೀಲ, ಕೃಷಿ ಇಲಾಖೆ ಉಪ ನಿರ್ದೇಶಕರಾದ ಇಕ್ಬಾಲ್ ಅನ್ಸಾರಿ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಗಾಂಜಾ ವಶ: ನಾಲ್ವರ ಬಂಧನ

ಕೊಪ್ಪಳ ಗ್ರಾಮೀಣ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಕೊಪ್ಪಳ ಗ್ರಾಮೀಣ ಪೊಲೀಸ್ ಠಾಣೆಯ ತಂಡ ಖಚಿತ ಮಾಹಿತಿಯ ತಾಲೂಕಿನ ಇರಕಲಗಡ ಗ್ರಾಮದ ಮನೆಯೆಂದರ ಮೇಲೆ ದಾಳಿ ನಡೆಸಿದ್ದು ದಾಳಿಯ ವೇಳೆ ಗಾಂಜಾ ದೊರಕಿದ್ದು ವಶಪಡಿಸಿಕೊಂಡಿರುತ್ತಾರೆ

ಆರೋಪಿತರು ತಾಲೂಕಿನ ಇರಕಲಗಡ ಗ್ರಾಮದವರು ಎಂಬ ಮಾಹಿತಿ ದೊರೆತಿದ್ದು.ಗಾಂಜಾ ಮಾರಾಟಗಾರರ ಮೇಲೆ ದಾಳಿ ಮಾಡಿದ ಪೊಲೀಸರು ನಿಂಗಪ್ಪ ಗುರಿಕಾರ(50), ಮಾರುತಿ ಗುರಿಕಾರ (26), ರವಿ ಗುರಿಕಾರ (20), ನಾಗಪ್ಪ ಕುದುರಿಮೋತಿ (38 ) ಎಂಬ ನಾಲ್ವರು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ತಿಳಿಸಿದ್ದಾರೆ.

ದಾಳಿ ಮಾಡಿದ ಸಂದರ್ಭದಲ್ಲಿ ಇವರ ಬಳಿ ಇದ್ದ ಸುಮಾರು 25,200 ರೂ. ಬೆಲೆ ಬಾಳುವ 630 ಗ್ರಾಂ ಗಾಂಜಾ ಮತ್ತು 15 ಗಂಜಾ ಗಿಡದ ಸಸಿಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಈ ಕುರಿತು ಪೊಲೀಸರು ಕೊಪ್ಪಳ ಗ್ರಾಮೀಣ ಠಾಣೆಯಲ್ಲಿ ಗುನ್ನೆ 149/2025 ಕಲಂ: 20 [ಛ] [ಐ] [೦], ಓಆಕಖ ೦ಥಿಣ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

## ಸಚಿವ ಶಿವಾನಂದ ಪಾಟೀಲ್ ಸೂಚನೆ

ಎಪಿಎಂಸಿ ಅಧಿಕಾರಿಗಳ ಸಭೆ ನಡೆಸಿದ ಸಚಿವರು, ನಿಗದಿತ ಕಾಲಮಿತಿಯಲ್ಲಿ ಯೋಜನೆಗಳನ್ನು ಪೂರ್ಣಗೊಳಿಸದ ಅಧಿಕಾರಿಗಳ ವರ್ತನೆಗೆ ಬೇಸರ ವ್ಯಕ್ತಪಡಿಸಿದರು.

ಮೂಲ ಸೌಕರ್ಯ ನಿರ್ಮಾಣ ಮತ್ತು ಕೋಲ್ಡ್ ಸ್ಟೋರೇಜ್ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು, ಒಂದು ವಾರದಲ್ಲಿ ಮತ್ತೆ ಸಭೆ ಕರೆಯಲಿದ್ದು, ಇದುವರೆಗೆ ನಬಾರ್ಡ್, ಐಆರ್‌ಡಿಎಫ್ ನಿಂದ ಎಷ್ಟು ನೆರವು ಲಭ್ಯವಾಗಿದೆ. ಈ ನೆರವು ಮತ್ತು ಎಪಿಎಂಸಿ ಅನುದಾನದಲ್ಲಿ ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ. ಅವುಗಳ ಸ್ಥಿತಿಗತಿ ಏನು? ಯಾವ ಯೋಜನೆಗಳು ಅಗತ್ಯವಿಲ್ಲ ಎಂಬ ಬಗ್ಗೆ ವರದಿ ಕೊಡಿ ಎಂದು ಸೂಚನೆ ನೀಡಿದರು.

ಏಳು ಹೊಸ ಎಪಿಎಂಸಿಗಳು ಅಸ್ತಿತ್ವಕ್ಕೆ ಬಂದಿವೆ. ಹೊಸ ಎಪಿಎಂಸಿಗಳನ್ನು ಹೊರತುಪಡಿಸಿ ಇತರ ಎಪಿಎಂಸಿಗಳಲ್ಲಿ ಇದುವರೆಗೆ ಏಕೆ ಮೂಲ ಸೌಕರ್ಯ ನಿರ್ಮಿಸಿಲ್ಲ. ರಸ್ತೆ, ಚರಂಡಿ ಮತ್ತು ಫ್ಲಾಟ್‌ಫಾರ್ಮಗಳು ಅಗತ್ಯವಿದ್ದು, ಯಾವ ಯಾವ ಎಪಿಎಂಸಿಗಳಲ್ಲಿ ಮೂಲಸೌಕರ್ಯ ಇದುವರೆಗೆ ಆಗಿಲ್ಲ ಎಂದು ಪ್ರಶ್ನಿಸಿದರು. ಕಾಂಕ್ರೀಟ್ ರಸ್ತೆಗಳನ್ನು ಮಳೆಗಾಲದ ಸಮಯದಲ್ಲೇ ನಿರ್ಮಾಣ ಮಾಡುವುದು ಸೂಕ್ತ. ವಿಳಂಬಕ್ಕೆ ಮಳೆಗಾಲದ ನೆಪ ನೀಡಬೇಡಿ ಎಂದರು.

ಅನುದಾನ ಲಭ್ಯ ಇದೆ ಎಂಬ ಕಾರಣಕ್ಕೆ ಗೋಡೌನ್‌ಗಳನ್ನು ನಿರ್ಮಾಣ ಮಾಡಬೇಡಿ. ಬಹುತೇಕ ಎಪಿಎಂಸಿಗಳಲ್ಲಿ ಗೋಡೌನ್‌ಗಳು ಖಾಲಿ ಇವೆ. ಇಂತಹ ಗೋಡೌನ್‌ಗಳನ್ನು ಕಡಿಮೆ ದರದಲ್ಲಿ ಬಾಡಿಗೆ ಕೊಡುತ್ತಿದ್ದೇವೆ. ಅಗತ್ಯ ಇರುವ ಕಾಮಗಾರಗಳನ್ನು ಮಾತ್ರ ಕೈಗೊಳ್ಳಬೇಕು ಎಂದು ಸೂಚಿಸಿದರು.

ಎಲ್ಲ ವಿಭಾಗಗಳಲ್ಲಿ ಎಷ್ಟು ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಎಷ್ಟು ಟೆಂಡರ್ ಕರೆಯಲಾಗಿದೆ ಎಂಬ ಬಗ್ಗೆ ವರದಿ ಕೊಡಿ. ಅನುಮೋದನೆ ದೊರಕಿದ್ದರೂ ಅನಗತ್ಯ ಎಂದು ಕಂಡುಬಂದರೆ ಅಂತಹ ಕಾಮಗಾರಗಳನ್ನು ಸ್ಥಗಿತಗೊಳಿಸಿ, ಒಂದು ವೇಳೆ ಟೆಂಡರ್ ಆಗಿದ್ದರೆ ಮಾತ್ರ ಮುಂದುವರಿಸಿ ಎಂದು ಸೂಚಿಸಿದರು.

ಎಪಿಎಂಸಿಗಳ ಆಸ್ತಿ ರಕ್ಷಣೆ ಮಾಡುವುದು ಅಧಿಕಾರಿಗಳ ಜವಾಬ್ದಾರಿ, ಅನೇಕ ಕಟ್ಟಡಗಳು ನಿರ್ವಹಣೆ ಕೊರತೆಯಿಂದ ಹಾಳಾಗುತ್ತಿವೆ. ಎಪಿಎಂಸಿಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ನಾನೇ ಲೋಪ ಗುರುತಿಸಿ ಸೂಚನೆ ನೀಡಿದ್ದೇನೆ. ಕಟ್ಟಡಗಳ ಸಂರಕ್ಷಣೆ ಕಡೆಗೂ ಅಧಿಕಾರಿಗಳು ಗಮನ ನೀಡಬೇಕು ಎಂದು ಹೇಳಿದರು.

ಮುಂದಿನ ಸಭೆ ವೇಳೆಗೆ ಪ್ರತಿಯೊಂದು ಎಪಿಎಂಸಿಗಳ ವರದಿ ಬೇಕು. ಏನೇನು ಕೆಲಸ ಆಗಬೇಕಿದೆ? ಈಗ ಕೈಗೊಂಡಿರುವ ಕಾಮಗಾರಿಗಳು ಯಾವ ಕಾರಣಕ್ಕೆ ವಿಳಂಬವಾಗಿವೆ ಎಂಬ ಬಗ್ಗೆ ಸ್ಪಷ್ಟ ಮಾಹಿತಿ ನೀಡಬೇಕು. ಇದುವರೆಗೂ ಮೂಲ ಸೌಕರ್ಯಗಳನ್ನು ನಿರ್ಮಿಸಲು ಸಾಧ್ಯವಾಗಿಲ್ಲ ಎಂದರೆ ಹೇಗೆ ಎಂದು ಪ್ರಶ್ನಿಸಿದರು.

ಹೆಚ್ಚುವರಿ ನಿರ್ದೇಶಕಿ ಪುಷ್ಪಾ, ಜಂಟಿ ನಿರ್ದೇಶಕ ಶ್ರೀನಿವಾಸ ರೆಡ್ಡಿ, ಅಧೀಕ್ಷಕ ಅಭಿಯಂತರ ರಘುನಂದನ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ರೈತನನ್ನು ಎಳೆದೊಯ್ದ ಮೊಸಳೆ

ಘಟನೆ ಮುದ್ದೇಬಿಹಾಳದ ತಂಗಡಗಿ ಗ್ರಾ.ಪಂ ವ್ಯಾಪ್ತಿಯ ಕುಂಚಗನೂರ ಗ್ರಾಮದಲ್ಲಿ ನಡೆದಿದೆ

ಕುಂಚಗನೂರ ಗ್ರಾಮದ ಕಾಶೀನಾಥ ಹಣಮಂತ ಕಂಬಳಿ (38) ಮೊಸಳೆ ದಾಳಿಗೆ ಒಳಗಾದ ರೈತ. ಕಾಶಿನಾಥನನ್ನು ಮೊಸಳೆ ಹೊತ್ತೊಯ್ದಿದ್ದನ್ನು ನೋಡಿರುವುದಾಗಿ ಕುಂಚಗನೂರ ಗ್ರಾಮದ ಧರೆಪ್ಪ ಬಟಕುರ್ಕಿ ಅವರು ಮಾಹಿತಿ ನೀಡಿದ್ದಾರೆ.ಶನಿವಾರ (ಆ.23) ಅಮವಾಸ್ಯೆಯ ಹಿನ್ನೆಲೆ ಕಾಶೀನಾಥ ಅವರು ಎತ್ತುಗಳ ಮೈ ತೊಳೆಯಲು ಕೃಷ್ಣಾ ನದಿ ತೀರಕ್ಕೆ ತೆರಳಿದ್ದರು. ಈ ವೇಳೆ ರೈತನನ್ನು ಮೊಸಳೆ ಎಳದುಕೊಂಡು ಹೋಗಿದೆ. ಪೊಲೀಸರು, ಅಗ್ನಿಶಾಮಕ ದಳದ ಸಿಬ್ಬಂದಿಯಿಂದ ನಾಪತ್ತೆಯಾದ ರೈತನನ್ನು ಹುಡುಕುತ್ತಿದ್ದಾರೆ. ಕೂಡಲಸಂಗಮದಿಂದ ಬೋಟ್ ತರಿಸಿ ಶೋಧ ನಡೆಸಲಾಗುತ್ತಿದೆ.

## ತನಿಖೆಯಿಂದ ಬಯಲು:ರಾಮಲಿಂಗಾರೆಡ್ಡಿ

ಯಾರು ತಪ್ಪಿತಸ್ಥರೋ ಅವರಿಗೆ ಶಿಕ್ಷೆಯಾಗಲಿದೆ ಎಂದರು.ಬಿಜೆಪಿ ರಾಜ್ಯದ ಎಲ್ಲ ವಿಧಾನ ಸಭಾ ಕ್ಷೇತ್ರಗಳಲ್ಲಿ ಧರ್ಮಸ್ಥಳ ವಿರುದ್ದದ ಷಡ್ಯಂತ್ರ,ಪಿತೂರಿ ಖಂಡಿಸಿ ನಡೆಸುತ್ತಿರುವ ಪ್ರತಿಭಟನೆ ಬಗ್ಗೆ ಪ್ರತಿಕ್ರಿಯೆ ಕೇಳಿದಾಗ ಬಿಜೆಪಿಯವರು ಧರ್ಮ ರಕ್ಷಕರಲ್ಲ, ಕಾಂಗ್ರೆಸ್ ನವರು ನಾವು ಧರ್ಮರಕ್ಷಕರು. ಬಿಜೆಪಿಯವರು ಪ್ರತಿಭಟನೆ ನಡೆಸಲಿ ಅವರ ಕೆಲಸವೇ ಮೊಸರಲ್ಲಿ ಕಲ್ಲು ಹುಡುಕುವುದು ಎಂದರು.

## ಜಾಲ ಪತ್ತೆ : ಪರಮೇಶ್ವರ್

ಆರೋಪಗಳನ್ನ ಮಾಡಬಹುದು. ಬೇರೆ ಬೇರೆ ರೀತಿಯ ಹೇಳಿಕೆಗಳು ಬರಬಹುದು. ಹೇಳಿಕೆಗಳ ಆಧಾರದಲ್ಲಿ ತನಿಖೆ ಮಾಡಲು ಆಗಲ್ಲ. ಎಸ್‌ಐಟಿ ತನ್ನ ಅಂತಿಮ ವರದಿ ಸಲ್ಲಿಸುವವರಿಗೆ ಏನು ಹೇಳಲು ಆಗಲ್ಲ. ಯಾವ ಸೆಕ್ಷನ್‌ನಲ್ಲಿ ಬಂಧಿಸಲಾಗಿದೆ ಅನ್ನುವುದು ಎಸ್‌ಐಟಿಯವರಿಗೆ ಗೊತ್ತು. ದೂರುದಾರನ ಹೇಳಿಕೆ ಆಧಾರದಲ್ಲಿ ತನಿಖೆ ಪ್ರಾರಂಭಿಸಿದ್ದೆವು. ಆದ್ರೆ ಎಸ್‌ಐಟಿ ಹೇಳಿದ್ದೆಲ್ಲವನ್ನೂ ಹೇಳಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ಇದಕ್ಕೂ ಮುನ್ನ ಮಂಗಳೂರು ಏರ್‌ಪೋರ್ಟ್‌ನಲ್ಲಿ ಎಸ್‌ಐಟಿ ಮುಖ್ಯಸ್ಥ ಪ್ರಣಬ್ ಮೋಹಂತಿ ಅವರಿಂದ ಮಾಹಿತಿ ಪಡೆದರು. ಬುರುಡೆ ಚಿನ್ನಯ್ಯನ ವಿಚಾರಣೆ ಹಾಗೂ ನಾಲ್ಕು ದಿನದ ಬೆಳವಣಿಗೆ ಬಗ್ಗೆ ಪಿನ್ ಟು ಪಿನ್ ಡೀಟೇಲ್ಸ್ ಪಡೆದರು. ಪಶ್ಚಿಮ ವಲಯ ಐಜಿಪಿ ಅಮಿತ್ ಸಿಂಗ್, ದಕ್ಷಿಣ ಕನ್ನಡ ಎಸ್ಪಿ ಡಾ. ಅರುಣ್ ಕುಮಾರ್, ಎಸ್‌ಐಟಿ ಟೀಮ್‌ನ ಅಧಿಕಾರಿಗಳು ಈ ಸಂದರ್ಭದಲ್ಲಿದ್ದರು.

## ದೂರುದಾರ ಚಿನ್ನಯ್ಯ 10 ದಿನ ಕಸ್ಟಡಿಗೆ

ತಪಾಸಣೆಗಾಗಿ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಅವರನ್ನು ನ್ಯಾಯಾಂಗ ಪ್ರಥಮ ದರ್ಜೆ ಮ್ಯಾಜಿಸ್ಟ್ರೇಟ್ ವಿಜಯೇಂದ್ರ ಅವರ ಮುಂದೆ ಹಾಜರುಪಡಿಸಲಾಯಿತು ಮತ್ತು ಹೆಚ್ಚಿನ ತನಿಖೆಗಾಗಿ ಎಸ್‌ಐಟಿ 10 ದಿನಗಳ ಕಸ್ಟಡಿಗೆ ಕೋರಿತು. ನ್ಯಾಯಾಲಯವು ವಿನಂತಿಯನ್ನು ಪುರಸ್ಕರಿಸಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇಂದು ಬೆಳಗ್ಗೆ ಚಿನ್ನಯ್ಯನನ್ನು ಎಸ್?ಐಟಿ ಅಧಿಕಾರಿಗಳು ವಶಕ್ಕೆ ಪಡೆದು ತೀವ್ರ ವಿಚಾರಣೆ ನಡೆಸಲು ಬೆಳ್ತಂಗಡಿಯ ಎಸ್ ಐಟಿ ಕಚೇರಿಗೆ ಕರೆತಂದಿದ್ದರು. ಧರ್ಮಸ್ಥಳ, ಉಜಿರೆ, ಚಿನ್ನಯ್ಯನನ್ನು ಬೆಳ್ತಂಗಡಿ ಸುತ್ತಮುತ್ತ ಹಲವು ಕಡೆ ಕರೆದೊಯ್ದು ಸ್ಥಳ ಮಹಜರು ಕೂಡ ಮಾಡುವ ಸಾಧ್ಯತೆ ಇದೆ. ಆತ ಬುರುಡೆ ತಂದ ಜಾಗಕ್ಕೂ ಕರೆದುಕೊಂಡು ಹೋಗುವ ಸಾಧ್ಯತೆ ಇದೆ.

ಅಧಿಕಾರಿಗಳಿಂದ ತೀವ್ರ ತನಿಖೆಚಿನ್ನಯ್ಯ ಇದ್ದಕ್ಕಿದ್ದಂತೆ ಬುರುಡೆ ಕಥೆ ಹೆಣೆಯಲು ಕಾರಣವೇನು ಆತನ ಹಿಂದೆ ಯಾರ್ಯಾರು ಇದ್ದಾರೆ ಎಂದು ವಿವರವಾಗಿ ತನಿಖೆ ನಡೆಸುವ ಅವಶ್ಯಕತೆ ಇದೆ. ಹೀಗಾಗಿ ಚಿನ್ನಯ್ಯನನ್ನು ವಶಕ್ಕೆ ನೀಡಬೇಕು ಎಂದು ಎಸ್??ಐಟಿ ಪರ ವಕೀಲರು ವಾದ ಮಂಡಿಸಿದ್ದರು.

ಇದನ್ನು ಪುರಸ್ಕರಿಸಿದ ನ್ಯಾಯಾಲಯ, ಎಸ್?ಐಟಿ ವಶಕ್ಕೆ ಒಪ್ಪಿಸಿ ಆದೇಶ ನೀಡಿದೆ. ಕಳೆದ ಎರಡು ದಶಕಗಳ ಅವಧಿಯಲ್ಲಿ ಧರ್ಮಸ್ಥಳದಲ್ಲಿ ಹಲವಾರು ಅತ್ಯಾಚಾರ, ಕೊಲೆ ಪ್ರಕರಣಗಳು ನಡೆದು ಶವಗಳನ್ನು ಸಮಾಧಿ ಮಾಡಲಾಗಿದೆ ಎಂದು ಆರೋಪಿಸಿದ್ದ ದೂರುದಾರ ಚಿನ್ನಯ್ಯ ಆಗಿದ್ದಾನೆ.

ಧರ್ಮಸ್ಥಳ ಮಂಜುನಾಥ ಸ್ವಾಮಿ ದೇವಸ್ಥಾನದ ಮಾಜಿ ನೈರ್ಮಲ್ಯ ಕೆಲಸಗಾರನಾಗಿದ್ದೆ ಎಂದು ಹೇಳಿಕೊಳ್ಳುವ ಚಿನ್ನಯ್ಯ ನೀಡಿದ ಹೇಳಿಕೆಗಳು ಮತ್ತು ದಾಖಲೆಗಳಲ್ಲಿ ವ್ಯತ್ಯಾಸ ಕಂಡುಬಂದ ಹಿನ್ನೆಲೆಯಲ್ಲಿ ಪೊಲೀಸರು ಆತನನ್ನು ಬಂಧಿಸಿದ್ದಾರೆ.

## ತೋರಿದ ರಾಯಚೂರು ತಾಯಿ ಮಕ್ಕಳ ಆಸ್ಪತ್ರೆ



ಪರೀಕ್ಷಿಸಿದ ಪ್ರಸೂತಿ ತಜ್ಞರಾದ ಡಾ.ವಂದನಾ ಅವರು ಸಹಜ ಹೆರಿಗೆ ಸಾಧ್ಯವಿಲ್ಲವೆಂದು ನಿರ್ಧರಿಸಿ ಆಡಳಿತ ವೈದ್ಯಾಧಿಕಾರಿ ಹಾಗೂ ಅರವಳಿಕೆ ತಜ್ಞಡಾ ಪ್ರಜ್ವಲ್‌ಕುಮಾರ ಅರೊಂದಿಗೆ ಚರ್ಚಿಸಿ ಶಸ್ತ್ರಚಿಕಿತ್ಸೆಗೆ ಕೈಗೊಳ್ಳಲು ನಿರ್ಧರಿಸಿ ಹೆರಿಗೆ ಮಾಡುವಾಗ ಅಂಡಾಶಯದ ಹತ್ತಿರ ಗಡ್ಡೆ ಕಂಡು ಬಂದಿದೆ. ತಕ್ಷಣ ತಾಯಿಯ ಆರೋಗ್ಯ ಸುರಕ್ಷತೆಯ ದೃಷ್ಟಿಯಿಂದ ಪಾಲಕರಿಗೆ ಮಾಹಿತಿ ನೀಡಿ ಓಪೇಕ್ ಆಸ್ಪತ್ರೆಯ ಕ್ಯಾನ್ಸರ್ ವಿಭಾಗದ ಡಾ.ರಮೇಶ ಸಾಗರ ಅವರ ಅಭಿಪ್ರಾಯ ಪಡೆದು ಹೆರಿಗೆ ನಂತರ ಟೆರಟೋಮಾ ಗಡ್ಡೆಯನ್ನು ತೆಗೆದಿದ್ದು, ಇದೀಗ ಪ್ರಸ್ತುತ ತಾಯಿ ಮಗು ಆರೋಗ್ಯವಾಗಿದ್ದಾರೆ.

*ಏನಿದು ಅಂಡಾಶಯದ ಟೆರಾಟೋಮಾ*ಟರಾಟೊಮಾವು ವೈಜ್ಞಾನಿಕವಾಗಿ ಜೀವಾಣುಕೋಶ ಗಡ್ಡೆಯಾಗಿದ್ದು, ಎಕ್ಟೋಡರ್ಮ್, ಮೀಸೋಡರ್ಮ್ ಮತ್ತು ಎಂಡೋಡರ್ಮ್ ಸೇರಿದಂತೆ ಮೂರು ಜೀವಾಣುಕೋಶ ಪದರುಗಳಿಂದ ವಿಭಿನ್ನ ಅಂಗಾಂಶ ಹೊಂದಿರುತ್ತದೆ. ಸಾಮಾನ್ಯವಾಗಿ

ಕೂದಲು, ಸ್ನಾಯು, ಹಲ್ಲುಗಳು,

ಮೂಳೆ, ಥೈರಾಯ್ಡ್ ಅಂಗಾಂಶ,

ಕೊಬ್ಬು ಒಳಗೊಂಡಂತೆ ರಚನೆಯಾಗುವ

ಅಂಡಾಶಯದ ಟೆರಾಟೋಮಾ ಗಡ್ಡೆಗಳಲ್ಲಿ ಹಲವಾರು ವಿಧಗಳಿವೆ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ ನಂದಿತಾ ಮಾಹಿತಿ ನೀಡಿದ್ದಾರೆ.

ಗಡ್ಡೆ ಪರೀಕ್ಷೆಗೆ: ಶುಶ್ರೂಷಣಾಧಿಕಾರಿಗಳಾದಸೋನಿ, ಶಾಲೀನಿ, ಸ್ವೀಟ್ ಮೇರಿ ಸೇರಿದಂತೆ ಇತರರು ಈ ಶಸ್ತ್ರಚಿಕಿತ್ಸೆಯಲ್ಲಿ ಭಾಗಿಯಾಗಿದ್ದು, ಗಡ್ಡೆಯನ್ನು ಪರೀಕ್ಷೆಗೆ ಕಳುಹಿಸಿದ್ದಾರೆ. ಪರೀಕ್ಷಾ ವರದಿಯನ್ವಯ ಯಾವುದೇ ಅಪಾಯದ ಲಕ್ಷಣಗಳಿಲ್ಲದಿದ್ದರೂ ಪ್ರತಿ ಮೂರು ತಿಂಗಳಿಗೊಮ್ಮೆ ಸ್ಕ್ಯಾನಿಂಗ್ ಮಾಡಿಸಲು ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

ನಿರ್ಲಕ್ಷ್ಯ ಬೇಡ: ಅಂಡಾಶಯದ ಟೆರಾಟೋಮಾ ರಚನೆಯಾಗಲು ನೇರವಾದ ಕಾರಣವು ಪತ್ತೆಯಾಗದಿದ್ದರೂ

ಬಹಳಷ್ಟು ಪ್ರಕರಣಗಳಲ್ಲಿ ಹೆಚ್ಚಿನ ಅಂಡಾಶಯದ ಟೆರಾಟೋಮಾ ಗಡ್ಡೆಗಳು ಸೌಮ್ಯವಾಗಿದ್ದರು ಸಹ ಸುಮಾರು ಶೇ.1–2 ಪ್ರಕರಣಗಳಲ್ಲಿ ಕ್ಯಾನ್ಸರ್ ಗಡ್ಡೆಯಾಗಬಹುದಾಗಿದೆ. ಈ ಪ್ರಕರಣದಲ್ಲಿನ ತಾಯಿಗೆ ಯಾವುದೆ ಗಂಭೀರ ಅಪಾಯವಿಲ್ಲ ಎನ್ನುತ್ತಾರೆ ವೈದ್ಯರು.

ರಾಯಚೂರು ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಪ್ರಸೂತಿ ಹಾಗೂ ಅರವಳಿಕೆ ತಜ್ಞರ ತಂಡವು ಹೆರಿಗೆ ಮಾತ್ರವಲ್ಲದೆ, ಕ್ಲಿಷ್ಟಕರ ಶಸ್ತ್ರಚಿಕಿತ್ಸೆಗೂ ಮುಂದಾಗಿರುವುದು ವಿಶೇಷ ಸಾಧನೆಯಾಗಿದೆ. ಟೆರಾಟೋಮಾ ಗಡ್ಡೆಗಳ ಬಗ್ಗೆ ನಿರ್ಲಕ್ಷ್ಯ ಮಾಡಬಾರದು.

ಎಲ್ಲ ಗರ್ಭಿಣಿಯರು, ಹೆರಿಗೆ ಪೂರ್ವದಲ್ಲಿ ವೈದ್ಯರ ಸಲಹೆ ಪಡೆದು ನಿರಂತರ ಪರೀಕ್ಷೆಗಳನ್ನು ನಡೆಸಬೇಕು.

–ಡಾ.ಸುರೇಂದ್ರಬಾಬು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ರಾಯಚೂರು ಜಿಲ್ಲೆ

### ಬೆಳಗಾವಿಗೆ ಡ್ರಗ್ಸ್ ವಿತರಿಸುತ್ತಿದ್ದ ಗ್ಯಾಂಗ್ ಅರೆಸ್ಟ್ : 50 ಕೆಜಿ ಗಾಂಜಾ, 30 ಲಕ್ಷದ ಮಾದಕ ವಸ್ತು ಜಪ್ತಿ

ಬೆಳಗಾವಿ:ಆ.23:ಕುಂದಾನಗರಿಗೆ ಡ್ರಗ್ಸ್ ವಿತರಣೆ ಮಾಡುತ್ತಿದ್ದ ಗ್ಯಾಂಗ್ ಸದಸ್ಯರನ್ನು ಪೊಲೀಸರು ಬಂಧಿಸಿದ್ದಾರೆ.

ಮುಂಬೈನಲ್ಲಿದ್ದ ಕಿಂಗ್ ಪಿನ್ ಮಾಸ್ಟರ್ ಮೈಂಡ್ ಇಸ್ಮಾಯಿಲ್ ಸದ್ದಾಂ ಸಯ್ಯದ್, ತಾಜೀರ್ ಬಸ್ತವಾಡೆ,ಪ್ರಥಮೇಶ ಲಾಡ್, ತೇಜಸ್ ವಾಜರೆ,ಶಿವಕುಮಾರ್ ಆಸಬೆ,ರಮಜಾನ್ ಜಮಾದಾರ, ತಾಜೀಬ್ ಮುಲ್ಲಾ,ಅನುರಾಗ ಅರೆಸ್ಟ್ ಆಗಿದ್ದಾರೆ.

ಬೆಳಗಾವಿ ಸಿಇಎನ್ ಇನ್ಸ್‌ಪೆಕ್ಟರ್ ಬಿ.ಆರ್ ಗಡ್ಡೇಕರ್ ತಂಡ ಭರ್ಜರಿ ಕಾರ್ಯಾಚರಣೆ ಆರೋಪಿಗಳನ್ನುಬಂಧಿಸಿದ್ದಾರೆ. ಕುಂದಾನಗರಿ ಕಾಲೇಜುಗಳ ವಿದ್ಯಾರ್ಥಿಗಳೇ ಟಾರ್ಗೆಟ್ ಮಾಡಿದ್ದ ಇವರು ಗಾಂಜಾ, ಪೆನ್ನಿ,ಹೇರಾಯಿನ್ ವಿತರಿಸುತ್ತಿತ್ತು.

50 ಕೆಜಿ ಗಾಂಜಾ, 30 ಲಕ್ಷ ಮೌಲ್ಯದ ಮಾದಕವಸ್ತು, 13 ಮೊಬೈಲ್, ಡಿಜಿಟಲ್ ಹ್ಯಾಂಗರ್ ತಕ್ಕಡಿ, ಎರಡು ಕಾರನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.ಒಡಿಶಾ,ಮುಂಬೈ, ಪುಣೆ, ಮಧ್ಯಪ್ರದೇಶದಿಂದ ಡ್ರಗ್ಸ್ ತೆಗೆದುಕೊಂಡು ಬಂದು ಬೆಂಗಳೂರು,ಬೆಳಗಾವಿ,ಹುಬ್ಬಳ್ಳಿ ಧಾರವಾಡ ಮತ್ತು ಗೋವಾ, ಮಹಾರಾಷ್ಟದಲ್ಲಿ ಈ ಗ್ಯಾಂಗ್ ವಿತರಣೆ ಮಾಡುತ್ತಿತ್ತು.

ಬೆಳಗಾವಿ ಪೊಲೀಸ್ ಕಮೀಷನರ್ ಭೂಷಣ್ ಬೊರಸೆ ಅವರು ಸಿಇಎನ್ ಪೊಲೀಸ್ ತಂಡಕ್ಕೆ ನಗದು ಬಹುಮಾನ ಘೋಷಣೆ ಮಾಡಿದ್ದಾರೆ.

## ಅಕ್ರಮ ಬೆಟ್ಟಿಂಗ್ ಪ್ರಕರಣ; ಕಾಂಗ್ರೆಸ್ ಶಾಸಕ ಕೆ.ಸಿ ವೀರೇಂದ್ರ 'ಪಪ್ಪಿ' ಬಂಧಿಸಿದ ಇ.ಡಿ

ನವದೆಹಲಿ: ಆ.23:ಅಕ್ರಮವಾಗಿ ಬೆಟ್ಟಿಂಗ್ ಕಂಪನಿ ನಡೆಸುತ್ತಿದ್ದ ಆರೋಪಕ್ಕೆ ಸಂಬಂಧಿಸಿದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ಕೆಸಿ ವೀರೇಂದ್ರ (ಪಪ್ಪಿ) ಅವರನ್ನು ಸಿಕ್ಕಿಂನಲ್ಲಿ ಬಂಧಿಸಲಾಗಿದೆ ಎಂದು ಜಾರಿ ನಿರ್ದೇಶನಾಲಯ (ಇ.ಡಿ) ಶನಿವಾರ ತಿಳಿಸಿದೆ.

ಶುಕ್ರವಾರ ಹಲವು ರಾಜ್ಯಗಳಲ್ಲಿ ನಡೆಸಿದ ದಾಳಿಯ ನಂತರ 12 ಕೋಟಿ ರೂ. ನಗದು (ಒಂದು ಕೋಟಿ ರೂ. ವಿದೇಶಿ ಕರೆನ್ಸಿ ಸೇರಿದಂತೆ), 6 ಕೋಟಿ ರೂ. ಮೌಲ್ಯದ ಚಿನ್ನಾಭರಣ, ಸುಮಾರು 10 ಕೆಜಿ ಬೆಳ್ಳಿ ಮತ್ತು ನಾಲ್ಕು ವಾಹನಗಳನ್ನು ವಶಪಡಿಸಿಕೊಂಡಿರುವುದಾಗಿ ಕೇಂದ್ರದ ತನಿಖಾ ಸಂಸ್ಥೆ ತಿಳಿಸಿದೆ.

ಯಾವ ಕಡೆಗಳಿಂದ ಏನನ್ನು ವಶಪಡಿಸಿಕೊಳ್ಳಲಾಗಿದೆ ಎಂಬುದನ್ನು ತನಿಖಾ ಸಂಸ್ಥೆ ಸ್ಪಷ್ಟಪಡಿಸಿಲ್ಲ.


ಚಿತ್ರದುರ್ಗದ 50 ವರ್ಷದ ಶಾಸಕರನ್ನು ಶುಕ್ರವಾರ ಸಿಕ್ಕಿಂನ ರಾಜಧಾನಿ ಗ್ಯಾಂಗ್ಟಾಕ್‌ನಲ್ಲಿನ ಮ್ಯಾಜಿಸ್ಟ್ರೇಟ್ ಮುಂದೆ ಹಾಜರುಪಡಿಸಲಾಯಿತು ಮತ್ತು ಬೆಂಗಳೂರಿನ ನ್ಯಾಯಾಲಯದ ಮುಂದೆ ಹಾಜರುಪಡಿಸಲು ಟ್ರಾನ್ಸಿಟ್ ರಿಮಾಂಡ್ ಪಡೆಯಲಾಯಿತು ಎಂದು ಅದು ಹೇಳಿದೆ.ಈ ಪ್ರಕರಣದ ತನಿಖೆಯನ್ನು ಇ.ಡಿಯ ಬೆಂಗಳೂರು ವಲಯ ನಡೆಸುತ್ತಿದೆ.ಶಾಸಕರು ತಮ್ಮ ಸಹಚರರೊಂದಿಗೆ ಕ್ಯಾಸಿನೊವನ್ನು ಗುತ್ತಿಗೆ ಪಡೆಯುವ ಸಲುವಾಗಿ ಮಾತುಕತೆ ನಡೆಸಲು ಗ್ಯಾಂಗ್ಟಾಕ್‌ಗೆ ಭೇಟಿ ನೀಡಿದ್ದರು ಎಂದು ತನಿಖಾ ಸಂಸ್ಥೆ ತಿಳಿಸಿದೆ.

'ವೀರೇಂದ್ರ ಅವರ ಸಹೋದರ ಕೆಸಿ ನಾಗರಾಜ್ ಮತ್ತು ಅವರ ಮಗ ಪೃಥ್ವಿ ಎನ್ ರಾಜ್ ಅವರ ನಿವಾಸದಿಂದ ಆಸ್ತಿಗೆ ಸಂಬಂಧಿಸಿದ ಹಲವು ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ. ಮತ್ತೊಬ್ಬ ಸಹೋದರ ಕೆಸಿ ತಿಪ್ಪೇಸ್ವಾಮಿ ಮತ್ತು ಅವರ ಇತರ ಸಹಚರರು ದುಬೈನಿಂದ ಆನ್‌ಲೈನ್ ಗೇಮಿಂಗ್ ಕಾರ್ಯಾಚರಣೆಗಳನ್ನು ನಿರ್ವಹಿಸುತ್ತಿದ್ದಾರೆ' ಎಂದು ಇ.ಡಿ ತಿಳಿಸಿದೆ.ಕರ್ನಾಟಕದ ಚಿತ್ರದುರ್ಗ, ಹುಬ್ಬಳ್ಳಿ ಮತ್ತು ಬೆಂಗಳೂರು, ಜೋಧ್‌ಪುರ (ರಾಜಸ್ಥಾನ), ಸಿಕ್ಕಿಂ, ಮುಂಬೈ ಮತ್ತು ಗೋವಾ ಸೇರಿದಂತೆ 31 ಸ್ಥಳಗಳಲ್ಲಿ ತನಿಖಾ ಸಂಸ್ಥೆಯು ಶೋಧಕಾರ್ಯವನ್ನು ಮುಕ್ತಾಯಗೊಳಿಸಿದೆ.

ಪಪ್ಪೀಸ್ ಕ್ಯಾಸಿನೊ ಗೋಲ್ಡ್, ಓಷನ್ ರಿವರ್ಸ್ ಕ್ಯಾಸಿನೊ, ಪಪ್ಪೀಸ್ ಕ್ಯಾಸಿನೊ ಪ್ರೈಡ್, ಓಷನ್ 7 ಕ್ಯಾಸಿನೊ ಮತ್ತು ಬಿಗ್ ಡ್ಯಾಡಿ ಕ್ಯಾಸಿನೊ ಎಂಬ ಹೆಸರಿನ ಗೋವಾದ ಐದು ಕ್ಯಾಸಿನೊಗಳ ಮೇಲೆಯೂ ದಾಳಿ ನಡೆಸಲಾಗಿದೆ.ಇಡಿ ಪ್ರಕಾರ, ವೀರೇಂದ್ರ ಅವರು ಏಟಿಂ567, ಖಿಚಿರಿಚಿ567, ಕಣಿಠಿಠಿಥಿ'003, ಖಿಚಿಣಟಿಚಿ ಉಚಿಟುಟಿಣ ಮುಂತಾದ ಆನ್‌ಲೈನ್ ಬೆಟ್ಟಿಂಗ್ ಸೈಟ್‌ಗಳನ್ನು ನಡೆಸುತ್ತಿದ್ದಾರೆ ಮತ್ತು ಅವರ ಸಹೋದರ ಕೆಸಿ ತಿಪ್ಪೇಸ್ವಾಮಿ ದುಬೈನಿಂದ ಡೈಮಂಡ್ ಸಾಫ್ಟೆಕ್, ಖಿಖಿ ಟೆಕ್ನಾಲಜೀಸ್ ಮತ್ತು ಪ್ರೈಮ್9ಟೆಕ್ನಾಲಜೀಸ್ ಎಂಬ ಮೂರು ಸಂಸ್ಥೆಗಳನ್ನು ನಿರ್ವಹಿಸುತ್ತಿದ್ದಾರೆ.




ಬಸವಕಲ್ಯಾಣ:– ಸರಕಾರಿ ಪ್ರೌಢ ಶಾಲೆ ಹುಲಸೂರನ ಹಿಂದಿ ಭಾಷಾ ಶಿಕ್ಷಕರಾದ ಸೈಯದ್ ಅಹಮದ್ ಅಲಿ ರವರ ವಯೋನಿವೃತ್ತಿ ಕಾರ್ಯಕ್ರಮದಲ್ಲಿ ಕ. ರಾ.ಪ್ರೌ.ಶಾ.ಸ.ಶಿ ಸಂಘ ಬಸವಕಲ್ಯಾಣ ತಾಲೂಕ ಘಟಕ ಅಧ್ಯಕ್ಷರಾದ ವಿಜಯಕುಮಾರ ಮಾನೆ. ಹಾಗೂ ಸದಸ್ಯರು ಹುಲಸೂರ ತಾಲೂಕ ಅಧ್ಯಕ್ಷರಾದ ಸೂರ್ಯಕಾಂತ ಅಡಕೆ ಹಾಗೂ ಸದಸ್ಯರ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)



ಹುಮನಾಬಾದ:ತಾಲ್ಲೂಕಿನ ಹಳ್ಳಿಖೇಡ (ಬಿ) ಗ್ರಾಮದ ಸಿಮಿನಾಗನಾಥ ದೇವಾಲಯಕ್ಕೆ ತೆರಳಿ ಡಾ.ನಾಗನಾಥ ಹುಲಸೂರೆರವರು ವಿಶೇಷ ದರ್ಶನ ಪಡೆದರು. ಈ ಸಂದರ್ಭದಲ್ಲಿ ಮಹೇಶ ಅಗಡಿ, ಆನಂದ ಮತ್ತು ಶಾಂತು ಚಳಕಿ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

## ಸತ್ಯ ಸಂಸ್ಕೃತಿ ಉಳಿದು ಬೆಳೆಯಲಿ ಶ್ರೀ ರಂಭಾಪುರಿ ಜಗದ್ಗುರುಗಳು



ಮಲ್ಲಮ್ಮ ನುಡಿ ವಾರ್ತೆ

ಶ್ರೀರಂಭಾಪುರಿಪೀಠ(ಬಾಳೆಹೊನ್ನೂರು)– ಆಗಸ್ಟ್–23– ಜೀವನಾಧಾರಕ್ಕೆ ನೀರು ಅನ್ನ ಗಾಳಿ ಮತ್ತು ಒಳ್ಳೆಯ ಮಾತು ಮುಖ್ಯ. ಉತ್ತಮ ಚಿಂತನೆಗಳು ಬಾಳ ಬದುಕಿನ ಶ್ರೇಯುಸ್ಸಿಗೆ ಮೂಲ. ಸತ್ಯ ಮತ್ತು ಸಂಸ್ಕೃತಿ ಉಳಿದು ಬೆಳೆದು ಬರಬೇಕಾಗಿದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರಾವಣ ಮಾಸದ ಪುರಾಣ ಪ್ರವಚನ ಮಂಗಲ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬದುಕು ಸುಖ ದು:ಖ, ನೋವು ನಲಿವು, ಮಾನ–ಅಪಮಾನ, ಜಯ ಅಪಜಯ ಮೊದಲಾದ ದ್ವಂದ್ವಗಳಿಂದ ಕೂಡಿದೆ. ಈ ಸಂಗತಿ ಯಾರಿಗೆ ಗೊತ್ತಿದೆಯೋ ಅವರು ಜೀವನದಲ್ಲಿ ಏನೆಲ್ಲ ಕಷ್ಟ ಬಂದರೂ ಅವುಗಳಿಗೆ ಎದೆಗುಂದಬಾರದು. ಸುಖದ ಬದುಕಿಗೆ ಪ್ರಯತ್ನ ಮತ್ತು ಸಾಧನೆ ಬೇಕು. ಬದುಕು ವಿಕಾಸಗೊಳ್ಳಲು ಆಧ್ಯಾತ್ಮದ ಅರಿವು ಮುಖ್ಯವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ಬಿಸಿಲಿನಿಂದ ಬಳಲಿ ಬಂದ ಜನರಿಗೆ ಮರ ನೆರಳು ನೀಡುತ್ತದೆ. ಕಲ್ಲು ಹೊಡಿಸಿಕೊಂಡ ರುಚಿಯಾದ ಹಣ್ಣು ಕೊಡುತ್ತದೆ. ನಿಂತ ನೆಲ ಮತ್ತು ನೆರಳು ಕೊಟ್ಟ ಮರವನ್ನೇ ನಾವಿಂದು ಕತ್ತರಿಸುತ್ತಿದ್ದೇವೆ. ಸಮಾಜ ಘಾತುಕ ಶಕ್ತಿಗಳ ವಿರುದ್ಧ ಹೋರಾಡಿ ಸತ್ಯ ಸಂಸ್ಕೃತಿ ಉಳಿಸಿ ಬೆಳೆಸುವ ಸಂಕಲ್ಪ ಎಲ್ಲರದೂ ಆಗಬೇಕು ಎಂದರು.

ಶ್ರಾವಣ ಮಾಸ ಒಂದು ತಿಂಗಳ ಕಾಲ ಶ್ರೀ ಜಗದ್ಗುರು ರೇಣುಕ ವಿಜಯ ಪುರಾಣ ಪ್ರವಚನ ಮಾಡಿ ಇಂದು ಮಂಗಲಗೊಳಿಸುತ್ತಿರುವ ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಸುಂದರವಾದ ಉಡುಪು ನಮ್ಮ ವ್ಯಕ್ತಿತ್ವವನ್ನು ಮೆರೆಸಬಹುದು. ಆದರೆ ಸುಂದರವಾದ ಗುಣ ನಮ್ಮ ಬದುಕನ್ನೇ ಬದಲಾಯಿಸುತ್ತದೆ. ಸುಖ ದು:ಖ ಶಾಶ್ವತವಲ್ಲ. ಅವೆರಡನ್ನು ಸಮಾನವಾಗಿ ಸ್ವೀಕರಿಸಿ ಬಾಳಿದಾಗ ಶ್ರೇಯಸ್ಸು ಕಟ್ಟಿಟ್ಟ ಬುತ್ತಿ. ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳ ವಿಚಾರ ಧಾರೆ ಬದುಕಿ ಬಾಳುವ ಜನಾಂಗಕ್ಕೆ ದಾರಿ ದೀಪ ಎಂದರು.

ಯಡಿಯೂರು ರೇಣುಕ ಶಿವಾಚಾರ್ಯರು, ದೊಡ್ಡಗುಣಿ ರೇವಣಸಿದ್ಧೇಶ್ವರ ಶಿವಾಚಾರ್ಯರು, ತಾವರೆಕೆರೆ ಡಾ.ಅಭಿನವ ಸಿದ್ಧಲಿಂಗ ಶಿವಾಚಾರ್ಯರು, ಸಿದ್ಧರಬೆಟ್ಟದ ವೀರಭದ್ರಶಿವಾಚಾರ್ಯರು, ಹುಡುಗಿಯ ಸೋಮೇಶ್ವರ ಶಿವಾಚಾರ್ಯರು, ಉಟಗಿ ಶಿವಪ್ರಸಾದ ದೇವರು ನುಡಿ ನಮನ ಸಲ್ಲಿಸಿದರು. ಪುರಾಣ ಪ್ರವಚನ ಮಾಡಿದ ನೆಗಳೂರು ಗುರುಶಾಂತೇಶ್ವರ ಶ್ರೀಗಳಿಗೆ ರೇಶ್ಮೆ ಶಾಲು ಮಡಿ ಹೂ ಹಾರ ಫಲ ತಾಂಬೂಲಗಳನ್ನಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.

ಈ ಪವಿತ್ರ ಸಮಾರಂಭದಲ್ಲಿ ಶ್ರೀ ಪೀಠದ ಆಡಳಿತಾಧಿಕಾರಿ ಎಸ್.ಬಿ. ಹಿರೇಮಠ, ಶ್ರೀ ಜೆ.ಆರ್. ವಿದ್ಯಾಸಂಸ್ಥೆ ಕಾರ್ಯದರ್ಶಿ ಪ್ರಭುದೇವ ಕಲ್ಮಠ, ಮಾಜಿ ಶಾಸಕ ಜಿ.ಎಸ್. ಗಡ್ಡದ್ದೇವರಮಠ, ಶಿವಮೊಗ್ಗದ ರಾಜು, ಗುರುಕುಲದ ಕುಲಪತಿ ಸಿದ್ಧಲಿಂಗ ಶಾಸ್ತ್ರಿಗಳು ಮೊದಲಾದ ಗಣ್ಯರು ಪಾಲ್ಗೊಂಡಿದ್ದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕ–ರಿಂದ ವೇದಘೋಷ–ಪ್ರಾರ್ಥನೆ ಜರುಗಿತು. ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಶಿಕ್ಷಕ ವೀರೇಶ ಕುಲಕರ್ಣಿ ನಿರೂಪಿಸಿದರು.

ಬೆಳಗಿನ ಸಂದರ್ಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿಗೆ ನೂರೆಂಟು ಕಲಶೋಧಕದಿಂದ ಅಭಿಷೇಕ ನೆರವೇರಿಸಿ ನಂತರ ಜನ ಕಲ್ಯಾಣಕ್ಕಾಗಿ ಇಷ್ಟಲಿಂಗ ಮಹಾಪೂಜಾ ಮಾಡಿ ಬಂದ ಭಕ್ತರೆಲ್ಲರಿಗೂ ಶುಭ ಹಾರೈಸಿದರು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

## ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತ 9 ನೇಯ ವಿಶೇಷ ಉಪನ್ಯಾಸ ಮಾಲೆ.



(ವರದಿ. ಡಿ. ಕೆ. ಪ್ರಹ್ಲಾದ ಜಿ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : – ಆ 23 ಪರಮಾತ್ಮನು ಸದಾಚಾರ ಪ್ರೀಯನು ಎಂದು ಇಲ್ಲಿನ ಸಂಸ್ಥಾನ ಗವಿಮಠದ ಪೂಜ್ಯಶ್ರೀ ಷ. ಬ್ರ. ಡಾ. ಅಭಿನವ ಘನಲಿಂಗರುದ್ರಮುನಿ ಶಿವಾಚಾರ್ಯರು ನುಡಿದರು.

ಪ್ರತಿ ವರ್ಷದಂತೆ ಪವಿತ್ರ ಶ್ರಾವಣ ಮಾಸ ಅಂಗವಾಗಿ ಇಲ್ಲಿನ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠದಲ್ಲಿ ಗವಿಮಠ ಟ್ರಸ್ಟ್ ವತಿಯಿಂದ ಆಯೋಜಿಸಿದ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತ 9ನೇ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ಮನುಷ್ಯ ನಿತ್ಯ ಸುಚಿರ್ಭೂತನಾಗಿ, ಗುರು ಕರುಣಿಸಿದ ಇಷ್ಟಲಿಂಗ ಪೂಜೆಯನ್ನು ಭಕ್ತಿಯಿಂದ ಮಾಡುತ್ತ ಸತ್ಯ ಶುದ್ಧ ಕಾಯಕ ನಡೆಸಿದಾಗ ಮಾತ್ರ ಸದಾಚಾ–ರಿಯಾಗಿ ಪರಮಾತ್ಮನ ಕೃಪೆ ಪಡೆಯಲು ಸಾಧ್ಯ. ಪ್ರತಿ ವರ್ಷದಂತೆ ಅನೇಕ ತಾಯಂದಿರು ಮನೆಯಲ್ಲಿ ಮಾಡಿಕೊಂಡು ತಂದಿರುವ ವಿಧ ವಿಧ ಅಡುಗೆ ಗುರುವಿಗೆ ಅರ್ಪಿಸಿದ್ದು ಬರೀ ಅಡುಗೆ ಅಲ್ಲ ಮಹಾಪ್ರಸಾದ. ನಾವೂ ಕೂಡ ಎಲ್ಲ ಸದ್ಭಕ್ತರ ಜೊತೆಸೇರಿ ಸಾಮೂಹಿಕ ಮಹಾಪ್ರಸಾದ ಸೇವನೆ ಮಾಡುತ್ತಿರುವುದು ತೃಪ್ತಿ ತಂದಿದ್ದು ಎಲ್ಲ ಸದ್ಭಕ್ತರ ಮೇಲೆ ಪರಮಾತ್ಮನ ಕೃಪೆ ಸದಾ ಇರಲಿ ಎಂದು ಶುಭ ಹಾರೈಸಿದರು.

ಮುಖ್ಯ ಅತಿಥಿಯಾಗಿ ಯುವ ಮುಖಂಡ ಅಮರ ಬಡದಾಳೆ ಮಾತನಾಡಿ ಗವಿಮಠ ನಮ್ಮ ಮಠ, ಪ್ರತಿವರ್ಷ ಪೂಜ್ಯ ಡಾ. ಅಭಿನವ ಗುರುಗಳು ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತು ವಿಶೇಷ ಉಪನ್ಯಾಸಗಳನ್ನು ಏರ್ಪಡಿಸಿ ಜ್ಞಾನ ನೀಡುತ್ತಿವುದು ನಮ್ಮ ಪುಣ್ಯ. ಪ್ರಕೃತಿ ಸೌಂದರ್ಯದಿಂದ ಕೂಡಿದ ಗವಿಮಠವು ಪವಿತ್ರ ತಾಣ ಪೂಜ್ಯ ಗುರುಗಳು ನಮಗೆ ಮಾರ್ಗದರ್ಶನ ಮಾಡುತ್ತಿರುತ್ತಾರೆ ಎಂದು ನುಡಿದರು. ಅತಿಥಿಯಾಗಿ ಸಾಮಾಜ ಸೇವಕ ಲೋಕೇಶ ಮೋಳಕೇರೆ ಮಾತನಾಡಿ ಪೂಜ್ಯ ಡಾ. ಅಭಿನವ ಗುರುಗಳು ಸರಳ ಜೀವಿಗಳು. ಎಲ್ಲ ಜಾತಿ, ಧರ್ಮದವರನ್ನು ಸಮಾನವಾಗಿ ಕಾಣುತ್ತ ಬಸವಣ್ಣನವರ ಸಮಾನತೆ ತತ್ವವನ್ನು ಅನುಸರಿಸುತ್ತಿದ್ದಾರೆ. ಅವರ ಧಾರ್ಮಿಕ, ಸಾಮಾಜಿಕ, ಮೊದಲಾದ ಕಾರ್ಯಗಳು ಅಮೋಘವಾಗಿವೆ ಅವರ ಮಾಡುವ ಕಾರ್ಯ–ಕ್ಕೆ ನಾವು ಕೂಡ ಸಿದ್ಧರಿದ್ದೇವೆ ಎಂದು ಕೊಂಡಾಡಿದರು.

ಇಂಜಿನಿಯರ ವಿದ್ಯಾರ್ಥಿ ಶರಣಬಸಪ್ಪ ಅಲಗುಡೆ ಮಾತನಾಡಿ ಗವಿಮಠವು 11ನೇ ಶತಮಾನದ ಜಗದ್ಗುರು ರೇವಣಸಿದ್ಧೇಶ್ವರರು ತಪಗೈದ ಪಾವನ ತಾಣ. ಭುಗರ್ಭ ಸಂಜಾತ ಜಗದ್ಗುರು ಘನಲಿಂಗರಿಗೆ ವೀರಶೈವ ಧರ್ಮ ದೀಕ್ಷೆ ನೀಡಿದ ಪುಣ್ಯದ ನೆಲ ಎಂದು ಗವಿಮಠದ ಮಹಿಮೆಯನ್ನು ಪರಿಚಯಿಸಿದರು.

ಅಧ್ಯಕ್ಷತೆ ವಹಿಸಿದ್ದ ಶ್ರೀಮದ್ವೀರಶೈವ ಸದ್ಬೋಧನ ಸಂಸ್ಥೆ ಮಹಿಳಾ ಘಟಕದ ಅಧ್ಯಕ್ಷರಾದ ಕಲ್ಪನಾ ದಯಾನಂದ ಶೀಲವಂತ ಮಾತನಾಡಿ ಅಭಿನವ ಗುರುಗಳು ಈ ಪವಿತ್ರ ಶ್ರಾವಣ ಮಾಸದಲ್ಲಿ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತು ಉಪದೇಶ ನೀಡುತ್ತಾರೆ ಭಕ್ತರನ್ನು ಉದ್ಧರಿಸುತ್ತಿದ್ದಾರೆ.

ಶ್ರೀಮದ್ ರಂಭಾಪುರಿ ಜಗದ್ಗುರುಗಳ ದಸರಾ ಮಹೋತ್ಸವ ಈ ವರ್ಷ ನಮ್ಮ ಬಸವಕಲ್ಯಾಣದಲ್ಲಿ ನಡೆಯುತ್ತಿರುವುದು ನಮ್ಮೆಲ್ಲರ ಭಾಗ್ಯ. ಎಲ್ಲ ಸದ್ಭಕ್ತರು ಪಾಲ್ಗೊಂಡು ಜಗದ್ಗುರುಗಳ ದರ್ಶನ ಆಶೀರ್ವಾದ ಪಡೆದು ಧನ್ಯರಾಗಬೇಕೆಂದು ಕೋರಿದರು.

ವಿಶ್ವಹಿಂದು ಪರಿಷತ್ ತಾಲೂಕಾ ಅಧ್ಯಕ್ಷರಾದ ಶ್ರೀಶೈಲ ವಾತಡೆ.

ವಿಶೇಷ ಸನ್ಮಾನ : ಗವಿಮಠದ ಹಿರಿಯ ಭಕ್ತರಾದ ಸುಭದ್ರಾಬಾಯಿ ವೀರಯ್ಯ ಸ್ವಾಮಿ ಅವರನ್ನು ಪೂಜ್ಯ ಗುರುಗಳು ವಿಶೇಷ ಸನ್ಮಾನ ಮಾಡಿ ಗೌರವಿಸಿದರು.

ಬೆಳದಿಂಗಳ ಸಹ ಭೋಜನ: ಪ್ರತಿ ವರ್ಷದಂತೆ ಅನೇಕ ಮಹಿಳಾ ಭಕ್ತರು ತಮ್ಮ ಮನೆಯಲ್ಲಿ ಅಡುಗೆ ಮಾಡಿಕೊಂಡು ತಂದು ಗುರುಗಳೂ ಸಹಿತ ಎಲ್ಲ ಸದ್ಭಕರು ಸಾಲಾಗಿ ಕುಳಿತು ಬೆಳದಿಂಗಳ ವಿಧ ವಿಧ ಅಡುಗೆ ಸಹ ಭೋಜನ ಸವಿದಿದ್ದು ವಿಶೇಷ ಆಕರ್ಷಣೆಯಾಗಿತ್ತು.

ಕುಮಾರಿ ಆರಾಧ್ಯ ದೀಪಕ ಪುರವಂತ ಹಾಗೂ ಪ್ರಗತಿ ಶಾಂತಕುಮಾರ ಹುಡಗಿ ಪ್ರಾರ್ಥನಾಗೀತೆ ಹಾಡಿದರು.

ಈ ಸಂದರ್ಭದಲ್ಲಿ ರಾಕೇಶ ಪುರವಂತ, ಶಿವಕುಮಾರ ಮುನ್ನೋಳಿ, ರುದ್ರಮುನಿ ಹಿರೇಮಠ, ಅಭಿಷೇಕ ರಾಮಣ್ಣನವರ, ಪ್ರದೀಪ ಬಿರಾದಾರ, ಸರಸ್ವತಿ ಬೆಂಬಲಗೆ, ಶಕುಂತಲಾ ಮಠ, ಜ್ಯೋತಿ ಸಂಗಮೇಶ ಪಾಟೀಲ, ಸವಿತಾ ರಮೇಶ ಸ್ವಾಮಿ, ರೇಖಾ ಚಿಟ್ಟೆ, ಪ್ರೇಮಲಾ ರಾಮಣ್ಣಾ, ಸುರೇಖಾ ಸಜ್ಜನಶೆಟ್ಟಿ, ಪಾರ್ವತಿ ಶಂಕರ ರೋಜೆ, ಸುನೀತಾ ಸಂಗಪ್ಪಾ ಭಾಲ್ಕೆ, ಇನ್ನಿತರರು ಉಪಸ್ಥಿತರಿದ್ದರು. ಶಿಕ್ಷಕರಾದ ಮಲ್ಲಿಕಾರ್ಜುನ ಆಲಗೂಡೆ ಸಂಚಾಲನೆ. ಪ್ರೊ. ರುದ್ರೇಶ್ವರ ಗೋರ್ಟಾ ಸ್ವಾಗತಿಸಿದರು.

## ಭಜನೆ ಎನ್ನುವುದು ಆತ್ಮಶುದ್ಧಿಯ ಮಾರ್ಗ:– ಶಿವಶರಣಪ್ಪ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲ್ಲೂಕಿ ಕರಕನಳ್ಳಿ ಗ್ರಾಮದಲ್ಲಿ ಶ್ರಾವಣ ಮಾಸದ ಪವಿತ್ರ ಸಂದರ್ಭದಲ್ಲಿ ಪ್ರತಿದಿನವೂ ನಡೆಯುತ್ತಿದ್ದ ಭಜನೆ, ವ್ರತ, ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳ ಸಮಾರೋಪ ಭಜನೆಯೊಂದಿಗೆ ವಿಜ್ರಂಭಣೆಯಿಂದ ನೆರವೇರಿತು. ಭಕ್ತರ ಸಮೂಹಗಾನ, ಮೂಲಕ ಧಾರ್ಮಿಕ ವಾತಾವರಣ ನಿರ್ಮಾಣವಾಯಿತು. ಶ್ರೀ ಗುರು ಗಂಗಾಧರ ಭಕ್ತ ಪ್ರಭುಗಳ ದೇವಾಲಯದಲ್ಲಿ ಶ್ರಾವಣ ಮಾಸದ ಸಮಾರೋಪ ಕಾರ್ಯಕ್ರಮದ ಸಂದರ್ಭದಲಿ ನಿವೃತ್ತ ಶಿಕ್ಷಕ ಶಿವಶರಣಪ್ಪವರಪುಲ ಮಾತನಾಡಿ "ಭಜನೆ ಎನ್ನುವುದು ಆತ್ಮಶುದ್ಧಿಯ ಮಾರ್ಗ, ಅದು ಸಮಾಜದಲ್ಲಿ ಸತ್ಯ–ಅಹಿಂಸೆ ಧರ್ಮದ ಬೋಧನೆಯನ್ನು ಹರಡುವುದು" ಎಂದು ಹೇಳಿದರು. ಕೊನೆಯ ದಿನದ ಕಾರ್ಯಕ್ರಮದಲ್ಲಿ ಭಜನೆ ಹಾಗೂ ಭಕ್ತಿಗೀತೆಗಳ ಗಾಯನ ನಡೆಯಿತು. ಕಾರ್ಯಕ್ರಮದ ಅಂತ್ಯದಲ್ಲಿ ಮಹಾ ಮಂಗಳಾರತಿ ಜರುಗಿತು. ಕಲಾವಿದರಾದ ಮಲ್ಲಿಕಾರ್ಜುನ ಮರಪಳ್ಳಿ, ವಿಶ್ವನಾಥ ಐನೊಳ್ಳಿ, ಚಂದ್ರಪ್ಪಾ ಹೂಗೊಂಡ, ರಾಜಪ್ಪಾ ಮುತ್ಯಾ ಉಡಬಾಳ, ಜಗನ್ನಾಥ ರೆಡ್ಡಿ ಮಟಾಟಿ, ಗೋಪಾಲರೆಡ್ಡಿ ನಿರ್ಣಾ, ಬಸವರಾಜ ಗಾದಗಿ, ಭೀಮಶಾ ಬುಡ್ಡಾ, ಬಾಬು ಕಲ್ಲೂರ, ಜಗನ್ನಾಥ ಗಾರಿ, ಪ್ರಭು ಘಾಟೊಳ್ಳಿ ಗೋಪಾಲ ಸೂರಿ, ಹಲವಾರು ಭಕ್ತರು ಭಾಗವಹಿಸಿ ಸಾಲಾಗಿ ನಿಂತು ದರ್ಶನ ಪಡೆದು ಪ್ರಸಾದ ಸ್ವಿಕರಿಸಿ ಭಕ್ತಿ ಸಮರ್ಪಿಸಿದರು. ಈ ಸಂಧರ್ಭದಲ್ಲಿ ಶ್ರೀ ಬಕ್ಕಪ್ರಭುಗಳಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು.



ಕಲಬುರಗಿ: ನಗರದ ಮಾತೋಶ್ರೀ ನೀಲಗಂಗಮ್ಮ .ಜಿ ಅಂದಾನಿ ಆರ್ಟ್ ಗ್ಯಾಲರಿಯಲ್ಲಿಂದು ಆಯೋಜಿಸಿದ ಪ್ರಕೃತಿಯೊಂದಿಗೆ ಕಾವ್ಯಾತ್ಮಕ ಸ್ಪರ್ಶ ಕಾರ್ಯಕ್ರಮ : ಹಳೆಯ ಕೆತ್ತನೆಗಳು ಮತ್ತು ಲಿಥೋಗ್ರಾಫ್‌ಗಳ ಪ್ರದರ್ಶನವನ್ನು ಡಾ.ಪಿ.ಎಸ್ ಶಂಕರ್ ಉದ್ಘಾಟಿಸಿದರು.ಡಾ. ವಿ.ಜಿ ಅಂದಾನಿ,ಡಿ ಅನಂತಯ್ಯ,ಸತೀಶ ವಲ್ಯಾಪುರೆ,ಶೇಷರಾವ ಬಿರಾದಾರ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಶ್ರೀ ಘೋಣಸಿದ್ದೇಶ್ವರ ದೇವಸ್ಥಾನದಲ್ಲಿ ಅದ್ದೂರಿಯಾಗಿ ಅನ್ನ ದಾಸೋಹ ಜರುಗಿತು





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಪವಿತ್ರ ಶ್ರಾವಣ ಮಾಸದ ಕೊನೆಯ ಅಮಾವಾಸ್ಯೆದಂದು ಪಟ್ಟಣದ ಫಾತ್ಮಪುರ್ ಮತ್ತು ಇಟಗಾ ಸೀಮೆಯಲ್ಲಿರುವ ಪುರಾತನ ದೇವಸ್ಥಾನವಾದ ಶ್ರೀ ಘೋಣಸಿದ್ದೇಶ್ವರ ವಿಶೇಷ ಪೂಜೆ ಬೆಳಿಗ್ಗೆ ಜರುಗಿತ್ತು. ತದ ನಂತರ ಅನ್ನ ದಾಸೋಹ (ಖಾಂಡ್) ಜರುಗಿತ್ತು. ಫಾತ್ಮಪುರ್ ಮತ್ತು ಇಟಗಾ ಗ್ರಾಮಸ್ಥರು ಭಾಗವಹಿಸಿ ದೇವರ ದರ್ಶನ ಪಡೆದು ಪ್ರಸಾದ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಶ್ರೀನಿವಾಸ ರೆಡ್ಡಿ ಫಾತ್ಮಪುರ್, ನರಸಪ್ಪ ನರನಾಳ, ರಾಜಕುಮಾರ ಆರ್. ಹಡಪದ, ನರೇಂದ್ರರೆಡ್ಡಿ ರಾಂಪುರ, ಶಿವರಾಜ ನಂದಗಾಂವ, ಬಸವರೆಡ್ಡಿ ಇಟಗಾ, ನರಸಪ್ಪ ಇಟಗಾ, ರಮೇಶ ನಾಗರಾಳ, ದಿಗಂಬರ ಇಟಗಾ, ಮಹೇಬೂಬ್ ಮಚಕುರಿ, ಜಗನಾಥರೆಡ್ಡಿ ರಾಂಪುರ, ದಾನೇಶ್ ಚಿಟಗುಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಚಿಟಗುಪ್ಪ ––– ಪವಿತ್ರ ಶ್ರಾವಣ ಮಾಸದ ಕೊನೆಯ ಅಮಾವಾಸ್ಯೆಯ ಪ್ರಯುಕ್ತ ಹುಮನಾಬಾದ್ ತಾಲೂಕಿನ ಮಾಣಿಕ ನಗರ ಗ್ರಾಮದ ಶ್ರೀ ಮಾಣಿಕ ಪ್ರಭು ದೇವಸ್ಥಾನಕ್ಕೆ ದೇವಸ್ಥಾನದ ಪೀಠಾಧಿಪಿಗಳಾದ ಶ್ರೀ ಜ್ಞಾನರಾಜ್ ಮಹಾರಾಜರಿಗೆ ಭೇಟಿ ಮಾಡಿ ಪಟ್ಟಣದ ಪ್ರಕಾಶರೆಡ್ಡಿ ಮೂಡಬಿ, ನರೇಂದ್ರರೆಡ್ಡಿ ರಾಂಪುರ, ಧರ್ಮರಾಜ ಚಿಂಚೋಳಿ, ಪತ್ರಕರ್ತ ರಾಜಕುಮಾರ್. ಆರ್. ಹಡಪದ ಇವರುಗಳು ಪೂಜ್ಯರ ಆಶೀರ್ವಾದ ಪಡೆದರು. (ಮಲ್ಲಮ್ಮ ನುಡಿ ಚಿತ್ರ)

## ಪವಿತ್ರ ಶ್ರಾವಣ ಮಾಸದ ಕೊನೆಯ ದಿಂದದಂದು ಹನುಮಾನ್ ದೇವಸ್ಥಾನದಲ್ಲಿ ಅನ್ನ ದಾಸೋಹ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪವಿತ್ರ ಶ್ರಾವಣ ಮಾಸದ ನಿಮಿತ್ಯ ಪ್ರತಿ ದಿನವೂ ನಡೆಯುತ್ತಿದ್ದ ಪೂಜೆ, ಭಜನೆ ಕಾರ್ಯಕ್ರಮಗಳ ಸಮಾರೋಪ ಭಜನೆಯೊಂದಿಗೆ ವಿಜೃಂಭಣೆಯಿಂದ ನೆರವೇರಿತು. ಶ್ರಾವಣ ಮಾಸದ ಕೊನೆಯ ಅಮಾವಾಸ್ಯೆ ಪ್ರಯುಕ್ತ ಪಟ್ಟಣದ ಫಾತ್ಮಪುರನ ಜೈಭಜರಂಗಿಬಲಿ ಪ್ರಸನ್ನೇಯ ವಿಶೇಷ ಪೂಜೆ ಬೆಳಿಗ್ಗೆ ಜರುಗಿತ್ತು. ನಂತರ ಸಾಯಂಕಾಲ 5 ಘಂಟೆಗೆ ಅನ್ನದಾಸೋಹ ಜರುಗಿ–ತ್ತು. ಗ್ರಾಮದ ಗ್ರಾಮಸ್ಥರು ಹಾಗೂ ಸುತ್ತ ಮುತ್ತಲಿನ ಭಕ್ತರು ಆಗಮಿಸಿ ದೇವರ ದರ್ಶನ ಪಡೆದು, ಪ್ರಸಾದ ಸ್ವೀಕರಿಸಿಕೊಂಡರು. ಈ ಸಂದರ್ಭದಲ್ಲಿ ದೇವಸ್ಥಾನದ ಪಂಚ ಕಮಿಟಿಯ ಅಧ್ಯಕ್ಷ ಸಂಜೀವರೆಡ್ಡಿ ಮುಡಬಿ, ಉಪಾಧ್ಯಕ್ಷ ಜಗನ್ನಾಥ ಧನಗಾರ, ಸಂತೋಷ ಸ್ವಾಮಿ ಬಿರಾದಾರ್, ಸದಸ್ಯರಾದ ಮಹಾರುದ್ರಯ್ಯ ಸ್ವಾಮಿ ಬಿರಾದಾರ್, ಮಾಣಿಕರೆಡ್ಡಿ ರಾಂಪುರ, ಮಲ್ಲಿಕಾರ್ಜುನ ರೆಡ್ಡಿ ರಾಂಪುರ, ಮಲ್ಲಿಕಾರ್ಜುನ ಮಟ್ಟಿ, ರವೀಂದ್ರರೆಡ್ಡಿ ರಾಂಪುರ, ಪ್ರಕಾಶ ಪಾಟೀಲ್, ಶಿವಪುತ್ರ ರಾಂಪುರ, ಬಸಪ್ಪ ಚಿಂಚೋಳಿ, ಗುರು ಬಿರಾದಾರ್, ವಿಜಯಕುಮಾರ್ ನಂದಗಾಂವ, ಕಾಶಪ್ಪ ನಂದಗಾಂವ, ಹಣಮಂತರೆಡ್ಡಿ ರಾಂಪುರ, ಮಂಜುನಾಥ್ ಸ್ವಾಮಿ ಬಿರಾದಾರ್, ರವಿ ಖೇಳಗ್ಗಿ, ಹಿರಿಯರಾದ ಆಶೋಕ ಸ್ವಾಮಿ ಬಿರಾದಾರ್, ರಾಮರೆಡ್ಡಿ ಮುಡಬಿ, ಕರಬಸಯ್ಯಾ ಬಿರಾದಾರ್, ಪ್ರಮುಖರಾದ ರಾಜರೆಡ್ಡಿ ಮುಡಬಿ, ದೇವಿಂದ್ರ ಸೀತಾಳಗೇರಾ, ಸಂಗಯ್ಯಾ ಸ್ವಾಮಿ ಪೂಜಾರಿ, ಅನೀಲ ಪಾಟೀಲ್, ವೆಂಕಟ ಧನಗಾರ, ರಾಕೇಶ ಬಿರಾದಾರ್, ಶಿವಕುಮಾರ್ ಬಿರಾದಾರ್, ಈಶ್ವನಾಥ ಮಟ್ಟಿ, ಶ್ರೀಕಾಂತ ಮಟ್ಟಿ, ಪ್ರಕಾಶರೆಡ್ಡಿ ಮುಡಬಿ, ಧರ್ಮರೆಡ್ಡಿ ಚಿಂಚೋಳಿ, ನರೇಂದ್ರರೆಡ್ಡಿ ರಾಂಪುರ, ಭೀಮರೆಡ್ಡಿ ಚಿಂಚೋಳಿ, ರಾಜಕುಮಾರ ಆರ್. ಹಡಪದ, ಅಂಕುಶರೆಡ್ಡಿ, ಸಂಗ್ರಾಮರೆಡ್ಡಿ, ಆಕಾಶ ಬಿರಾದಾರ್ ಭೀಮಶಾ ನರನಾಳ, ಜಗನ್ನಾಥ ಗೋಣಗಿ, ನವೀನ ಸ್ವಾಮಿ ಸೇರಿದಂತೆ ಹಿರಿಯರು, ಮಹಿಳೆಯರು, ಮಕ್ಕಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಕೊಳ್ಳುರದಲ್ಲಿ ಶ್ರಾವಣಮಂಗಲ 25 ಕ್ಕೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.23 :ತಾಲ್ಲೂಕಿನ ಕೊಳ್ಳುರ ಗ್ರಾಮದ ಜಗದ್ಗುರು ಶಿವಲಿಂಗೇಶ್ವರಮಠದಲ್ಲಿ ಆ.25ರಂದು ಶ್ರಾವಣ ಮಾಸದ ಸಮಾರೋಪ ಕಾರ್ಯಕ್ರಮ ಜರುಗಲಿದೆ.

ಬೆಳಿಗ್ಗೆ 6ಕ್ಕೆ ರುದ್ರಾಭಿಷೇಕ ನಂತರ ಮೃತ್ಯುಂಜಯ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಶಿವಲಿಂಗೇಶ್ವರರ ಪಲ್ಲಕ್ಕಿ ಉತ್ಸವ ನಡೆಯಲಿದೆ.

ಗ್ರಾಮದ ಮನೆ ಮನೆಗೆ ಪಲ್ಲಕ್ಕಿ ಮೆರವಣಿಗೆಯಲ್ಲಿ ಪುರಂತರು ಡೊಳ್ಳು ಭಜನೆಯೊಂದಿಗೆ ಹೆಜ್ಜೆ ಹಾಕುವರು. ಗ್ರಾಮಸ್ಥರು ಪಲ್ಲಕ್ಕಿಗೆ ನೀರು ನೀಡಿ ಪುನೀತರಾದ ಬಳಿಕ ಮಹಾಪ್ರಸಾದದ ವ್ಯವಸ್ಥೆ ಮಾಡಲಾಗಿದೆ ಎಂದು ಸದ್ಭಕ್ತ ಮಂಡಳಿ ತಿಳಿಸಿದೆ.

# ಭಾರೀ ಮಳೆಗೆ ಹಲವು ಮನೆಗಳು ಜಲಾವೃತ: ಬಾಲರಾಜ್ ಗುತ್ತೇದಾರ ಭೇಟಿ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.23: ಭಾರೀ ಮಳೆಯಿಂದಾಗಿ ಜಿಲ್ಲೆಯಲ್ಲಿ ಜನಜೀವನ ಅಸ್ತವ್ಯಸ್ತವಾಗಿದ್ದು, ಚಿಂಚೋಳಿ ತಾಲ್ಲೂಕಿನ ಬೆನಕನಳ್ಳಿ ಗ್ರಾಮದ ಮನೆಗಳಿಗೆ ನೀರು ನುಗ್ಗಿರುವ ಘಟನೆ ನಡೆದಿದ್ದು. ಗ್ರಾಮಕ್ಕೆ ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ಬಾಲರಾಜ್ ಗುತ್ತೇದಾರ ಹಾಗೂ ಬಿಜೆಪಿ ಮುಖಂಡ ಜೆ.ಕೆ.ಪಾಟೀಲ್ ಭೇಟಿ ನೀಡಿ ಜನರಿಗೆ ಧೈರ್ಯ ಹೇಳಿದ್ದರು.

ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ಬಾಲರಾಜ್ ಗುತೆ–ೇದಾರ ಮಾತನಾಡಿ ನಿರಂತರವಾಗಿ ಸುರಿದ ಭಾರೀ ಮಳೆಯ ಪರಿಣಾಮ ಗ್ರಾಮದ ಹೊಸ ಬಡಾವಣೆಯ ಮನೆಗಳು ಜಲಾವೃತವಾಗಿದ್ದು, ಹಲವು ಮನೆಗಳಲ್ಲಿ ನೀರು ನುಗ್ಗಿದ ಪರಿಣಾಮ ದವಸ– ಧಾನ್ಯಗಳು ಹಾಳಾಗಿವೆ. ಕಳೆದ ಐದಾರು ವರ್ಷಗಳಿಂದ ಮಳೆ ಬಂದರೆ ಸಾಕು ಗ್ರಾಮದಲ್ಲಿರುವ ಜನರು ಆತಂಕದಲ್ಲಿ ಜೀವನ ಸಾಗಿಸುತ್ತಾರೆ. ಮನೆ ಹಾನಿ, ಬೆಳೆಹಾನಿ, ದಿನನಿತ್ಯ ಬಳಸುವ ವಸ್ತುಗಳು ಹಾನಿಯಿಂದ ಬೆಸತ್ತು ಹೋಗಿದ್ದಾರೆ. ಅಲ್ಲದೆ ಕಳೆದೆರಡು ವರ್ಷಗಳಿಂದ ಯಾವುದೇ ಪರಿಹಾರವು ನೀಡುತ್ತಿಲ್ಲ ಎಂದು ಸ್ಥಳೀಯರು ಆರೋಪಿಸಿತ್ತಿದ್ದು ಕೂಡಲೇ ಸಂಭದಪಟ್ಟ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ಮಳೆಯಿಂದ ನಷ್ಟವಾಗಿರುವ ಸಾಮಾಗ್ರಿಗಳೀಗೆ ಪರಿಹಾರ ನೀಡಬೇಕು ಹಾಗೂ ಪ್ರತಿಬಾರಿ ಹೆಚ್ಚಿನ ಮಳೆ ಬಂದರೆ ಗ್ರಾಮದ ಹೊಸ ಬಡಾವಣೆಯ ಮನೆಗಳು ಜಲಾವೃತವಾಗಿತ್ತಿದ್ದು ಮುಂಧೆ ಈ ರೀತಿ ಆಗದಂತೆ ಇದಕ್ಕೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದ್ದರು,ಈ ಸಂದರ್ಭದಲ್ಲಿ ಪಕ್ಷದ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಲಾಡಗೇರಿ ಹಿರೇಮಠದಲ್ಲಿ ಪರ್ವತಲಿಂಗ ಶಿವಾಚಾರ್ಯರ ಮೂರ್ತಿ ಪ್ರತಿಷ್ಠಾಪನೆ ಹಾಗೂ 108 ಬೆಳ್ಳಿಯ ಪತ್ರಿ ಬಿಲ್ವಾರ್ಚನೆ

ಮಲ್ಲಮ್ಮ ನುಡಿ ವಾರ್ತೆ ಬೀದರ. ಆ. 23: ನಗರದ ಹೈದ್ರಾಬಾದ್ ರಸ್ತೆ ಸಮಿಪ ಇರುವ ಲಾಡಗೇರಿ ಹಿರೇಮಠ ಸಂಸ್ಥಾನ ಅವರಣದಲ್ಲಿ ಗುರುವಾರ ಶ್ರೀಮಠದ ಶತಾಯುಷಿಗಳು ಹಾಗೂ ತಮ್ಮ ಪವಾಡ ಮುಖೇನ ಅಲ್ಲಿಯ ಭಕ್ತರ ಉದ್ದಾರಗೈದ ಲಿ.ಪೂಜ್ಯ ಪರ್ವತಲಿಂಗ ಶಿವಾಚಾರ್ಯರ ನೂತನ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಾಗೂ 108 ಬೆಳ್ಳಿಯ ಪತ್ರಿ ಬಿಲ್ವಾರ್ಚನೆ ಕಾರ್ಯಕ್ರಮ ಭಕ್ತಿ ಹಾಗೂ ಸಡಗರದಿಂದ ಜರುಗಿತು. ಅಂದು ಬೆಳಿಗ್ಗೆ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ ಹಾಗೂ ರುದ್ರಾಭಿಷಕ ಜರುಗಿತು. ತದನಂತರ ಮಠದ ಭಕ್ತರು ನೂತನ ಮೂರ್ತಿಗೆ ಹಣೆಮಣೆದು, ಪೂಜ್ಯರ ದರುಶನಗೈದು ಆರತಿ ಬೆಳಗಿದರು. ನಂತರ ಪೂಜ್ಯರ ಬಹುದಿನಗಳ ಸಂಕಲ್ಪದಂತೆ 501 ಜನ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಿತು. ಹಣೆಗಾಂವದ ಪೂಜ್ಯರಾದ ಶ್ರೀ ಶಂಕರಲಿಂಗ ಶಿವಾಚಾರ್ಯರು ಮಾತನಾಡಿ, ಪೂಜ್ಯ ಪರ್ವತಲಿಂಗ ಶಿವಾಚಾರ್ಯರು ಈ ಭಾಗದ ಭಕ್ತರ ಉದ್ದಾರ ಮಾಡಿದ ಪಾವನ ಮೂರ್ತಿಯಾಗಿದ್ದರು. ಗುರುವಿಗೆ ಶಿರಬಾಗಿ ನಡೆದರೆ ಜೀವನ ಸಾರ್ಥಕವಾಗುತ್ತದೆ ಧರ್ಮ ಕಾರ್ಯಗಳನ್ನು ಭಕ್ತರು ಮಾಡಿದಾಗ ಧರ್ಮ ಉಳಿಸಿದಂತಾಗುತ್ತದೆ ಲಾಡಿಗೇರಿ ಶ್ರೀ ಮಠಕ್ಕೆ ತಮ್ಮ ತನು ಮನದರದಿಂದ ಸಹಕರಿಸಬೇಕೆಂದು ಹೊಣೆಗಾವ್ ಶ್ರೀಗಳು ಹೇಳಿದರು. ಚಿಲ್ಲರ್ಗಿಯ ಪೂಜ್ಯ ಗುರುಪಾದ ಶಿವಾಚಾರ್ಯರು ಮಾತನಾಡಿ, ಪರ್ವತಲಿಂಗ ಶಿವಾಚಾರ್ಯರು ನಡೆದು ಬಂದ ದಾರಿಯಲ್ಲಿಯೇ ಈಗಿನ ಪೂಜ್ಯರಾದ ಪೂಜ್ಯ ಗಂಗಾಧರ ಶಿವಾಚಾರ್ಯರು ನಡೆದುಕೊಂಡು ಬರುತ್ತಿರುವರು. ನಿತ್ಯ ದಾಸೋಹ, ಭಕ್ತರಿಗೆ ಸಂಸ್ಕಾರ, ನಿತ್ಯ ಪೂಜೆ ಪುನಸ್ಕಾರ ಹಾಗೂ ದೀಕ್ಷೆ ಕಾರ್ಯಕ್ರಮ ಮಾಡಿಕೊಂಡು ಬರುತ್ತಿರುವರು ಎಂದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಮಾತನಾಡಿ ಪರ್ವತ ಲಿಂಗ ಶಿವಾಚಾರ್ಯರು ಕೇವಲ ಶತಾಯುಷಿಗಳಾಗಿರದೆ ಈ ಭಾಗದಲ್ಲಿ ಪವಾಡ ಪುಜ್ಜರಾಗಿಯೇ ಹೆಸರುವಾಸಿಯಾಗಿದ್ದರು. ಪರ್ವತಲಿಂಗ ಶಿವಾಚಾರ್ಯರ ಮೂರ್ತಿ ಇಂದು ನಿಜಕ್ಕೂ ಪವಾಡ ಸದೃಶವಾಗಿ ಕಾಣುತ್ತಿರುವುದು ಅಷ್ಟೇ ಸತ್ಯ ಎಂದು ಹೇಳಿದರು ಕಂಠಾಣ ಪದವಿಪೂರ್ವ ಮಹಾವಿದ್ಯಾಲಯದ ಉಪನ್ಯಾಸಕಿ ವಿದ್ಯಾವತಿ ಹಿರೇಮಠ ಮಾತನಾಡಿ, ಪರ್ವತಲಿಂಗ ಶಿವಾಚಾರ್ಯರು ಈ ಭಾಗದಲ್ಲಿ ಭಕ್ತರ ಉದ್ದಾರಕ್ಕಾಗಿ ಹಲವಾರು ಕಾರ್ಯಕ್ರಮಗಳನ್ನು ಮಾಡಿರುವರು. ಅವರು ತಮ್ಮ ಜೀವನದುದ್ದಕ್ಕೂ ಯಾವುದೇ ಆಸೆ ಆಮೀಷಗಳಿಗೆ ಬೆಲೆ ಕೊಡದೆ ಕೇವಲ ಭಕ್ತರಿಗೆ ಸಂಸ್ಕಾರ ಹಾಗೂ ಸದ್ಬುದ್ದಿ ನೀಡುವ ಕಾರ್ಯ ಮಾಡುತ್ತ ಸಾಗಿದ್ದರು. ಈಗ ಗಂಗಾಧರ ಶಿವಾಚಾರ್ಯರು ಸಹ ಅದೇ ಮಾರ್ಗವನ್ನು ಮುನ್ನಡೆಸಿಕೊಂಡು ಬರುತ್ತಿರುವುದು ಅಭಿಮಾನದ ಸಂಗತಿ ಎಂದು ಬಣ್ಣಿಸಿದರು. ಶ್ರೀಮಠದ ಅಧಿಪತಿ ಪೂಜ್ಯ ಗಂಗಾಧರ ಶಿವಾಚಾರ್ಯರು ಸಾನಿಧ್ಯವಹಿಸಿದ್ದರು. ಕಾರ್ಯಕ್ರಮದಲ್ಲಿ ಶ್ರೀಮಠದ ಭಕ್ತರಾದ ಮಲ್ಲಪ್ಪ ಹುಲೆಪ್ಪನೂರ್, ಚಂದ್ರಪ್ಪ ಅಷ್ಟೂರ್, ಶಿವರಾಜ ಅಷ್ಟೂರ್, ಅಮೃತ ವಡ್ಡಿ, ಬಂಡೆಪ್ಪ ಗಿರಿ, ಮಾಣಿಕ ನೇಳಗಿ, ನಾಗರಾಜ ಕರ್ಪುರ್, ಒಂದು ತಿಂಗಳ ಪರ್ಯಂತ ಭಜನೆ ನಡೆಸಿಕೊಂಡ ಬಂದ ಓಂ ಶಿವಶಕ್ತಿ ಬಳಗದ ಪ್ರಮುಖರಾದ ರೇವಣಪ್ಪ ಮೂಲಗೆ, ಕಾಶಿನಾಥ ಭಂಗುರೆ, ಬಸವರಾಜ ಸ್ವಾಮಿ, ಚಂದ್ರಶೇಖರ ರೆಡ್ಡಿ ಸೇರಿದಂತೆ ಲಾಡಗೇರಿ, ಹೂಗೇರಿ, ಹಳದಕೇರಿ ಹಾಗೂ ಜಿಲ್ಲೆ, ನೆರೆ ಜಿಲ್ಲೆಯ ನೂರಾರು ಸಂಖ್ಯೆಯಲ್ಲಿ ಶ್ರೀಮಠದ ಭಕ್ತರು ಕಾರ್ಯಕ್ರಮದಲ್ಲಿದ್ದರು. ನಂತರ ಮಹಾ ಪ್ರಸಾದ ಕಾರ್ಯಕ್ರಮ ನೆರವೇರಿತು. ಕಾರ್ಯಕ್ರಮದಲ್ಲಿ ಓಂ ಶಿವಶಕ್ತಿ ಸತ್ಸಂಗ ಬಳಗದ ಅಧ್ಯಕ್ಷ ಸಿದ್ರಾಮಯ್ಯ ಹಿರೇಮಠ ಸರ್ವರನ್ನು ಸ್ವಾಗತಿಸಿ, ಶ್ರೀ ರೇಣುಕ ಮಹೇಶ್ವರ ಸೌಹಾರ್ದ ಪತ್ತಿನ ಸಹಕಾರ ಸಂಘದ ಉಪಾಧ್ಯಕ್ಷ ಶ್ರೀಕಾಂತ ಸ್ವಾಮಿ ಸೋಲಪುರ ಕಾರ್ಯಕ್ರಮ ನಿರೂಪಿಸಿದರು.



# ಪಟ್ಟದ್ದೇವರಿಗೆ ಬಸವ ರತ್ನ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.23: ಪ್ರಸ್ತುತ ದಿನಗಳಲ್ಲಿ ನಾವು ಪರಿಸರದ ಮಹತ್ವ ತಿಳಿದು ಸಕಾಲಕ್ಕೆ ಉಳಿಸಿ ಬೆಳೆಸುವುದು ಅವಶ್ಯಕವಾಗಿದೆ ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು. ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲ ಆವರಣದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮತ್ತು ಸೂರ್ಯ ಫೌಂಡೇಶನ್ ಸಂಸ್ಥಾಪಕ ಪದ್ಮಶ್ರೀ ಜಯಪ್ರಕಾಶ್ ಅಗ್ರವಾಲ್ ಅವರ ಅಮೃತ ಮಹೋತ್ಸವದ ಅಂಗವಾಗಿ ಶನಿವಾರ ಆಯೋಜಿಸಿದ್ದ ಆರೋಗ್ಯ ಜನಜಾಗೃತಿ ಅಭಿಯಾನ ಕಾರ್ಯಕ್ರಮದಲ್ಲಿ ಸಸಿಗೆ ನೀರೆರೆಯುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಪರಿಸರದ ಕಾಳಜಿ ವಹಿಸುವುದು ನಮ್ಮೆಲ್ಲರ ಹೊಣೆಯಾಗಿದೆ. ಪ್ರಕೃತಿ ಪ್ರೇಮ ಪ್ರತಿಯೊಬ್ಬರಲ್ಲಿ ಬೆಳೆಯಬೇಕು. ಈ ನಿಟ್ಟಿನಲ್ಲಿ ಸಾಮಾಜಿಕ ಕಳಕಳಿಯುಳ್ಳ ಆರೋಗ್ಯ ಜನಜಾಗೃತಿ ಅಭಿಯಾನ ಹಮ್ಮಿಕೊಂಡಿರುವುದು ಅತ್ಯಂತ ಶ್ಲಾಘನೀಯವಾಗಿದೆ ಎಂದು ತಿಳಿಸಿದರು. ಸೂರ್ಯ ಫೌಂಡೇಶನ್ ರಾಜ್ಯ ಸಂಚಾಲಕ ಗುರುನಾಥ ರಾಜ–ಗೀರಾ ಮಾತನಾಡಿ, ಸೂರ್ಯ ಫೌಂಡೇಶನ್, ಇಂಟರ ನ್ಯಾಷನಲ್, ನ್ಯಾಚುರೋಪತಿ ಆರ್ಗನೈಜೆಶನ್ ಹಾಗೂ ಪತಂಜಲಿ ಯೋಗ ಸಮಿತಿಯ ಯುವ ಭಾರತ ಬೀದರ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡ ಈ ಅಭಿಯಾನದಲ್ಲಿ 75 ಕಡೆ ಯೋಗ ಹಾಗೂ ಪ್ರಾಕೃತಿಕ ಚಿಕಿತ್ಸಾ ಪದ್ದತಿ ಕುರಿತು ಉಪನ್ಯಾಸ, 75 ಜನರಿಂದ ರಕ್ತದಾನ ಶಿಬಿರ, 75 ಅರಳಿ ಮರ ನೆಡುವುದು ಹಾಗೂ ಆಯುಶ್ ಇಲಾಖೆಯ ಮೂಲಕ 75 ಜನ ಯೋಗ ಶಿಕ್ಷಕರ ನಿರ್ಮಾಣ ಮಾಡುವ ಕಾರ್ಯವನ್ನ ಸೂರ್ಯ ಫೌಂಡೇಶನ್ ಉಪಾಧ್ಯಕ್ಷ ಅನಂತ ಬಿರಾದಾರ ಅವರ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ನಡೆಯಲಿದೆ ಎಂದು ತಿಳಿಸಿದರು.

ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿದ್ದರು. ಈ ಸಂದರ್ಭದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರಷೋತ್ತಮ ಬಿಳಿಮಲೆ, ಇಂಟರ್ನ್ಯಾಶನಲ್ ಆರ್ಗನೈಜೇಶನ್ ರಾಷ್ಟ್ರೀಯ ಅಧ್ಯಕ್ಷ ಅನಂತ ಬಿರಾದಾರ, ಜಿಲ್ಲಾ ಕಸಾಪ

ಅಧ್ಯಕ್ಷ ಸುರೇಶ ಚನ್ನಶೆಟ್ಟಿ, ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ನಿರ್ದೇಶಕಿ ಡಾ.ಗೀತಾ ಈಶ್ವರ ಖಂಡ್ರೆ, ಗುರುನಾನಕ ಶಿಕ್ಷಣ ಸಂಸ್ಥೆ ಅಧ್ಯಕ್ಷೆ ರೇಷ್ಮಾ ಕೌರ, ಐ.ಎನ್.ಓ ಜಿಲ್ಲಾಧ್ಯಕ್ಷ ಗೋರಖನಾಥ ಕುಂಬಾರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂತೋಷ ಪಾಟೀಲ, ಜಿಲ್ಲಾ ಸಂಚಾಲಕ ಡಾ.ಮಂಜುಳಾ ಮುಚಳಂಬೆ, ಜಿಲ್ಲಾ ಉಪಾಧ್ಯಕ್ಷ ಹರಿದೇವ ರುದ್ರಮುನಿ, ಉಮಾದೇವಿ ಭಾಲ್ಕಿ ತಾಲೂಕು ಸಂಚಾಲಕ ಈಶ್ವರ ರುಮ್ಮಾ ಇದ್ದರು.

ಬಸವ ರತ್ನ ಪ್ರಶಸ್ತಿ ಪ್ರದಾನ

ಇದೇ ವೇಳೆ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರಿಗೆ ಸೂರ್ಯ ಫೌಂಡೇಶನ್ ಮತ್ತು ಇಂಟರ್ನ್ಯಾಶನಲ್ ನ್ಯಾಚುರೋಪತಿ ಆರ್ಗನೈಜೆಶನ್ ದೆಹಲಿ ವತಿಯಿಂದ ಬಸವ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ಇಂಟರ್ನ್ಯಾಶನಲ್ ಆರ್ಗನೈಜೇಶನ್ ರಾಷ್ಟ್ರೀಯ ಅಧ್ಯಕ್ಷ ಅನಂತ ಬಿರಾದಾರ ಅವರು ಪ್ರಶಸ್ತಿ ಪ್ರದಾನ ಮಾಡಿದರು.

# ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ ಬಗ್ಗೆ ಪಠ್ಯವಾಗಲಿ : ಪರಶುರಾಮ ಕರ್ಣ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:.23: ಅಕ್ಷರ ಸಂತ, ಹಿರೇಮಠ ಸಂಸ್ಥಾನದ ಹಿರಿಯ ಸ್ವಾಮೀಜಿ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ ಬಗ್ಗೆ ಪಠ್ಯ ಪುಸ್ತಕವಾಗಬೇಕು. ವಿದ್ಯಾರ್ಥಿಗಳು ಪಟ್ಟದ್ದೇವರ ಬಗ್ಗೆ ತಿಳಿಯುವಂತಾಗಲಿ ಎಂದು ಉಪನ್ಯಾಸಕ ಪರಶುರಾಮ ಕರ್ಣ ಅಭಿಪ್ರಾಯಪಟ್ಟರು. ಪಟ್ಟಣದ ವಿಶ್ವಹಿಂದೂ ಪರಿಷತ್ ಸಂಚಾಲಿತ ಖಡಕೇಶ್ವರ ಪ್ರೌಢಶಾಲೆಯಲ್ಲಿ ಡಾ. ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ಯ ಶನಿವಾರ ಆಯೋಜಿಸಿದ್ದ ಪಟ್ಟದ್ದೇವರು ನಡೆದು ಬಂದ ದಾರಿಯ ಬಗ್ಗೆ ಭಾಷಣಸ್ಪರ್ಧೆಯಲ್ಲಿ ಅವರು ಮಾತನಾಡಿದರು. ಈ ಭಾಗವನ್ನು ಕರ್ನಾಟಕದಲ್ಲಿ ಉಳಿಯಲು ಕಾರಣೀಭೂತರಾದ ಡಾ.ಚನ್ನಬಸವ ಪಟ್ಟದ್ದೇವರ ಕರ ಸಂಜಾತರಾದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು, ದೀನರ, ಅನಾಥರ ರಕ್ಷಾ ದಾತರಾಗಿದ್ದಾರೆ. ಅವರ ಬಗ್ಗೆ ಪ್ರಾಥಮಿಕ ಅಥವಾ ಪ್ರೌಢಶಿಕ್ಷಣದ ಪಠ್ಯ ಪುಸ್ತಕದಲ್ಲಿ ಪಾಠವಾದರೆ ಎಲ್ಲರೂ ಪೂಜ್ಯರ ಬಗ್ಗೆ ತಿಳಿಯುವಂತಾಗುವುದು ಎಂದು ಹೇಳಿದರು. ನಿವೃತ್ತ ಮುಖ್ಯ ಶಿಕ್ಷಕ ಜಯರಾಜ ದಾಬಶೆಟ್ಟಿ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಶೈಕ್ಷಣಿಕ ಕ್ರಾಂತಿ ಮಾಡಿದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಅನಾಥರ ಪಾಲಿನ ಆಶಾ ಕಿರಣವಾಗಿದ್ದಾರೆ. ಅವರು ನಡೆದುಬಂದ ದಾರಿಯ ಬಗ್ಗೆ ಇಲ್ಲಿಯ ವಿದ್ಯಾರ್ಥಿಗಳು ಮನಮುಟ್ಟುವಂತೆ ತಿಳಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಮುಖ್ಯ ಶಿಕ್ಷಕ ಆನಂದ ಕಲ್ಯಾಣೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇದೇವೇಳೆ ವಿದ್ಯಾರ್ಥಿಗಳಾದ ಅಹಲ್ಯಾ ದತ್ತಾತ್ರಿ ಕಾಟಕರ, ಆಕಾಂಶಿ ಉಮೇಶ, ಜೀಜಾವು ಬಾಲಾಜಿ, ಪಾರ್ವತಿ ದಿಲೀಪ, ಅಂಜಲಿ ಲಿಂಗರಾಜ, ಸೌಮ್ಯಶ್ರೀ ಶಶಿಕಾಂತ, ಪ್ರಶನ್ನ ಶಿವಕುಮಾರ ಸೇರಿದಂತೆ ಹಲವಾರು ವಿದ್ಯಾರ್ಥಿಗಳು ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ ಬಗ್ಗೆ ಮಾತನಾಡಿದರು. ಇವರಲ್ಲಿ ವಸತಿ ನಿಲಯ ವ್ಯವಸ್ಥಾಪಕ ಬಸವರಾಜ ಮಾಳಗೆ ಪ್ರಾಯೋಜಿಕತ್ವದಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ತೆಗೆದು ಬಹುಮಾನ ವಿತರಿಸಲಾಯಿತು. ವಿದ್ಯಾರ್ಥಿನಿ ಅಹಲ್ಯಾ ಕಾಟಕರ್ ಪ್ರಥಮ ಮತ್ತು ಆಕಾಂಶಿ ಉಮೇಶ ದ್ವಿತೀಯ ಸ್ಥಾನ ಪಡೆದರು. ದಿಲೀಪ ಘಂಟೆ, ಉದಯಕುಮಾರ ಜೋಶಿ ಉಪಸ್ಥಿತರಿದ್ದರು. ಆನಂದ.ಕೆ ಸ್ವಾಗತಿಸಿದರು. ದಿಲೀಪ ನಿರೂಪಿಸಿದರು. ಉದಯಕುಮಾರ ವಂದಿಸಿದರು.



# ಸರ್ಕಾರ ತಕ್ಷಣ ರೈತರ ನೆರವಿಗೆ ಬರಲಿ

ಬೀದರ್:ಅ.23: ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಶನಿವಾರ ಬೀದರ್ ದಕ್ಷಿಣ ಕ್ಷೇತ್ರದ ವಿವಿಧೆಡೆ ದಿನವಿಡೀ ಸಂಚರಿಸಿ ಇತ್ತೀಚೆಗೆ ಅತಿವೃಷ್ಟಿಯಿಂದ ಆಗಿರುವ ಬೆಳೆ ನಷ್ಟ ಹಾಗೂ ಸಾರ್ವಜನಿಕ ಆಸ್ತಿಪಾಸ್ತಿ ಹಾನಿಯನ್ನು ಪರಿಶೀಲಿಸಿದರು.

ಕಮಠಾಣಾ, ಬಗದಲ್, ಮನ್ನಳ್ಳಿ ಹೋಬಳಿ ವ್ಯಾಪ್ತಿಯಲ್ಲಿ ಬರುವ ವಿವಿಧ ಗ್ರಾಮಗಳ ಹೊಲಗಳಿಗೆ ತೆರಳಿ ವ್ಯಾಪಕ ಮಳೆಯಿಂದ ಆಗಿರುವ ಬೆಳೆ ಹಾನಿ ವೀಕ್ಷಿಸಿದರು. ವಾಡಿಕೆಗಿಂತ ಸುರಿದ ಅಧಿಕ ಮಳೆ, ಕಾರಂಜಾ ಹಿನ್ನೀರು, ಕೊತ್ತೂರ್ ಬ್ಯಾರೇಜಿನಿಂದ ನೀರು ಬಿಟ್ಟಿದ್ದರಿಂದ ಉದ್ಭವಿಸಿದ ಸಮಸ್ಯೆ, ಹಳ್ಳ–ಸೇತುವೆ ಪಕ್ಕಕ್ಕೆ ನೀರು ನುಗ್ಗಿ ಅಪಾರ ಹಾನಿಯಾಗಿರುವುದನ್ನು ಪರಿಶೀಲಿಸಿದರು. ಸಮೃದ್ಧವಾಗಿ ಬಂದಿದ್ದ ಉದ್ದು, ಹೆಸರು, ಸೋಯಾಬೀನ್, ತೊಗರಿ ತೆ–ೋಟಗಾರಿಕೆಯ ಮುಂತಾದ ಬೆಳೆ ಹಾಳಾಗಿರುವುದು ವೀಕ್ಷಿಸಿ ಸಂತ್ರಸ್ತ ರೈತರಿಂದ ಮಾಹಿತಿ ಕಲೆ ಹಾಕಿದರು.



ಬುಧೇರಾ–ಮಿರ್ಜಾಪುರ(ಟಿ) ನಡುವಿನ ಹಳ್ಳ ತುಂಬಿ ಹರಿದ ಕಾರಣ ಅಕ್ಕಪಕ್ಕದ ನೂರಾರು ಎಕರೆ ಹೊಲದಲ್ಲಿನ ಬೆಳೆ ಸಂಪೂರ್ಣ ಕೊಚ್ಚಿಕೊಂಡು ಹೋಗಿವೆ. ಈ ಹಳ್ಳಕ್ಕೆ ಕಮಠಾಣಾ ಕಡೆಯಿಂದ ಭಾರಿ ನೀರು ಬರುತ್ತವೆ. ಹಳ್ಳದಲ್ಲಿ ಭಾರಿ ಹೂಳು ತುಂಬಿದ್ದರಿಂದ ಹಾಗೂ ನೀರು ಸುಗಮ ಹೋಗಲು ಮಾರ್ಗವಿಲ್ಲದ ಕಾರಣ ಸ್ವಲ್ಪವೇ ಜಾಸ್ತಿ ಮಳೆ ಬಿದ್ದರೂ ಅಕ್ಕಪಕ್ಕದ ಜಮೀನಿಗೆ ನೀರು ನುಗ್ಗಿ ಭಾರಿ ಹಾನಿಯಾಗುತ್ತಿದೆ. ಹಲವು ಜಮೀನಿನಿಂದ ಫಲವತ್ತಾದ ಮಣ್ಣು ಸಹ ಕೊಚ್ಚಿಹೋಗಿದೆ. ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ರೈತರು ಶಾಸಕರೆದುರು ಗೋಳು ತೋಡಿ–ಕೊಂಡರು.

ಸ್ಥಳದಲ್ಲಿದ್ದ ವಿವಿಧ ಇಲಾಖೆ ಅಧಿಕಾರಿಗಳ ಜೊತೆಗೆ ಈ ಬಗ್ಗೆ ಚರ್ಚಿಸಿದ ಶಾಸಕರು, ಹಳ್ಳದಲ್ಲಿ ಹೂಳುತ್ತುವಿಕೆ,

ಸಣ್ಣ ಸೇತುವೆ ಎತ್ತರಿಸುವಿಕೆ, ನೀರು ಸುಗಮ ಹೋಗುವ ನಿಟ್ಟಿನಲ್ಲಿ ಸಮಗ್ರ ಯೋಜನೆ ರೂಪಿಸಿ ವರದಿ ಸಿದ್ಧಪಡಿಸಲು ತಿಳಿಸಿದರು. ಕ್ಷೇತ್ರದಲ್ಲಿ ಹಾಳಾಗಿರುವ ರಸ್ತೆ, ಸೇತುವೆ ದುರಸ್ತಿಗೆ ಕ್ರಮ ಕೈಗೊಳ್ಳಬೇಕು. ವಿದ್ಯುತ್ ಕಂಬ, ಟ್ರಾನ್ಸ್ ಫರ್ಮರ್ ಸಾಕಷ್ಟು ಕಡೆ ಹಾಳಾಗಿದ್ದು, ಕೂಡಲೆ ಸರಿಪಡಿಸಿ ವಿದ್ಯುತ್ ಸಮಸ್ಯೆ ನಿವಾರಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಕಂದಾಯ, ಕೃಷಿ, ತೋಟಗಾರಿಕೆ ಅಧಿಕಾರಿಗಳು ಬೆಳೆ ಹಾನಿ ಬಗ್ಗೆ ಸಮರ್ಪಕ ಸಮೀಕ್ಷೆ ನಡೆಸಬೇಕು. ಯಾವೊಬ್ಬ ರೈತರು ಸಹ ಸಮೀಕ್ಷೆಯಿಂದ ಹೊರಗಿರಬಾರದು ಎಂದು ತಾಕೀತು ಮಾಡಿದರು.

ಅತಿವೃಷ್ಟಿಯಿಂದಾಗಿ ದಕ್ಷಿಣ ಕ್ಷೇತ್ರದಲ್ಲಿ 3 ಸಾವಿರ ಎಕರೆಗೂ ಅಧಿಕ ಬೆಳೆ ನಷ್ಟವಾಗಿದೆ. ನೂರಾರು ಮನೆಗಳು ಕುಸಿದಿವೆ. ಸಾರ್ವಜನಿಕ ಆಸ್ತಿಪಾಸ್ತಿ ನಷ್ಟವಾಗಿದೆ. ನಿಖರ ಹಾನಿ ಬಗ್ಗೆ ಸಮರ್ಪಕ ಸಮೀಕ್ಷೆ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಬೆಳೆ ನಷ್ಟದಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಸರ್ಕಾರ ಪ್ರತಿ ಹೆಕ್ಟೇರ್ ಗೆ 50 ಸಾವಿರ ರೂ.ಪರಿಹಾರ ನೀಡಿ ನೆರವಿಗೆ ಬರಬೇಕು.

ಈಗಾಗಲೇ ವಿಧಾನಸಭೆ ಅಧಿವೇಶನದಲ್ಲೂ ಕ್ಷೇತ್ರದ ಸಮಸ್ಯೆ ಕುರಿತು ಸರ್ಕಾರದ ಗಮನ ಸೆಳೆಯಲಾಗಿದೆ. ಬೆಳೆನಷ್ಟ ಅನುಭವಿಸಿದ ರೈತರು ಧೃತಿಗೆಡುವ ಅಗತ್ಯವಿಲ್ಲ. ಅಗತ್ಯ ನೆರವು, ಪರಿಹಾರಕ್ಕೆ ನಿಮ್ಮ ಪರವಾಗಿ ಸರ್ಕಾರದ ಮಟ್ಟದಲ್ಲಿ ಪ್ರಯತ್ನ ಮಾಡುವುದಾಗಿ ಶಾಸಕರು ಅಭಯ ನೀಡಿದರು.

ಬಳಿಕ ಅಧಿಕಾರಿಗಳ ಸಭೆ ನಡೆಸಿ ರೈತರಿಗೆ ನ್ಯಾಯ ಒದಗಿಸಿ ಕೊಡುವುದು ನಮ್ಮೆಲ್ಲರ ಕರ್ತವ್ಯ ಹೀಗಾಗಿ ಅಧಿಕಾರಿಗಳು ರೈತರ ಬೆಳೆ ಹಾನಿ ಕುರಿತು ಶೀಘ್ರ ಸರ್ಕಾರಕ್ಕೆ ವರದಿ ಸಲ್ಲಿಸಿ ರೈತ ಸಂತ್ರಸ್ತರಿಗೆ ಪರಿಹಾರ ದೊರೆಯುವಂತಾಗಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ರವೀಂದ್ರ ದಾಮಾ,

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ, ಜಂಟಿ ಕೃಷಿ ನಿರ್ದೇಶಕರಾದ ದೇವಿಕಾ, ಸಹಾಯಕ ಕೃಷಿ ನಿರ್ದೇಶಕರಾದ ಆರತಿ ಪಾಟೀಲ,

ಜೆಸ್ಕಾಂ ಎಇಇ ವಿಜಯಕುಮಾರ ಪಾಂಚಾಳ, ಟಿಎಚ್ಓ ಸಂಗಾರೆಡ್ಡಿ, ತಾಪಂ ಸಹಾಯಕ ನಿರ್ದೇಶಕರಾದ ಸಂಜುಕುಮಾರ, ಸುದೇಶ್, ಕಂದಾಯ ಇಲಾಖೆಯ ಅಧಿಕಾರಿಗಳು ರೈತರು, ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕ ಮತ್ತಿತರರು ಉಪಸ್ಥಿತರಿದ್ದರು.

# ಕೆಂಭಾವಿ: ಭೂಕೈಲಾಸ ಭೋಗೇಶ್ವರ ಕುಂಭಮೇಳ ಇಂದು ಭಕ್ತಿಭಾವದಿಂದ ಆಚರಣೆ.!

ಸುರಪುರ : ಇಂದು (24–08–2025) ರವಿವಾರ , ಕೆಂಭಾವಿ ಪಟ್ಟಣದಲ್ಲಿ ಶ್ರೀ ಭೂಕೈಲಾಸ ಭೋಗೇಶ್ವರ ಕುಂಭಮೇಳ ಧಾರ್ಮಿಕ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರುತ್ತಿದೆ.



ಈ ಮಹತ್ವದ ಕೂಟದಲ್ಲಿ ಶರಣಬಸವೇಶ್ವರ ದೇವಸ್ಥಾನದಿಂದ ಶ್ರೀ ಭೂಕೈಲಾಸ ಭೋಗೇಶ್ವರ ದೇವಸ್ಥಾನದವರೆಗೆ 251 ಕುಂಭಗಳೊಂದಿಗೆ ಶೋಭಾಯಾತ್ರೆ ವಿಜೃಂಭಣೆಯಿಂದ ನಡೆಯುತ್ತಿದೆ. ಈ ಕುರಿತು ರಾಜಶೇಖರಯ್ಯ ಹಿರೇಮಠ ತಿಳಿಸಿದ್ದಾರೆ:"ಈ ಕುಂಭಮೇಳವು ಭಕ್ತರಲ್ಲಿ ಭಕ್ತಿ,ಶ್ರದ್ಧೆ ಹಾಗೂ ಸಾಮಾಜಿಕ ಏಕತೆಗೆ ಪೂರಕವಾಗಲಿದೆ. ನೂರಾರು ಭಕ್ತರು ಈ ಧಾರ್ಮಿಕ ಉತ್ಸವದಲ್ಲಿ ಭಾಗವಹಿಸುತ್ತಿದ್ದಾರೆ. ಈದು ಗ್ರಾಮೀಣ ಸಂಸ್ಕೃತಿ ಮತ್ತು ನಂಬಿಕೆಗಳನ್ನು ಹಿರಿದಾಳಿಸುತ್ತಿರುವಂತಹ ದಿವ್ಯ ಕ್ಷಣ."ಕಾರ್ಯಕ್ರಮದಲ್ಲಿ ವಿವಿಧ ಧಾರ್ಮಿಕ ಆಚರಣೆಗಳು, ಭಜನೆ, ಪಲ್ಲಕ್ಕಿ ಉತ್ಸವ, ಹಾಗೂ ಮಹಾಪ್ರಸಾದದ ವ್ಯವಸ್ಥೆ ಮಾಡಲಾಗಿದೆ.

# ಧರ್ಮಸ್ಥಳ ವಿರುದ್ಧ ನಡೆದ ಷಡ್ಯಂತ್ರ ವಿರೋಧಿಸಿ ಜಿಲ್ಲಾದ್ಯಂತ ಬಿಜೆಪಿಯಿಂದ ಪ್ರತಿಭಟನೆ

ಬೀದರ. ಆ. 23 : ಧರ್ಮಸ್ಥಳ ಕ್ಷೇತ್ರದ (ಧರ್ಮಸ್ಥಳ ಟೆಂಪಲ್) ವಿರುದ್ಧ ನಡೆದ ಷಡ್ಯಂತ್ರ, ಒಳಸಂಚು ಮತ್ತು ಕುತಂತ್ರವನ್ನು ವಿರೋಧಿಸಿ ಹಾಗೂ ಧರ್ಮ ರಕ್ಷಣೆಗಾಗಿ ಜಿಲ್ಲಾ ಭಾರತೀಯ ಜನತಾ ಪಾರ್ಟಿಯಿಂದ ಬೀದರ ಜಿಲ್ಲೆಯ ವಿವಿಧ ತಾಲೂಕಗಳಾದ ಬೀದರ ಮತ್ತು ಔರಾದನಲ್ಲಿ ಅಗಸ್ಟ 25 ಹಾಗೂ ಭಾಲ್ಕಿ, ಹುಮನಾಬಾದ





, ಬಸವಕಲ್ಯಾಣ ತಾಲೂಕುಗಳಲ್ಲಿ ಅಗಸ್ಟ 26 ರಂದು ತಹಸೀಲ್ದಾರ ಕಚೇರಿ ಎದುರುಗಡೆ

ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಕಾರ್ಯದರ್ಶಿ ಹಾಗೂ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷರಾದ ಸೊಮನಾಥ ಪಾಟೀಲ ಅವರು ಜಂಟಿಯಾಗಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ..

ಆದ್ದರಿಂದ ಜಿಲ್ಲೆಯ ಪಕ್ಷದ ಚುನಾಯಿತ ಪ್ರತಿನಿಧಿಗಳು ,ಪದಾಧಿಕಾರಿಗಳು,

ಕಾರ್ಯಕರ್ತರು, ಸಮಾಜದ ವಿವಿಧ ಸಂಘಟನೆಗಳು ಹೆಚ್ಚಿನ ಭಾಗವಹಿಸಿ ಧರ್ಮ ರಕ್ಷಣೆಗಾಗಿ ನಡೆಯುವ ಈ ಬೃಹತ್ ಪ್ರತಿಭಟನೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದ್ದಾರೆ.

# ಶಾಸಕ ಯತ್ನಾಳ್ ವಿವಾದಾತ್ಮಕ ಹೇಳಿಕೆ ವಿರುದ್ಧ ದೂರು – ಕಾನೂನು ಕ್ರಮಕ್ಕೆ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ವಿಜಯಪುರ ನಗರ ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್ ಅವರು ನೀಡಿದ ವಿವಾದಾತ್ಮಕ ಹೇಳಿಕೆಯ ವಿರುದ್ಧ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಅವರು "ಮುಸ್ಲಿಂ ಹೆಣ್ಣು ಮಕ್ಕಳಿಗೆ ಮದುವೆಯಾದವರಿಗೆ ₹5 ಲಕ್ಷ ನೀಡುತ್ತೇನೆ" ಎಂಬ ಹೇಳಿಕೆ ನೀಡಿರುವುದು ಮುಸ್ಲಿಂ ಮಹಿಳೆಯರ ಗೌರವಕ್ಕೆ ಧಕ್ಕೆ ಉಂಟುಮಾಡಿದಂತದ್ದು ಹಾಗೂ ಸಮಾಜದಲ್ಲಿ ಜಾತಿ–ಧರ್ಮಗಳ ಮಧ್ಯೆ ವೈಮನಸ್ಸು ಸೃಷ್ಟಿಸುವಂತದ್ದು ಎಂದು ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ.




ಈ ಕುರಿತು ಸಭಾಧ್ಯಕ್ಷರಾದ ಯು.ಟಿ. ಖಾದರ್ ಅವರಿಗೆ ಯಾದಗಿರಿ ಜಿಲ್ಲಾಣಟಿಜಜಿಟಿಜಜಧಿಕಾರಿಗಳ ಮುಖಾಂತರ ಮನವಿ ಸಲ್ಲಿಸಲಾಗಿದೆ.

"ಕರ್ನಾಟಕ ಶಾಂತಿಯುತ ರಾಜ್ಯವಾಗಿದ್ದು, ಇಂತಹ ಹೇಳಿಕೆಗಳು ಸಮಾಜದಲ್ಲಿ ವಿಷ ಬೀಜ ಬಿತ್ತುವಂತದ್ದು. ಈ ಹೇಳಿಕೆ ಮುಸ್ಲಿಂ ಹೆಣ್ಣು ಮಕ್ಕಳಿಗೆ ಅವಮಾನಕಾರಿ ಹಾಗೂ ಅವಹೇಳನಕಾರಿ. ಆದ್ದರಿಂದ ಶಾಸಕರ ವಿರುದ್ಧ ದೇಶದ್ರೋಹದಡಿ ಪ್ರಕರಣ ದಾಖಲಿಸಿ, ಗಡಿಪಾರು ಮಾಡಿ, ಶಿಸ್ತುಕ್ರಮ ಕೈಗೊಳ್ಳಬೇಕೆಂದು "ಕರ್ನಾಟಕ ನ್ಯಾಯ ಕ್ರಾಂತಿ ಸಂಘಟನೆಯ ಕಲ್ಯಾಣ ಕರ್ನಾಟಕದ ಅಧ್ಯಕ್ಷರಾದ ಬಿಕೆ ನಾಸಿ ಅವರು ಆಗ್ರಹಿಸಿದ್ದಾರೆ"

ಮನವಿದಾರರು ಇಂತಹ ಪ್ರಚೋದನಕಾರಿ ಹೇಳಿಕೆಗಳನ್ನು ತೀವ್ರವಾಗಿ ಖಂಡಿಸಿದ್ದು, ಶಾಂತಿ–ಸಾಮರಸ್ಯ ಕಾಪಾಡುವಂತೆ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

# ಕಡೆ ಶ್ರಾವಣ ಶನಿವಾರ ಕುಪ್ಪಿಭೀಮ ದೇವಸ್ಥಾನದಲ್ಲಿ ವಿಶೇಷ ಪೂಜೆ

ಮಲ್ಲಮ್ಮ ನುಡಿವಾರ್ತೆ

ಲಿಂಗಸುಗೂರು:ಪುರಸಭೆ ವ್ಯಾಪ್ತಿಯಲ್ಲಿ ಬರುವ ಕಸಬಾ ಲಿಂಗಸುಗೂರು ಗ್ರಾಮದ ಆರಾಧ್ಯ ದೈವ ಕುಪ್ಪಿಭೀಮ ದೇವಸ್ಥಾನದಲ್ಲಿ ಪ್ರತಿ ವರ್ಷದಂತೆ ಈ ವರ್ಷವು ಶ್ರಾವಣ ಮಾಸದ ಕಡೆ ಶನಿವಾರ ಪ್ರಯುಕ್ತ ಶ್ರೀರಾಮ ತೀರ್ಥದಲ್ಲಿ ಇರುವ ಶ್ರೀರಾಮ ತೀರ್ಥ ದಲ್ಲಿ ಕುಪ್ಪಿಭೀಮ ದೇವರಿಗೆ ಅಭಿಷೇಕ ಮಾಡಲಾಯಿತು.ನಂತರ ಕುಪ್ಪಿಭೀಮ ದೇವರಿ ಗೆ ಹೂವು ಹಾಗೂ ತುಳಸಿ ಹಾರ ಹಾಕಿ ವಿಶೇಶ ಅಲಂಕಾರ ದೇವಸ್ಥಾನ ದಲ್ಲಿ ಶ್ರಾವಣ ಮಾಸದ ನಿಮತ್ಯ ಭಜನೆ ಮುಕ್ತಾಯ ಗೋಳಿಸಲಾಯಿತು. ಮತ್ತು ದೇವಸ್ಥಾನಕ್ಕೆ ಬಂದಂತ ಭಕ್ತಾದಿಗರಿಗೆ ಮಹಾ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.ದೇವಸ್ಥಾನ ಸಮಿತಿ ಅಧ್ಯಕ್ಷರು ಹಾಗೂ ತಹಶಿಲ್ದಾರರು ಸತ್ಯಮ್ಮ , ಕಾರ್ಯದರ್ಶಿಗಳು ವಿಜಯೇಂದ್ರ ದಾಸ, ದೇವಸ್ಥಾನ ಸಮಿತಿ ಸದಸ್ಯರುಗಳಾದ ಸಿದ್ದನಗೌಡ ಪಾಟೀಲ್,ರಾಮಯ್ಯ ಗುತ್ತೇದಾರ, ಅಮರೇಶ ಹೊರಪೇಟಿ, ಭೀಮಣ್ಣ ಹೀರೆಮನಿ,ಮತ್ತು ಗ್ರಾಮದ ಹೀರಿಯರು,ಯುವಕರು ಸೇರಿ ದೇವಸ್ಥಾನ ಅನ್ನಸಂತರ್ಪಣೆ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಿದ್ದರು.



# ಯೂರಿಯಾ ಗೊಬ್ಬರಕ್ಕಾಗಿ ಮುಂದುವರಿದ ರೈತರ ಗೋಳಾಟ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ತಾಲೂಕಿನ ಇರ್ಕಲ್ಲಗಡ ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದ ಹತ್ತಿರ ರಾತ್ರಿಯಿಂದಲೇ ಮಹಿಳೆಯರು ಪುರುಷರು ಯೂ–ರಿಯಾ ಗೊಬ್ಬರಕ್ಕಾಗಿ ಕೃಷಿ ಪತ್ತಿನ ಸಹಕಾರಿ ಸಂಘದ ಮುಂದೆ ಸರದಿ ಸಾಲಿನಲ್ಲಿ ನಿಂತಿದ್ದು ಕಂಡುಬಂದಿತು ಯೂರಿಯಾ ಗೊಬ್ಬರ ಪಡೆದುಕೊಳ್ಳುವುದಕ್ಕಾಗಿ ಕಾದು ಕಾದು ಸುಸ್ತಾದರು ಆದರೆ ಇವರಿಗೆ ಮಧ್ಯಾಹ್ನದವರಿಗೆ ತಡವಾಯಿತು ಪರಿಸ್ಥಿತಿಯನ್ನು ನಿಭಾಯಿಸಲು ಪೊಲೀಸ್ ಸಿಬ್ಬಂದಿಯವರು ಅರಸಹಸ ಪಟ್ಟರು. ಸ್ಥಳೀಯ ರೈತ ಮುಖಂಡರು ಮಾತನಾಡಿ ಪ್ರತಿಸಲ ಗೊಬ್ಬರ ಬರುವುದು 200 ಚೀಲಗಳು ಮಾತ್ರ ಅವಶ್ಯಕತೆ ಇರುವುದು ಸಾವಿರದಿಂದ ಎರಡು ಸಾವಿರ ರೈತರಿಗೆ ಇವರು ಕೊಡುವ ಗೊಬ್ಬರ ಕೇವಲ ನೂರು ರೈತರಿಗೂ ಸಾಲುವುದಿಲ್ಲ ಬಿತ್ತಿದ ಬೆಳೆ ಗೊಬ್ಬರ ಹಾಕಿಲ್ಲವೆಂದರೆ ಕೈಗೆ ಪಸಲು ಇಟ್ಟೋವದಿಲ್ಲ ಎಂದು ತಮ್ಮ ಅಕ್ರೋಶವನ್ನು ವ್ಯಕ್ತಪಡಿಸಿದರು ಸಹಕಾರಿ ಸಂಘದ ಅಧ್ಯಕ್ಷರಾದ ಗಿರೀಶ್ ಪಟ್ಟಣಶೆಟ್ಟಿ ಮಾತನಾಡಿ ಈ ಮೊದಲು ಗೊಬ್ಬರವನ್ನು ವಿತರಿಸಲಾಗಿದೆ ಇಂದು ಶನಿವಾರ 400 ಚೀಲ ಯೂರಿಯ ಗೊಬ್ಬರ ಬಂದಿದೆ ಒಬ್ಬ ರೈತನಿಗೆ ತಲಾ ಎರಡು ಚೀಲ ವಿತರಿಸಲಾಗುವುದು ಇನ್ನು ಉಳಿದ ರೈತರಿಗೆ ಮುಂದಿನ ವಾರದಲ್ಲಿ ಮತ್ತೆ ಯೂರಿಯ ಗೊಬ್ಬರು ಬರಲಿದ್ದು ಎಲ್ಲಾ ರೈತರಿಗೆ ವಿತರಿಸಲಾಗುವುದು ಎಂದು ಹೇಳಿದರು ಸಹಾಯಕ ಕೃಷಿ ಅಧಿಕಾರಿ ಯೋಗೀಶ್ ಮಾತನಾಡಿ ಸಮರ್ಪಕವಾಗಿ ಯುರಿಯ ಗೊಬ್ಬರ ಎಲ್ಲಾ ರೈತನಿಗೆ ಮುಟ್ಟಿಸುವ ವ್ಯವಸ್ಥೆ ಮಾಡಲಾಗುವುದು ಮೇಲಾಧಿಕಾರಿಗಳ ಗಮನಕ್ಕೆ ತಂದು ಇನ್ನೂ ಉಳಿದ ರೈತರಿಗೆ ಮುಂದಿನ ವಾರದಲ್ಲಿ ವಿತರಿಸಲಾಗುವುದು ಎಂದು ಹೇಳಿದರು.

# ಜೇವರ್ಗಿ: ಪ್ರಥಮ ಪಿ.ಯು.ಸಿ. ತರಗತಿಯ ಪ್ರವೇಶಕ್ಕೆ ಅರ್ಜಿ ಆಹ್ವಾನ

ಕಲಬುರಗಿ,ಆ.23––ಜೇವರ್ಗಿ (ಬಿ.ಸಿ–301) ಮೊರಾರ್ಜಿ ದೇಸಾಯಿ ಪ.ಪೂ ವಸತಿ ವಿಜ್ಞಾನ ಕಾಲೇಜಿನಲ್ಲಿ 2025–26ನೇ ಸಾಲಿನಲ್ಲಿ ಪ್ರಥಮ ಪಿ.ಯು.ಸಿ.ತರಗತಿಯ (ಪಿ.ಸಿ.ಎಮ್.ಬಿ. ಮತ್ತು ಪಿ.ಸಿ.ಎಮ್.ಸಿ.) ಪ್ರವೇಶ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜೇವರ್ಗಿ (ಬಿ.ಸಿ–301) ಮೊರಾರ್ಜಿ ದೇಸಾಯಿ ಪ.ಪೂ ವಸತಿ ವಿಜ್ಞಾನ ಕಾಲೇಜಿನ ಪ್ರಾಂಶುಪಾಲರು ತಿಳಿಸಿದ್ದಾರೆ.

2024–25ನೇ ಶೈಕ್ಷಣಿಕ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ತರಗತಿಗಳಲ್ಲಿ ವ್ಯಾಸಂಗ ಮಾಡಿರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ /ಏಕಲವ್ಯ ಮಾದರಿ/ಅಟಲ್ ಬಿಹಾರಿ ವಾಜ್‌ಪೇಯಿ ವಸತಿ ಶಾಲೆಗಳಲ್ಲಿ /ಯಾವುದೇ ಶಾಲೆಯ ವಿದ್ಯಾರ್ಥಿಗಳು ಹಾಗೂ ಈ ಹಿಂದೆ ಪಾಸಾಗಿರುವ ವಿದ್ಯಾರ್ಥಿಗಳು ಪ್ರಥಮ ಪಿಯುಸಿ ತರಗತಿ ಪ್ರವೇಶಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

ಪ್ರತಿ ವಸತಿ ಕಾಲೇಜುಗಳಲ್ಲಿ 2025–26ನೇ ಸಾಲಿನಲ್ಲಿ ಪ್ರಥಮ ಪಿ.ಯು.ಸಿ. ತರಗತಿಯ ಪಿ.ಸಿ.ಎಮ್.ಬಿ ಮತ್ತು ಪಿ.ಸಿ.ಎಮ್.ಸಿ ಈ ಸಂಯೋಜನೆಗಳಿಗೆ ತಲಾ 40 ವಿದ್ಯಾರ್ಥಿಗಳನ್ನು ಮೆರಿಟ್ ಹಾಗೂ ವರ್ಗ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ/ ಎಸ್.ಎಲ್.ಸಿ ಅಂಕಗಳ ಮತ್ತು ಮೀಸಲಾತಿ ಆಧಾರದ ಮೇಲೆ ಅರ್ಹತಾ ಪಟ್ಟಿ ತಯಾರಿಸಿ ಪ್ರವೇಶ ನೀಡಲಾಗುತ್ತದೆ.

ಅರ್ಜಿ ವಿತರಣೆಯ ಕೊನೆಯ ದಿನಾಂಕ 2025ರ ಆಗಸ್ಟ್ 30 ಇರುತ್ತದೆ. ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು ಮತ್ತು ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಜೇವರ್ಗಿ (ಬಿ.ಸಿ–301) ಮೊರಾರ್ಜಿ ದೇಸಾಯಿ ಪ.ಪೂ ವಸತಿ ವಿಜ್ಞಾನ ಕಾಲೇಜನ್ನು ಹಾಗೂ ಕಾಲೇಜಿನ ಪ್ರಾಂಶುಪಾಲರ ಮೊಬೈಲ್ ಸಂಖ್ಯೆ 9538988452 ಗೆ ಸಂಪರ್ಕಿಸಲು ಕೋರಲಾಗಿದೆ.

# ಕಲಬುರಗಿ ಮಹಾನಗರ ಪಾಲಿಕೆ: ವಿವಿಧ ಯೋಜನೆಗಳಡಿ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.23–ಕಲಬುರಗಿ ಮಹಾನಗರಪಾಲಿಕೆಯ 2025–26ನೇ ಸಾಲಿನ ಎಸ್.ಎಫ್.ಸಿ. (ಮುಕ್ತನಿಧಿ) ಕಲಬುರಗಿ ಜಿಲ್ಲಾಧಿಕಾರಿಗಳಿಂದ ಅನುಮೋದನೆಗೊಂಡಿರುವ ಶೇ 7.25 ಮತ್ತು ಶೇ 5 ಯೋಜನೆಯ ಕ್ರಿಯಾ ಯೋಜನೆಯಡಿ (ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗದವರಿಗೆ ನಿಗದಿಪಡಿಸಿದ ಹಾಗೂ ವಿಕಲಚೇತನರ ಕಲ್ಯಾಣ ಕಾರ್ಯಕ್ರಮ ಯೋಜನೆಯಡಿ) ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ. ಶೇ. 7.25ರ ಯೋಜನೆಯಡಿ ಉನ್ನತ ವ್ಯಾಸಂಗಕ್ಕಾಗಿ ಪಿ.ಹೆಚ್.ಡಿ. /ಪೋಸ್ಟ್ ಡಾಕ್ಟ–ರೇಟ್ ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗದ 11 ಜನ ವಿದ್ಯಾರ್ಥಿಗಳಿಗೆ ಮಾತ್ರ (30,000 ರೂ ಮೀರದಂತೆ) ಸಹಾಯಧನ ನೀಡಲಾಗುತ್ತದೆ. ಕಲಬುರಗಿ ನಗರದ ನಿವಾಸಿಯಾಗಿರಬೇಕು. ಅದೇ ರೀತಿ ಶೇ. 5ರ ಯೋಜನೆಯಡಿ ವಿಕಲಚೇತನರಿಗೆ (ಅಂಗವಿಲಕರು) ಸಣ್ಣ ಉದ್ಯಮಿಗಾಗಿ ಬ್ಯಾಂಕ್ ಮುಖಾಂತರ (ಯೋಜನಾ ವೆಚ್ಚದ ಶೇ 50 ರಷ್ಟು ಅಥವಾ 1,50,000 ರೂ ಮೀರದಂತೆ) 2 ಫಲಾನುಭವಿಗಳಿಗೆ ಮಾತ್ರ ಸಹಾಯಧನ ನೀಡಲಾಗುತ್ತದೆ. ಅಭ್ಯರ್ಥಿಗಳು ವಿಕಲಚೇತನ ರಾಗಿರಬೇಕು. ಕಲಬುರಗಿ ನಗರದ ನಿವಾಸಿಯಾಗಿರಬೇಕು. ಯುಡಿಐಡಿ ಕಾರ್ಡ್ ಹೊಂದಿರಬೇಕು. ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು ಕಲಬುರಗಿ ಮಹಾನಗರ ಪಾಲಿಕೆಯ ಆವಕ ಶಾಖೆಯಿಂದ ಕಚೇರಿ ವೇಳೆಯಲ್ಲಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳನ್ನು ಕಡ್ಡಾಯವಾಗಿ ದೃಢೀಕರಣದೊಂದಿಗೆ ಲಗತ್ತಿಸಿ 2025ರ ಸೆಪ್ಟೆಂಬರ್ 26ರ ಸಂಜೆ 4.30 ಗಂಟೆಯೊಳಗಾಗಿ ಕಲಬುರಗಿ ಅರ್ಜಿ ಸಲ್ಲಿಸಬೇಕು. ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಹಾನಗರಪಾಲಿಕೆಯ ಶೇ 7.25 ಹಾಗೂ ಶೇ 5ರ ಶಾಖೆಯನ್ನು ಹಾಗೂ ಮಹಾನಗರ ಪಾಲಿಕೆಯ http://www.kalaburagic-ity.mrc.gov ವೆಬ್‌ಸೈಟ್‌ನ್ನು ಸಂಪರ್ಕಿಸಲು ಕೋರಲಾಗಿದೆ.

# ವಿಶ್ವ ಸ್ಕೂಲ್ ವಾಲಿಬಾಲ್ ಚಾಂಪಿಯನ್ ಶಿಪ್ ಗೆ ಕೊಪ್ಪಳದ ಮಹಮ್ಮದ್ ಶೇಖ್ ಆಯ್ಕೆ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳದ ನ್ಯೂ ಎಕ್ಸಲೆಂಟ್ ಶಾಲೆಯಲ್ಲಿ 9 ನೇ ತರಗತಿಯ ವಿದ್ಯಾರ್ಥಿಯಾದ ಮಹಮ್ಮದ್ ಇಮದಾದ್ ಶೇಖ್ ವಿಶ್ವ ಸ್ಕೂಲ್ ವಾಲಿಬಾಲ್ ಚಾಂಪಿಯನ್ ಶಿಪ್ ಗೆ ಆಯ್ಕೆಯಾಗಿದ್ದಾನೆ. 15 ವರ್ಷ ವಯೋಮಿತಿಯ ಬಾಲಕರ ವಿಭಾಗದಲ್ಲಿ ಪುಣೆಯಲ್ಲಿ ನಡೆಯುವ ಕ್ರೀಡಾಕೂಟಕ್ಕೆ ಆಯ್ಕೆಯಾದ ಸುದ್ದಿ ತಿಳಿದ ಶಾಲಾ ಆಡಳಿತ ಮಂಡಳಿ ಮತ್ತು ಪಾಲಕರು ಹರ್ಷ ವ್ಯಕ್ತ ಪಡಿಸಿ ಅಭಿನಂದಿಸಿದ್ದಾರೆ.

# ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ವೀಲ್ ಚೇರ್ ವಿತರಣೆ..!



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜನಮಂಗಲ ಕಾರ್ಯಕ್ರಮದಡಿ ಕೊಪ್ಪಳ ನಗರ ವಲಯದ ಸರ್ದಾರಗಲ್ಲಿ ಕಾರ್ಯಕ್ಷೇತ್ರದ ಹುಲಿಗೆಮ್ಮ ದೇವಿ ತಂಡದ ಸದಸ್ಯರಾದ ರಾಧಾಬಾಯಿ ಅವರಿಗೆ ಔಟ್ ಸೈಡ್ ವಿಲ್ ಚೇರ್ ವಿತರಣೆ ಮಾಡಲಾಯಿತು. ಈ ಸಂಧರ್ಭದಲ್ಲಿ ಮಾತನಾಡಿದ ನಗರಸಭೆ ಮಾಜಿ ಸದಸ್ಯರಾದ ಅಕ್ಬರ್ ಪಾಷಾ,ಮಾನ್ವಿ ಪಾಷಾ ಜಂಟಿಯಾಗಿ ಮಾತನಾಡಿ

ಶ್ರೀ ಕ್ಷೇತ್ರ ಧರಮಸ್ಥಳದ ಧರ್ಮಾಧಿಕಾರಿಗಳಾದ ಡಾ:ವಿರೇಂದ್ರ ಹೆಗ್ಗಡೆ ಅವರ ನೇತೃತ್ವದಲ್ಲಿ ಅನೇಕ ಧಾರ್ಮಿಕ ಹಾಗೂ ಸಾಮಾಜಿಕ ಸೇವಾ ಕಾರ್ಯಗಳನ್ನು ಕ್ಷೇತ್ರದಲ್ಲಿ ನಿರಂತರವಾಗಿ ನಡೆಸಲಾಗುತ್ತಿದೆ. ಪ್ರತಿ ಹಳ್ಳಿ ಮತ್ತು ನಗರ ಪ್ರದೇಶಗಳಲ್ಲಿ ಮಹಿಳೆಯರಿಗೆ ಊರಿನ ಗ್ರಾಮಸ್ಥರಿಗೆ ಜ್ಞಾನ ವಿಕಾಸದ ಅರಿವು ಮೂಡಿಸುವನಿಟ್ಟಿನಲ್ಲಿ ಬಿದಿನಾಟಕ, ಶೌಚಾಲಯದ ಬಳಕೆ, ನೀರಿನ ಸಂರಕ್ಷಣೆ, ಬಾಲ್ಯ ವಿವಾಹ ತಡೆಗಟ್ಟುವಿಕೆ, ಲಿಂಗ ತಾರತಮ್ಯ ಮಾಡುತಿರುವ ಬಗ್ಗೆ ತಾಯಿದಿರ ಪಾತ್ರದ ಕುರಿತು ನಾಟಕ ಪ್ರದರ್ಶನ ಮಾಡುವ ಮುಕಾಂತರ ಸರ್ವರಲ್ಲಿ ಅರಿವು ಮತ್ತು ಜಾಗ್ರತಿ ಕಾರ್ಯಕ್ರಮ ಇನ್ನು ಇಂತಹ ಅನೇಕ ಜನಪರ ಕಾರ್ಯಗಳು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಭಿರುದ್ಧಿ ಯೋಜನೆ ಸಂಘದ ಪದಾಧಿಕಾರಿಗಳಿಗೆ ಸಲ್ಲುತ್ತದೆ ಎಂದು ಹೇಳಿದರು. ಈ ಸಂಧರ್ಭದಲ್ಲಿ ವಲಯದ ಮೇಲ್ವಿಚಾರಕ ನಾಗರಾಜ ಮತ್ತು ಒಕ್ಕೂಟ ಪದಾಧಿಕಾರಿಗಳು ಮತ್ತು ಸಂಘದ ಸದಸ್ಯರು ಉಪಸ್ಥಿತರಿದ್ದರು.

# ಪರಮಪೂಜ್ಯ ಶ್ರೀ ಡಾ. ಅಪ್ಪಾರಾವ ದೇವಿ ಮುತ್ಯಾ ಅವರಿಗೆ ಸುವರ್ಣ ಕಿರೀಟ ಧಾರಣೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ತಾಲೂಕಿನ ಶ್ರೀನಿವಾಸ್ ಸರಡಗಿ ಶ್ರೀ ಮಹಾಲಕ್ಷ್ಮೀಶಕ್ತಿ ಪೀಠದಲ್ಲಿ ಶ್ರಾವಣ ಮಾಸದ ಐದನೇ ಶುಕ್ರವಾರ ಬೆಳಿಗ್ಗೆ 9 ಕ್ಕೆ ಪಲ್ಲಕ್ಕಿ ಉತ್ಸವ ಶ್ರೀದೇವಿಗೆ ಮಹಾಭಿಷೇಕ ಮಹಾಲಂಕಾರ ಮಹಾನವಿದ್ಯ ಮತ್ತು ಅರ್ಚನೆ ಹಾಗೂ ಹೋಮ ಹವನ ನಡೆಯಿತು.

ಸದ್ಧರ್ಮ ಶಿರೋಮಣ ಶ್ರೀ ಪರಮಪೂಜ್ಯ ಡಾ. ಅಪ್ಪಾರಾವದೇವಿ ಮುತ್ಯಾ ಮಹಾರಾಜರು ಇವರಿಗೆ ಗುರುವಂದನ ಸಂದರ್ಭದಲ್ಲಿ ಶ್ರೀಗಳಿಗೆ ಭಕ್ತರಿಂದ ಸುವರ್ಣ ಕಿರೀಟ ಧಾರಣೆ ಮಾಡಲಾಯಿತು.

ಈ ಸಮದರ್ಭದಲ್ಲಿ ಶಕ್ತಿ ಪೀಠದ ಕಾರ್ಯದರ್ಶಿ ವಿಶ್ವನಾಥ ಪಾಟೀಲ್, ಮಹೇಶ ನೆತ್ತಿ, ರಾಜು ಲೇಂಗಟಿ, ಆರ್ ಎಸ್ ಪಾಟೀಲ್ ಸೇರಿದಂತೆ ಭಕ್ತಾಧಿಗಳು ಇದ್ದರು. ನಾಡಿನ ಖ್ಯಾತ ಕಲಾವಿದ ರಿಂದ ಸಂಗೀತ ಕಾರ್ಯಕ್ರಮ ನಡೆಯಿತು.

# ಮಾದಕ ಗಾಂಜಾ ವಶ: ನಾಲ್ವರ ಬಂಧನ



( ವೀರಯ್ಯ ವಿ ಹಿರೇಮಠ )

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಸಾರ್ವಜನಿಕ ಸ್ಥಳಗಳಲ್ಲಿ ಗಾಂಜಾ ಮಾರಾಟ ಮಾಡುತ್ತಿದ್ದವರ ಮೇಲೆ ದಾಳಿ ನಡೆಸಿ ನಾಲ್ವರು ಆರೋಪಿಗಳನ್ನು ಕೊಪ್ಪಳ ಗ್ರಾಮೀಣ ಠಾಣೆಯ ಪೊಲೀಸರು ಬಂಧಿಸಿದ್ದಾರೆ.

ಕೊಪ್ಪಳ ಗ್ರಾಮೀಣ ಪೊಲೀಸ್ ಠಾಣೆಯ ತಂಡ ಖಚಿತ ಮಾಹಿತಿಯ ತಾಲೂಕಿನ ಇರಕಲಗಡ ಗ್ರಾಮದ ಮನೆಯೆಂದರೆ ಮೇಲೆ ದಾಳಿ ನಡೆಸಿದ್ದು ದಾಳಿಯ ವೇಳೆ ಗಾಂಜಾ ದೊರಕಿದ್ದು ವಶಪಡಿಸಿಕೊಂಡಿರುತ್ತಾರೆ

ಆರೋಪಿತರು ತಾಲೂಕಿನ ಇರಕಲಗಡ ಗ್ರಾಮದವರು ಎಂಬ ಮಾಹಿತಿ ದೊರೆತಿದ್ದು. ಗಾಂಜಾ ಮಾರಾಟಗಾರರ ಮೇಲೆ ದಾಳಿ ಮಾಡಿದ ಪೊಲೀಸರು ನಿಂಗಪ್ಪ ಗುರಿಕಾರ(50),ಮಾರುತಿ ಗುರಿಕಾರ (26), ರವಿ ಗುರಿಕಾರ (20),ನಾಗಪ್ಪ ಕುದುರಿಮೋತಿ (38 ) ಎಂಬ ನಾಲ್ವರು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ತಿಳಿಸಿದ್ದಾರೆ.

ದಾಳಿ ಮಾಡಿದ ಸಂದರ್ಭದಲ್ಲಿ ಇವರ ಬಳಿ ಇದ್ದ ಸುಮಾರು 25,200 ರೂ. ಬೆಲೆ ಬಾಳುವ 630 ಗ್ರಾಂ ಗಾಂಜಾ ಮತ್ತು 15 ಗಂಜಾ ಗಿಡದ ಸಸಿಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಈ ಕುರಿತು ಪೊಲೀಸರು ಕೊಪ್ಪಳ ಗ್ರಾಮೀಣ ಠಾಣೆಯಲ್ಲಿ ಗುನ್ನೆ 149/2025 ಕಲಂ: 20 [b] [ii] [A], NDPS Act ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

# ದಮ್ಮೂರ ಶ್ರೀ ಭೀಮಾಂಬಿಕಾದೇವಿ ಮಠದಲ್ಲಿ 377 ನೆಯ ಶಿವಾನುಭವ ಗೋಷ್ಠಿ

ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ : ಯಲಬುರ್ಗಾ ಗುರುಗಳಿಗೆ ನಯ ವಿನಯದಿಂದ ಅವರಿಗೆ ಗೌರವ ಕೊಟ್ಟು ಕೈ ಮುಗಿದು ಬಾಗಿದಾಗ , ಉತ್ತಮ ಸಂಸ್ಕಾರ,ಸಂಸ್ಕೃತಿ ಹೊಂದಿ ಉನ್ನತ ಮಟ್ಟಕ್ಕೆ ಸಾಧನೆ ಮಾಡಲು ಸಾಧ್ಯ ಎಂದು ದಮ್ಮೂರ ಗ್ರಾಮದ ನಿವೃತ್ತ ಮುಖ್ಯ ಗುರು ಶರಣಪ್ಪಗೌಡ ಎಸ್ ಗೌಡ್ರ ಅವರು ಶ್ರೀ ಭೀಮಾಂಬಿಕಾ ದೇವಿ ಶಿವನುಭವ ಸೇವಾ ಸಮಿತಿ ದಮ್ಮೂರ ಗ್ರಾಮದಲ್ಲಿ ಜರುಗಿದ 377ನೇ ಶಿವಾನುಭವ ಗೋಷ್ಠಿಯಲ್ಲಿ ಸನ್ಮಾನ ಸ್ವೀಕರಿಸಿ, ಗುರುವಿನ ಗುಲಾಮನಾಗುವತನಕ ದೊರೆಯದಣ್ಣ ಮುಕುತಿ ಚಿಂತನ ಗೋಷ್ಠಿಯಲ್ಲಿ ಮಾತನಾಡಿದರು. ಜೀವನದಲ್ಲಿ ವಿದ್ಯಾರ್ಥಿಗಳು ಉತ್ತಮ ಶಿಲ್ಪಿಗಳಾಗಿ ನಿರ್ಮಾಣವಾಗಲು ಗುರುಗಳ ಸತತ ಪ್ರಯತ್ನ ನಿರಂತರ ಶ್ರಮದಿಂದ ಸಾಧ್ಯ ಇದರಲ್ಲಿ ಗುರುವಿನ ಪಾತ್ರ ಮುಖ್ಯವಾದದು ಎಂದು ಮಹಮ್ಮದ ರಶೀದ ಖಾಜಿ ದಮ್ಮೂರ ಅವರು ಮಾತನಾಡಿದರು. ಕತ್ತಲದಿಂದ ಬೆಳಕಿನಡೆಗೆ ಬರಲು ಗುರುವಿನ ಆಶೀರ್ವಾದ ಮಾರ್ಗದರ್ಶನ ಬೇಕು, ಕವಿ ಸಾಹಿತಿ ಕಲಾವಿದ ನಿರ್ದೇಶಕ, ಶಾಸಕ ಸಚಿವ,ಮುಖ್ಯಮಂತ್ರಿ ಆಗಲು ಗುರು ಬೇಕು, ಗುರು ಇದ್ದರೆ ಮಾತ್ರ ನಾವು ಏನು ಬೇಕಾದರೂ ಆಗಲು ಸಾಧ್ಯ ಎಂದು ಶ್ರೀ ಭೀಮಾಂಬಿಕಾದೇವಿ ಶಿವಾನುಭವ ಸೇವಾ ಸಮಿತಿ ಅಧ್ಯಕ್ಷ ಶರಣಬಸಪ್ಪ ದಾನಕೈ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ದಮ್ಮೂರಿನ ಕಲಾವಿದ ಡಾ. ಪ್ರಕಾಶ ರಾವಣಕಿ ಅವರು ಬರೆದಿರುವ ನಾಟಕ ಮುತ್ತಿನಂತ ಅತ್ತಿಗೆ ಅರ್ಥಾತ್ ಸಿಹಿ ಮುತ್ತಿನ ಕಾಣಿಕೆ ಎಂಬ ನಾಟಕದ ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿ , ಸಮಾಜದ ಅಂಕು ಡೊಂಕುಗಳನ್ನು ತಿದ್ದುವಲ್ಲಿ ನಾಟಕಗಳು ಪ್ರಮುಖ ಪಾತ್ರವಹಿಸುತ್ತವೆ , ಶ್ರೀ ಭೀಮಾಂಬಿಕಾ ದೇವಿ ಜಾತ್ರಾ ಉತ್ಸವದಲ್ಲಿ ನಾಟಕಗಳು ಪ್ರದರ್ಶನ ವಾಗುತ್ತವೆ , ಇಂಥಹ ಪ್ರತಿಭೆಗಳು ಆಕಾಶದೆತ್ತರಕ್ಕೆ ಬೆಳೆಯಲು ಸರ್ಕಾರ ಸಮಾಜ ಸಹಕಾರ , ಪ್ರೋತ್ಸಾಹ ನೀಡಬೇಕು ಆಗ ಕಲೆ, ಕಲಾವಿದ ಉಳಿಯಲು ಸಾಧ್ಯ ಎಂದು ಶ್ರೀ ಭೀಮಾಂಬಿಕಾ ದೇವಿ ಶಿವಾನಭವ ಸೇವಾ ಸಮಿತಿ ಅಧ್ಯಕ್ಷ ಶರಣಬಸಪ್ಪ ದಾನಕೈ ಅವರು ಮಾತನಾಡಿದರು.ಈ ವೇಳೆ ಹನುಮಂತಪ್ಪಜ್ಜ ಧರ್ಮಾರ, ಶರಣಯ್ಯ ಗುರುವಿನ ಸಾನಿಧ್ಯ ವಹಿಸಿದ್ದರು. ಕಲಾವಿದರಾದ ಡಿ ಮೌನೇಶ ಬಡಿಗೇರ,ಡಾ. ಪ್ರಕಾಶ ರಾವಣಕಿ,,ಚಂದಪ್ಪ ಜಕ್ಕಲಿ,ವಿರುಪಣ್ಣ ಹಳ್ಳಿಕೇರಿ,ಮೇಘರಾಜ ಕುಡಗುಂಟಿ, ವಿರಪ್ಪ ರಾವಣಕಿ,ಯಮನೂರಸಾಬ ಗುಳೇದಗುಡ್ಡ,ಮಂಜುನಾಥ ಹಳ್ಳಿಕೇರಿ, ಪಡಿಯಪ್ಪ ಹರಿಜನ, ಕಳಕಪ್ಪ ಹಡಪದ, ಭೀಮಣ್ಣ ಚಿಕ್ಕಗೌಡ್ರು, ಯಮನೂರಪ್ಪ ಹಳ್ಳಿಕೇರಿ,ಯಲ್ಲಪ್ಪ ಟಕ್ಕಳಕಿ,ಶರಣೆಗೌಡ ದ್ಯಾಮನಗೌಡ್ರ, ರಮೇಶ ಚಿಕ್ಕಗೌಡ್ರ ಸೇರಿದಂತೆ ಇತರರು ಇದ್ದರು ನಂತರ ಅನ್ನ ಪ್ರಸಾದ ಜರುಗಿತು.

# ಭಾರೀ ಮಳೆ : ಹಲವು ಮನೆಗಳು ಜಲಾವೃತ: ಬಾಲರಾಜ್ ಗುತ್ತೇದಾರ ಭೇಟಿ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ: ಭಾರೀ ಮಳೆಯಿಂದಾಗಿ ಜಿಲ್ಲೆಯಲ್ಲಿ ಜನಜೀವನ ಅಸ್ತವ್ಯಸ್ತವಾಗಿದ್ದು, ಚಿಂಚೋಳಿ ತಾಲ್ಲೂಕಿನ ಬೆನಕನಳ್ಳಿ ಗ್ರಾಮದ ಮನೆಗಳಿಗೆ ನೀರು ನುಗ್ಗಿರುವ ಘಟನೆ ನಡೆದಿದ್ದು.ಗ್ರಾಮಕ್ಕೆ ಜೆಡಿಎಸ್ ಪಕ್ಷದ ಜಿಲ್ಲಾದ್ಯಕ್ಷ ಬಾಲರಾಜ್ ಗುತ್ತೇದಾರ ಹಾಗೂ ಬಿಜೆಪಿ ಮುಖಂಡ ಜೆ.ಕೆ. ಪಾಟೀಲ್ ಭೇಟಿ ನೀಡಿ ಜನರಿಗೆ ಧೈರ್ಯ ಹೇಳಿದ್ದರು. ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಜಿಲ್ಲಾದ್ಯಕ್ಷ ಬಾಲರಾಜ್ ಗುತ್ತೇದಾರ ಮಾತನಾಡಿ ನಿರಂತರವಾಗಿ ಸುರಿದ ಭಾರೀ ಮಳೆಯ ಪರಿಣಾಮ ಗ್ರಾಮದ ಹೊಸ ಬಡಾವಣೆಯ ಮನೆಗಳು ಜಲಾವೃತವಾಗಿದ್ದು, ಹಲವು ಮನೆಗಳಲ್ಲಿ ನೀರು ನುಗ್ಗಿದ ಪರಿಣಾಮ ದವಸ– ಧಾನ್ಯಗಳು ಹಾಳಾಗಿವೆ. ಕಳೆದ ಐದಾರು ವರ್ಷಗಳಿಂದ ಮಳೆ ಬಂದರೆ ಸಾಕು ಗ್ರಾಮದಲ್ಲಿರುವ ಜನರು ಆತಂಕದಲ್ಲಿ ಜೀವನ ಸಾಗಿಸುತ್ತಾರೆ. ಮನೆ ಹಾನಿ, ಬೆಳೆಹಾನಿ, ದಿನನಿತ್ಯ ಬಳಸುವ ವಸ್ತುಗಳು ಹಾನಿಯಿಂದ ಬೆಸತ್ತು ಹೋಗಿದ್ದಾರೆ. ಅಲ್ಲದೆ ಕಳೆದೆರಡು ವರ್ಷಗಳಿಂದ ಯಾವುದೇ ಪರಿಹಾರವು ನೀಡುತ್ತಿಲ್ಲ ಎಂದು ಸ್ಥಳೀಯರು ಆರೋಪಿಸಿತ್ತಿದ್ದು ಕೂಡಲೇ ಸಂಭದಪಟ್ಟ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ಮಳೆಯಿಂದ ನಷ್ಟವಾಗಿರುವ ಸಾಮಾಗ್ರಿಗಳೀಗೆ ಪರಿಹಾರ ನೀಡಬೇಕು ಹಾಗೂ ಪ್ರತಿಬಾರಿ ಹೆಚ್ಚಿನ ಮಳೆ ಬಂದರೆ ಗ್ರಾಮದ ಹೊಸ ಬಡಾವಣೆಯ ಮನೆಗಳು ಜಲಾವೃತವಾಗಿತ್ತಿದ್ದು ಮುಂಥೆ ಈ ರೀತಿ ಆಗದಂತೆ ಇದಕ್ಕೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದ್ದರು. ಈ ಸಂದರ್ಭದಲ್ಲಿ ಪಕ್ಷದ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಶ್ರಾವಣ ಮಾಸದ ಮಂಗಳಮಹೋತ್ಸವ ನಿಮಿತ್ತ ರುದ್ರಾಭಿಷೇಕ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿಯ ಪ್ರಶಾಂತ ನಗರದ ಶ್ರೀ ಹನುಮಾನ ಮಂದಿರದಲ್ಲಿ ಶ್ರಾವಣಮಾಸದ ಅಮಾವಾಸ್ಯ ಪ್ರಯುಕ್ತ ಶನಿವಾರ ವಿಶೇಷ ಕಾರ್ಯಕ್ರಮಗಳು ಜರುಗಿದವು. ಬೆಳಿಗ್ಗೆ ಅರ್ಚಕ ಗುಂಡಾಚಾರ್ಯ ನರಿಬೋಳ ಅವರ ನೇತೃತ್ವದಲ್ಲಿ ಮನ್ಯುಸೂಕ್ತ ಪುನಶ್ಚರಣದಿಂದ ಮಧು ಅಭಿಷೇಕ. ನಂತರ ದಾಸಾನುಗ್ರಹ ಪ್ರತಿಷ್ಠಾಪನೆ ವತಿಯಿಂದ ಆಕಾಶಚಾರ್ಯ ನೇತೃತ್ವದಲ್ಲಿ ಒಂದು ತಿಂಗಳಿಂದ ನಡೆದ ಮನೆ ಮನೆಯಲ್ಲಿ ರುದ್ರಾಭಿಷೇಕ ಸಮಾರೋಪ ನಡೆಯಿತು. ಭಾರತೀಶಚಾರ್ಯ, ವೈಭವ, ಹಾಗೂ ಆಕಾಶಾಚಾರ್ಯ ಅವರಿಂದ ವೇಧಮಂತ್ರ ಪಾರಾಯಣ ನೆರವೇರಿತು. ಡಿ ವ್ಹಿ ಕುಲಕರ್ಣಿ, ಶಾಮರಾವ ಕುಲಕರ್ಣಿ,ಗೋವಿಂದರಾವ ಕುಲಕರ್ಣಿ, ದಿಗಂಬರ, ಗುರುರಾಜ ಬಂಕುರ ಸೇರಿದಂತೆ ಅನೇಕ ಭಕ್ತರು ಭಾಗವಹಿಸಿದ್ದರು.

# ಸಹಕಾರ ರತ್ನ ರಾಜ್ಯ ಪ್ರಶಸ್ತಿ' ಹಾಗೂ 'ಮಾಧ್ಯಮ ಸೇವಾ ರತ್ನ' ರಾಜ್ಯ ಪ್ರಶಸ್ತಿ ಪ್ರಧಾನ

ಮಲ್ಲಮ್ಮ ನುಡಿವಾರ್ತೆ



ಕೊಪ್ಪಳ : ಜಿಲ್ಲೆಯ ಕುಕನೂರ ತಾಲೂಕಿನ ಮಂಗಳೂರು ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರು ಶೇಖರಗೌಡ್ರ ಪೊಲೀಸಪಾಟೀಲ ಹಾಗೂ ಅಧ್ಯಕ್ಷರು ಶಾಂತಿನಿಕೇತನ ಹಿರಿಯ ಪ್ರಾಥಮಿಕ ಶಾಲೆ ಮಂಗಳೂರು, ಕಿತ್ತೂರು ಕರ್ನಾಟಕ ಕೊಪ್ಪಳ ಜಿಲ್ಲಾ ವರದಿಗಾರರು ರವೀಂದ್ರನಾಥ ಕೊಟ್ರಪ್ಪ ತೋಟದ ಇಬ್ಬರಿಗೂ ಇಂದು ಕೂಡ್ಲಿಗಿ ನಗರದಲ್ಲಿ 2025–26ರ ಸಹಕಾರ ರತ್ನ ರಾಜ್ಯ ಪ್ರಶಸ್ತಿ ಹಾಗೂ ಮಾಧ್ಯಮ ಸೇವಾ ರತ್ನ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಲಾಭಾರತಿ ಕಲಾಸಂಘ(ರಿ)ಹಿರೇಹೆಗ್ಡಾಳ ಕೂಡ್ಲಿಗಿ ತಾಲೂಕು, ವಿಜಯನಗರ ಜಿಲ್ಲೆ ಅವರಿಂದ ಕೊಡಲ್ಪಡುವ 2025–26ರ ಸಾಲಿನ ಸಹಕಾರ ರತ್ನ ರಾಜ್ಯ ಪ್ರಶಸ್ತಿ ಹಾಗೂ ಮಾಧ್ಯಮ ಸೇವಾ ರತ್ನ ರಾಜ್ಯ ಪ್ರಶಸ್ತಿಯನ್ನು ಕೂಡ್ಲಿಗಿ ನಗರದಲ್ಲಿ ಮೂಗಪ್ಪ ಬಣಕಾರ ಸಂಸ್ಥಾಪಕ ಅಧ್ಯಕ್ಷರು ಕಲಾಭಾರತಿ ಕಲಾಸಂಘ ಹಿರೇಹೆಗ್ಡಾಳ ಇವರು ಪ್ರಶಸ್ತಿ ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಎ. ವಿ. ಮಂಜುನಾಥ,ಸುನಿತಾ ಮಂಜುನಾಥ ಎ.ವಿ.ಬಸವರಾಜ ಬಿ. ಹಿರೇಹೆಗ್ಡಾಳ, ಕು. ಆದಿತ್ಯ ಮಂಜುನಾಥ ಎ. ವಿ. ಇದ್ದರು.

# ಗಾಳಿ ಸುದ್ದಿಗೆ ಕಿವಿ ಕೊಡಬೇಡಿ : ಡಿವೈಎಸ್ಪಿ

ಕೊಟ್ಟೂರು,.ಆ.22: ಸಾಮಾಜಿಕ ಜಾಲ ತಾಣಗಳಲ್ಲಿ ಕೆಲವೊಂದು ಧರ್ಮ,ಧರ್ಮಗಳ ನಡುವೆ ಅಶಾಂತಿ ಸೃಷ್ಟಿಸುವಂತಹ ಪೋಸ್ಟರ್ಗಳು ಹರಿದಾಡಿದರೆ ಅವುಗಳ ಬಗ್ಗೆ ಗಮನವನ್ನು ಕೊಡಬೇಡಿ, ಆ ಪೋಸ್ಟರ್ ಬಗ್ಗೆ ನಿಮ್ಮ ಪೊಲೀಸ್ ಠಾಣೆಯ ಹತ್ತಿರ ಹೋಗಿ ಸರಿಯೋ ತಪ್ಪು ಎಂಬುದರ ಬಗ್ಗೆ ಮಾಹಿತಿ ತಿಳಿದುಕೊಳ್ಳಿ ಎಂದು ಡಿವೈಎಸ್ಪಿ ಮಲ್ಲೇಶ ದೊಡ್ಡಮನಿ ತಿಳಿಸಿದರು.




ಪಟ್ಟಣದ ಪೊಲೀಸ್ ಠಾಣಾ ಆವರಣದಲ್ಲಿ ನಡೆದ ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬದ ಹಿನ್ನೆಲೆ ಹಮ್ಮಿಕೊಂಡಿದ್ದ ಶಾಂತಿ ಸಭೆ ಉದ್ದೇಶಿಸಿ ಮಾತನಾಡಿದರು.

ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬವನ್ನು ಸೌಹಾರ್ದತೆಯ ಧರ್ಮದ ಇತಿ–ಮಿತಿಯೊಳಗೆ ಆಚರಿಸಬೇಕು ಅನ್ಯಧರ್ಮದವರ ಭಾವೈಕ್ಯತೆಗೆ ಧಕ್ಕೆಬಂದರೆ ಕಾನೂನು ಕ್ರಮ ಜರುಗಿಸಲಾಗುವುದು,ಗಣೇಶ ಪ್ರತಿಮೆ ಅಳವಡಿಸುವ ಮುನ್ನ ಎತ್ತರವಾದ ತಗಡಿನ ವ್ಯವಸ್ಥೆ ಕಲ್ಪಿಸಿಕೊಳ್ಳುವುದು ಉತ್ತಮ. ಹಾಗೇ ತಾತ್ಕಾಲಿಕವಾಗಿ ಸಿಸಿಟಿವಿ ಕಡ್ಡಾಯವಾಗಿ ಅಳವಡಿಸಬೇಕು. ದೇವರ ಹಬ್ಬಗಳಲ್ಲಿ ಅಕ್ರಮ ಚಟುವಟಿಕೆ ಮಾಡದಂತೆ ಭಕ್ತಿಯಿಂದ ಆಚರಿಸಿ. ಯಾವುದೇ ಕಾರ್ಯಕ್ರಮದ ಸಾಂಸ್ಕೃತಿಕ ಚಟುವಟಿಕೆಗಳನ್ನು ಸಮಯ 9.30ಕ್ಕೆ ಮುಕ್ತಾಯವಾಗಬೇಕು ಎಂದರು.

ಡಿ.ಜೆ. ವ್ಯವಸ್ಥೆ ಹಾಗೂ ಪಟಾಕಿ ಸಿಡಿಸುವುದು ನಿಷೇಧಿಸಿ ಸರ್ಕಾರ ಆದೇಶ ಹೊರಡಿಸಿದೆ ಸರ್ಕಾರದ ಹೊಸ ಹೊಸ ನಿಯಮಗಳ ಅನುಗುಣವಾಗಿ ಪ್ರತಿಯೊಬ್ಬರೂ ಪಾಲನೆ ಮಾಡುವುದು ಅತ್ಯವಶ್ಯಕ. ಗಣೇಶನ ಮೂರ್ತಿ ಅಳವಡಿಸುವವರು ಸಂಘದ ಹಾಗೂ ಸದಸ್ಯರು ವಿವರಗಳನ್ನು ನೀಡಬೇಕು. ಮೂರ್ತಿ ವಿಸರ್ಜನೆ ಮಾಡುವವರೆಗೂ ಸಂಘದ ಸ್ವಯಂ ಸೇವಕರನ್ನು ನೇಮಕ ಮಾಡುವುದು ಕಡ್ಡಾಯವಾಗಿದೆ ಎಂದರು.

ಸಿಪಿಐ ದುರುಗಪ್ಪ ಮಾತನಾಡಿ, ಸಾಮಾಜಿಕ ಜಾಲತಾಣದಲ್ಲಿ ಅಹಿತಕರ ಪೋಸ್ಟರ್ ಗಳು ಹಾಕುವುದು ಕಾನೂನು ಬಾಹಿರ ಎಂದರು.

ಇದೆ ವೇಳೆಯಲ್ಲಿ ಪಪಂ.ಮುಖ್ಯ ಅಧಿಕಾರಿ ನಸರುಲ್ಲಾ ಮಾತನಾಡಿ ಪರಿಸರ ಮಾಲಿನ್ಯ ನಿರ್ಮಾಣವಾಗದಂತೆ ಪ್ಲಾಸ್ಟಿಕ್ ಗಣೇಶ ಪ್ರತಿಮೆ ಮಾಡಲು ಸಂಪೂರ್ಣ ನಿಷೇಧಿಸಿದೆ ಪರವಾನಿಗೆ ಇಲ್ಲದೆ ಅನಧಿಕೃತ ಫ್ಲೆಕ್ಸ್ ಗಳನ್ನು ಅಳವಡಿಸಬಾರದು ಪ್ರತಿಯೊಬ್ಬರು ನಿಗದಿತ ಸ್ಥಳದಲ್ಲಿ ಮಾತ್ರ ಗಣೇಶವನ್ನು ವಿಸರ್ಜನೆ ಮಾಡಬೇಕು ಎಂದರು.

ಬಿ.ಮರಿಸ್ವಾಮಿ, ಭರಮಪ್ಪ, ಉಜ್ಜಿನಿ ರುದ್ರಪ್ಪ, ಚೆನ್ನಪ್ಪ ಮಾತನಾಡಿದರು.

ಪಿಎಸ್ಐ ಗೀತಾಂಜಲಿ ಶಿಂಧೆ ಸಭೆಯನ್ನು ನಿರೂಪಿಸಿ ವಂದಿಸಿದರು.

ಈ ಸಂದರ್ಭದಲ್ಲಿ ಕೆಇಬಿ ಎಇ. ಚೇತನ್, ಅಗ್ನಿಶಾಮಕದಳದ ಇನ್ಸ್ಪೆಕ್ಟರ್ ಬಸವರಾಜ್, ಗ್ರಾ.ಪಂ. ಪಿಡಿಒಗಳು, ಗ್ರಾಮಸ್ಥರು, ಊರಿನ ಮುಖಂಡರು, ಮುಂತಾದವರು ಇದ್ದರು.

# ಗಣೇಶ, ಈದ್ ಮಿಲಾದ್ ಹಬ್ಬಗಳನ್ನು ಸ್ನೇಹ ಭಾವನೆಯಿಂದ ಆಚರಿಸಿ.

ಮಲ್ಲಮ್ಮ ನುಡಿ ವಾರ್ತೆ

ಹೊಸಪೇಟೆ (ವಿಜಯನಗರ) ಆ22: ಗೌರಿ ಗಣೇಶ ಮತ್ತು ಈದ್ ಮಿಲಾದ್ ಎರಡೂ ಹಬ್ಬಗಳು ಏಕಕಾಲಕ್ಕೆ ಬಂದಿರುವುದರಿಂದ ಎಲ್ಲರೂ ಪರಸ್ಪರ ಸ್ನೇಹ ಭಾವನೆ ಹಾಗೂ ಸೌಹಾರ್ದತೆಯಿಂದ ಹಬ್ಬ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಅವರ ಹೇಳಿದರು.




ನಗರದ ಜಿಲ್ಲಾ ಒಳಕ್ರೀಡಾಂಗಣ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ ಸಹಯೋಗದಲ್ಲಿ ಗೌರಿ ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಹಬ್ಬದ ಪ್ರಯುಕ್ತ ಹಮ್ಮಿಕೊಂಡಿದ್ದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು, ಶಾಂತಿ ಸೌಹಾರ್ದತೆಗೆ ಹೆಸರಾಗಿರುವ ವಿಜಯನಗರ ಜಿಲ್ಲೆಗೆ ಕಳಂಕ ಬಾರದ ರೀತಿಯಲ್ಲಿ ಎಲ್ಲ ಧರ್ಮೀಯರೂ ಸೇರಿ ಕಾನೂನು ಸುವ್ಯವಸ್ಥೆಗೆ ಹಾಗೂ ಕೋಮು ಭಾವನೆಗಳಿಗೆ ಧಕ್ಕೆ ಬಾರದ ರೀತಿ ಶಾಂತಿ ಸೌಹಾರ್ದತೆಯಿಂದ ಗೌರಿ ಗಣೇಶ ಮತ್ತು ಈದ್ ಮಿಲಾದ್ ಹಬ್ಬಗಳನ್ನು ಆಚರಿಸಬೇಕು.

ಹಬ್ಬ ಆಚರಣೆ ವೇಳೆಯಲ್ಲಿ ಸರ್ಕಾರದ ಮಾರ್ಗಸೂಚಿಗಳನ್ನು ಪಾಲನೆ ಮಾಡಬೇಕು. ಆಸ್ಪತ್ರೆ, ಶಾಲೆ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ಸಾರ್ವಜನಿಕರು ಅತ್ಯಂತ ಜವಾಬ್ದಾರಿಯುತವಾಗಿ ವರ್ತಿಸಬೇಕು. ಗಣೇಶ ಪ್ರತಿಷ್ಠಾಪನೆಗೆ ಅಗತ್ಯವಿರುವ ಸ್ಥಳ, ಪೆಂಡಾಲ್, ವಿದ್ಯುತ್ ಸಂಪರ್ಕ ಇತರೆ ಪರವಾನಿಗೆಗಳನ್ನು ಏಕಗವಾಕ್ಷಿ ಪದ್ಧತಿಯಡಿ ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಶುಭಾಶಯ ಕೋರುವ ಬ್ಯಾನರ್, ಬಂಟಿಂಗ್‌ಗಳನ್ನು ಆಳವಡಿಸಲು ಆಯಾ ಸ್ಥಳೀಯ ಪ್ರಾಧಿಕಾರದಿಂದ ತಪ್ಪದೇ ಅನುಮತಿ ಪಡೆದುಕೊಳ್ಳಬೇಕು. ಪೆಂಡಾಲುಗಳಲ್ಲಿ ಧ್ವನಿವರ್ಧಕಗಳ ಬಳಕೆಗೆ ಪರವಾನಿಗೆ ಪಡೆಯಬೇಕು. ಗಣೇಶ ಮೂರ್ತಿಗಳ ವಿಸರ್ಜನೆ, ಮೆರವಣಿಗೆ ಸಮಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಮದ್ಯ ಮಾರಾಟ ನಿಷೇಧಿಸಿ ಆದೇಶ ಹೊರಡಿಸಲಾಗುವುದು. ರಸ್ತೆಯಲ್ಲಿ ಪೆಂಡಾಲ್ ಹಾಕಿ ಸಾರ್ವಜನಿಕರಿಗೆ ಹಾಗೂ ಅಂಬ್ಯುಲೆನ್ಸ್, ಅಗ್ನಿಶಾಮಕ ವಾಹನಗಳ ಓಡಾಟಕ್ಕೆ ತೊಂದರೆ ಮಾಡಲು ಅವಕಾಶವಿರುವುದಿಲ್ಲ. ಸಾರ್ವಜನಿಕ ಆರೋಗ್ಯ ಮತ್ತು ಸುರಕ್ಷತೆಯ ಹಿತದೃಷ್ಟಿಯಿಂದ ಪರಿಸರ ಸ್ನೇಹಿ ಹಾಗೂ ಮಣ್ಣಿನಿಂದ ಮಾಡಿದ ಮೂರ್ತಿಗಳನ್ನು ಪ್ರತಿಷ್ಠಾಪನೆ ಮಾಡಬೇಕು. ಜಿಲ್ಲೆಯಲ್ಲಿ ಸಾರ್ವಜನಿಕರು ಇದುವರೆಗೆ ಜಿಲ್ಲಾಡಳಿತ ಮತ್ತು ಜಿಲ್ಲಾ ಪೊಲೀಸ್ ಇಲಾಖೆಗೆ ಸಹಕಾರ ನೀಡಿದ್ದಾರೆ. ಈ ಬಾರಿಯೂ ಸಹ ಸಹಕಾರ ನೀಡಿ ಎರಡೂ ಹಬ್ಬಗಳು ಶಾಂತಿ ಸೌಹಾರ್ದತೆಯಿಂದ ಆಚರಿಸೋಣ ಎಂದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸು ಗಿರಿ ಮಾತನಾಡಿ, ಗೌರಿ ಗಣೇಶ ಹಬ್ಬ ಮತ್ತು ಈದ್ ಮಿಲಾದ್ ಹಬ್ಬಗಳನ್ನು ಭಾವೈಕ್ಯತೆಯಿಂದ ಆಚರಿಸಬೇಕು. ಗಣೇಶ ಪ್ರತಿಷ್ಠಾಪನೆಯ ಪೆಂಡಾಲ್‌ಗಳಲ್ಲಿ ಅಗ್ನಿನಂದಕಗಳನ್ನು ಬಳಕೆ ಮಾಡಬೇಕು. ಪೆಂಡಾಲ್‌ಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಬೇಕು. ಸಾರ್ವಜನಿಕ ಗಣೇಶ ಪ್ರತಿಷ್ಠಾಪನೆಯಲ್ಲಿ ಕಡ್ಡಾಯವಾಗಿ ಸ್ವಯಂಸೇವಕರನ್ನು ನೇಮಿಸಬೇಕು. ಪೆಂಡಾಲ್‌ನಲ್ಲಿ ಸಾರ್ವಜನಿಕರ ಪ್ರವೇಶ ಮತ್ತು ನಿರ್ಗಮನಕ್ಕೆ ಪ್ರತ್ಯೇಕ ದ್ವಾರ ಮಾರ್ಗ ನಿರ್ಮಿಸಬೇಕು. ಗಣೇಶ ಪ್ರತಿಷ್ಠಾಪನ ಮಂಡಳಿಯವರು ಮೂರ್ತಿಗಳ ವಿಸರ್ಜನೆ, ಮೆರವಣಿಗೆ ಮಾರ್ಗವನ್ನು ಮುಂಚಿತವಾಗಿ ಸ್ಥಳೀಯ ಪೊಲೀಸ್ ಠಾಣೆಗೆ ಮಾಹಿತಿ ನೀಡಿ ಕಡ್ಡಾಯವಾಗಿ ಪರವಾನಿಗೆಯನ್ನು ಪಡೆದುಕೊಳ್ಳಬೇಕು. ಪರವಾನಿಗೆ ಪಡೆದ ಮಾರ್ಗವನ್ನು ಯಾವುದೇ ಕಾರಣಕ್ಕೂ ಬದಲಾವಣೆಯನ್ನು ಮಾಡುವಂತಿಲ್ಲ. ಗಣೇಶ ಮೂರ್ತಿಯ ಪ್ರತಿಷ್ಠಾಪನೆ, ಮೆರವಣಿಗೆ ಹಾಗೂ ವಿಸರ್ಜನೆ ಸಂದರ್ಭದಲ್ಲಿ ಎಲ್ಲರೂ ಶಾಂತಿ, ಸಂಯಮದಿಂದ ವರ್ತಿಸಿ, ಕಾನೂನು ಸುವ್ಯವಸ್ಥೆ ಉಲ್ಲಂಘನೆ ಆಗದಂತೆ ಕ್ರಮ ಕೈಗೊಳ್ಳಬೇಕು. ಈದ್ ಮಿಲಾದ್ ಹಬ್ಬವನ್ನು ಎಲ್ಲರೂ ಸೌಹಾರ್ದತೆಯಿಂದ ಆಚರಿಸಬೇಕು ಎಂದರು.

ಈ ವೇಳೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ, ಡಿವೈಎಸ್‌ಪಿಗಳಾದ ಟಿ.ಮಂಜುನಾಥ, ವೆಂಕಟಪ್ಪ ನಾಯಕ, ಸೇರಿದಂತೆ ಎಲ್ಲಾ ವೃತ್ತ ನೀರಿಕ್ಷಕರು, ವಿವಿಧ ತಾಲೂಕಿನ ಗಣೇಶ ಪ್ರತಿಷ್ಠಾಪನೆ ಸಂಘಟನೆ ಪದಾಧಿಕಾರಿಗಳು ಭಾಗವಹಿಸಿದ್ದರು.

## ಅಂಗನವಾಡಿ ಕೇಂದ್ರಗಳಲ್ಲಿ ಎಫ್.ಆರ್. ಎಸ್ ವಿರೋಧಿಸಿ ಕಪ್ಪು ದಿನಾಚರಣೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.22: ಅಂಗನವಾಡಿಯಲ್ಲಿ ಎಫ್.ಆರ್.ಎಸ್ ಆಧಾರಿತ ಪದ್ಧತಿ ಬೇಡವೇಬೇಡ, ಈ ನೆಪದಲ್ಲಿ ಫಲಾನುಭವಿಗಳ ಕೈಬಿಡುವ ಕ್ರಮ ನಿಲ್ಲಬೇಕಿದೆ ಎಂದು ಆಗ್ರಹಿಸಿ ಪ್ರತಿಭಟಿಸಲಾಯಿತು.

ಅಂಗನವಾಡಿ ನೌಕರರಿಗೆ ಕಿರುಕುಳ ನೀಡಬಾರದು.

ಐವತ್ತು ವರ್ಷ ಪೂರೈಸಿದ ಐಸಿಡಿಎಸ್ ನ್ನು ಖಾಯಂಮಾಡಿ. ಅಂಗನವಾಡಿ ನೌಕರರಿಗೆ ವೇತನ ಮತ್ತು ಪಿಂಚಣಿ ನೀಡಲೇಬೇಕು.

ಎಂದು ಅಖಿಲ ಭಾರತ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಫೆಡರೇಶನ್ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ರಿ) ಸಿಐಟಿಯು ಸಂಯೋಜಿತ ರಾಜ್ಯ ಸಮಿತಿಗಳು ಹೋರಾಟದ ನೇತೃತ್ವದಲ್ಲಿ ಕಪ್ಪು ದಿನಾಚರಣೆ ನಡೆಸಲಾಯಿತು. ಬಳ್ಳಾರಿ ತಾಲ್ಲೂಕು ನಲ್ಲಿ ಸಿಡಿಪಿಓ ಮೂಲಕ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ರಾಜ್ಯ ಮತ್ತು ಕೇಂದ್ರ ರಾಜ್ಯ ಮನವಿ ಸಲ್ಲಿಸಿ ರಿಜಿಸ್ಟರ್ ಪೋಸ್ಟ್ ಕಳಿಸಲಾಯಿತು. ಈ ಸಂದರ್ಭದಲ್ಲಿ ಅಂಗನವಾಡಿ ನೌಕರರ ಸಂಘಟನೆಯ ತಾಲ್ಲೂಕು ಅಧ್ಯಕ್ಷರಾದ ಕಾಂ.ಕಿರಣ್ ಕುಮಾರಿ, ಕಾರ್ಯದರ್ಶಿಯಾದ ಟಿ.ಈರಮ್ಮ, ಜಿಲ್ಲಾ ಉಪಾಧ್ಯಕ್ಷರಾದ ಕಾಂ.ಗೀತಾ, ಸಿಐಟಿಯು ಜಿಲ್ಲಾ ಅಧ್ಯಕ್ಷರಾದ ಕಾಂ.ಸತ್ಯಬಾಬು ಮತ್ತು ಜನವಾದಿ ಮಹಿಳಾ ಸಂಘಟನೆಯ ರಾಜ್ಯ ಸಹ ಕಾರ್ಯದರ್ಶಿಗಳು ಹಾಗೂ ಸಿಪಿಐಎಂ ಪಕ್ಷದ ತಾಲ್ಲೂಕು ಕಾರ್ಯದರ್ಶಿಗಳಾದ ಚಂದ್ರಕುಮಾರಿ ಹಾಗೂ ಇನ್ನಿತರ ತಾಲ್ಲೂಕು ಸಮಿತಿ ಪದಾಧಿಕಾರಿಗಳು ಹಾಜರಿದ್ದರು.



ಎಡಿಜಿಪಿ(ಅಪರಾಧ) ಪಿ. ಹರಿಶೇಖರನ್‌ರವರು ಹುಟ್ಟುಹಬ್ಬ ಆಚರಿಸಿಕೊಂಡ ಸಂದರ್ಭದಲ್ಲಿ ಅಖಿಲ ಕರ್ನಾಟಕ ಡಾ. ಸುಭಾಷ್ ಭರಣಿ ಅಭಿಮಾನಿಗಳ ಸಂಘದ ಅಧ್ಯಕ್ಷ ವಿ. ಅರುಣ್ ಕುಮಾರ್ ಮತ್ತಿತರರು ಹೂಮಾಲೆ ಹಾಕಿ ಶುಭಾಶಯ ಕೋರಿದರು.

# ಗ್ರಾಮೀಣ ಭಾರತದ ಆರ್ಥಿಕತೆ ಮೇಲೆತ್ತಲು ಸಹಕಾರಿ ತತ್ವ ಕಾರಣ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು ಆ 23: 2016 ರಲ್ಲಿ ನೋಟು ನಿಷೇಧ ಜಾರಿಯಾದಾಗ ದೇಶದ ನಗರ ಆರ್ಥಿಕತೆ ಪಾತಾಳ ಸೇರಿತು. ಆದರೆ, ಗ್ರಾಮೀಣ ಭಾರತದ ಆರ್ಥಿಕತೆ ಕುಸಿಯದಂತೆ ತಡೆದದ್ದು ಸಹಕಾರಿ ತತ್ವ ಮತ್ತು ಸಹಕಾರಿ ಚಳವಳಿಯ ಮೌಲ್ಯ ಎನ್ನುವುದನ್ನು ನಾವು ಮರೆಯಬಾರದು ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅಭಿಪ್ರಾಯಪಟ್ಟರು. ಪತ್ರಕರ್ತರ ಸಹಕಾರಿ ಸಂಘಕ್ಕೆ 75 ವರ್ಷಗಳು ತುಂಬಿದ ಸಂದರ್ಭದಲ್ಲಿ ಆಯೋಜಿಸಿದ್ದ "ಅಮೃತ ಸಂಭ್ರಮ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ದೇಶದ ಸ್ವಾತಂತ್ರ್ಯ ಚಳವಳಿಕ ಜೊತೆ ಜೊತೆಗೇ ನಡೆದದ್ದು ನಮ್ಮ ದೇಶದ ಸಹಕಾರ ಚಳವಳಿ. ಮಹಾತ್ಮಗಾಂಧಿ ದೇಶದ ಸ್ವಾತಂತ್ರ್ಯಕ್ಕಾಗಿ 1920 ರಲ್ಲಿ "ಅಸಹಾಕಾರ ಚಳವಳಿಗೆ" ಕರೆ ಕೊಡುವ ಮೊದಲೇ ರಾಜ್ಯದಲ್ಲಿ 1904 ರಲ್ಲಿ ಸಹಕಾರ ಕಾಯ್ದೆ ಜಾರಿ ಆಗಿತ್ತು. ದುಡಿಯುವ ವರ್ಗಗಳ ಆರ್ಥಿಕ ಸ್ವಾತಂತ್ರ್ಯಕ್ಕಾಗಿ ನಡೆದ ಸಹಕಾರ ಚಳವಳಿಯ ಭಾಗವಾಗಿ "ಪತ್ರಕರ್ತರ ಸಹಕಾರ ಸಂಘವೂ ಜನ್ಮತಾಳಿದೆ". ಈ ಸಂಘದ ಸ್ಥಾಪನೆಗೆ ಮುನ್ನುಡಿ ಬರೆದ ಎಲ್ಲಾ ಹಿರಿಯರನ್ನೂ ಈ ಸಂದರ್ಭದಲ್ಲಿ ಸ್ಮರಿಸುತ್ತೇನೆ ಎಂದರು. ಸಹಕಾರಿ ಸಂಘಗಳು, ಸ್ವ–ಸಹಾಯ ಸಂಘಗಳ ಚಳವಳಿಗಳು ಇಂದಿರಾಗಾಂಧಿಯವರ ಬ್ಯಾಂಕ್ ಗಳ ರಾಷ್ಟ್ರೀಕರಣಕ್ಕೆ ಪ್ರೇರಣೆ ಆಗಿದ್ದವು.

"ಪರಸ್ಪರ" ಎನ್ನುವುದು ಸಹಕಾರ ತತ್ವದ ಮೂಲ ಮೌಲ್ಯ ಆಗಿರುವಂತೆಯೇ ಪತ್ರಿಕೋದ್ಯಮದ ಮೂಲ ಮಂತ್ರವೂ ಇದೇ ಆಗಿದೆ. ಪತ್ರಕರ್ತರು ಸಹಕಾರ ಸಂಘ ಸ್ಥಾಪಿಸುವ ಮೊದಲೇ ಕೃಷಿ, ಕೋಳಿ ಸಾಕಾಣಿಕೆ, ಹೈನುಗಾರಿಕೆ, ಮೀನುಗಾರರ ಸಹಕಾರ ಸಂಘಗಳು ಸ್ಥಾಪನೆ ಆಗಿದ್ದವು. ದುಡಿಯುವ ವರ್ಗಗಳನ್ನು, ಶ್ರಮಿಕ ಸಮುದಾಯಗಳನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸುವ ಸಹಕಾರಿ ಮನೋಭಾವದಿಂದಲೇ ಪತ್ರಕರ್ತರ ಸಹಕಾರ ಸಂಘವನ್ನೂ ನಮ್ಮ ಹಿರಿಯರು ಸ್ಥಾಪಿಸಿದರು.

ಪತ್ರಕರ್ತರು ಮತ್ತು ಪತ್ರಿಕಾ ಕಾರ್ಮಿಕರು ರಾಷ್ಟ್ರೀಯ ಬ್ಯಾಂಕ್ ಗಳ ಪಾಲಿಗೆ ಹೊರಗಿನವರು. ನಾನೂ ಸಹ ಗೃಹ ಸಾಲ ಪಡೆಯುವಾಗ ಸಿಕ್ಕಾಪಟ್ಟೆ ರಗಳೆ ಅನುಭವಿಸಿದೆ. ಪತ್ರಕರ್ತರಿಗೆ ಖಾಸಗಿಯಾಗಿ ಸಾಲ ಕೊಡುವವರೂ ಇಲ್ಲ. ವಾಪಾಸ್ ಕೇಳೋದು ಕಷ್ಟ ಎನ್ನುವ ಭಯ ಖಾಸಗಿಯವರಿಗೆ ಇದ್ದೇ ಇದೆ. ಹೀಗಾಗಿ ಈ ಸಂಘದಲ್ಲಿ ನಾವೇ ಪರಸ್ಪರ ಒಬ್ಬರಿಗೊಬ್ಬರು ಜಾಮೀನು ಆಗುವ ಮೂಲಕ ಪರಸ್ಪರರ ಅಗತ್ಯಗಳಿಗೆ ಸ್ಪಂದಿಸುತ್ತಿದ್ದೇವೆ. ಕಷ್ಟದಲ್ಲಿದ್ದಾಗ ಜಾಮೀನು ಹಾಕಿಸಿಕೊಂಡವರು, ಜಾಮೀನು ಹಾಕಿದವರಿಗೆ ವಂಚಿಸಬಾರದು ಎಂದು ನನ್ನ ವಿನಂತಿ. "ಪರಸ್ಪರತೆ" ಮೌಲ್ಯ ಕಾಪಾಡದಿದ್ದರೆ ಸಹಕಾರ ಬ್ಯಾಂಕ್ ಗಳು ಯಶಸ್ವಿಯಾಗುವುದು ಕಷ್ಟ.

ನಿವೇಶನ ಖರೀದಿ ಮತ್ತು ಗೃಹ ನಿರ್ಮಾಣಕ್ಕೆ ನೆರವಾಗುವ ಉದ್ದೇಶದಿಂದ 1949ರಲ್ಲಿ ಕರ್ನಾಟಕ ಪತ್ರಕರ್ತರ ಸಹಕಾರ ಸಂಘ, ಕೇವಲ ರೂ. 353.12 ದುಡಿಯುವ ಬಂಡವಾಳದೊಂದಿಗೆ ಆರಂಭವಾಗಿ ಈಗ ರೂ. 10ಕೋಟಿಗೂ ಮೀರಿದ ದುಡಿಯುವ ಬಂಡವಾಳ ಹೊಂದಿ, ನಿರಂತರ ನಿವ್ವಳ ಲಾಭವನ್ನೂ ಗಳಿಸುತ್ತಿರುವುದು ಸಂತೋಷದ ವಿಷಯ. ಲೆಕ್ಕಪರಿಶೋಧನಾ ವರ್ಗೀಕರಣದಲ್ಲಿ 'ಎ' ಶ್ರೇಣಿಯನ್ನು ಪಡೆದು ಮುನ್ನಡೆಯುತ್ತಿರುವುದು ಸಂಘದ ವಹಿವಾಟು ಪಾರದರ್ಶಕವಾಗಿರುವುದು, ಸಂಘ ಒಂದು ಕುಟುಂಬದಂತೆ

ಪತ್ರಕರ್ತರ ನೋವು ನಲಿವುಗಳಿಗೆ ಸ್ಪಂದಿಸುತ್ತಿದೆ ಎನ್ನುವುದಕ್ಕೆ ಸಾಕ್ಷಿ.

ಪ್ರತಿ ವರ್ಷ ಸದಸ್ಯರ ಮಕ್ಕಳ ಪ್ರತಿಭೆಯನ್ನು ಗುರುತಿಸಿ ಪ್ರತಿಭಾ ಪುರಸ್ಕಾರ ನೀಡಿ ಪ್ರೋತ್ಸಾಹಿಸುತ್ತಿರುವುದು, ಕೊಡಗು ಪ್ರವಾಹ ಸೇರಿದಂತೆ ಪ್ರಕೃತಿ ವಿಕೋಪ ಸಂದರ್ಭದಲ್ಲಿ ಸಂತ್ರಸ್ತರ ನಿಧಿಗೆ ದೇಣಿಗೆ ನೀಡಿರುವುದು ಸಂಘದ ಸಾಮಾಜಿಕ ಹೊಣೆಗಾರಿಕೆಗೆ ಸಾಕ್ಷಿ.

ಪ್ರಸಕ್ತ ಆಡಳಿತ ಮಂಡಳಿ ಸೆಪ್ಟೆಂಬರ್ 2023ರಲ್ಲಿ ಅಧಿಕಾರ ವಹಿಸಿಕೊಂಡ ನಂತರ, ಸಂಘದ ಚಟುವಟಿಕೆಗಳನ್ನು ವಿಸ್ತರಿಸಲು ಅವಿರತ ಶ್ರಮವಹಿಸುತ್ತಿರುವುದು ಶ್ಲಾಘನೀಯ ಎಂದರು.

# ದೇಶದ ಶಿಕ್ಷಣ ಭಾರತೀಕರಣಗೊಳ್ಳ ಬೇಕಿದೆ:ಶಂಕರಾನಂದ ಜಿ.



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.23: ದೇಶದ ಶಿಕ್ಷಣ ವ್ಯವಸ್ಥೆಯು ಭಾರತೀಕರಣಗೊಳ್ಳಬೇಕಿದೆ. ತಪ್ಪು ದಾರಿಯಲ್ಲಿ ಬಹಳ ದೂರ ಸಾಗಿರುವ ನಾವು, ಪಥ ಬದಲಿಸಬೇಕಿದೆ' ಎಂದು ಭಾರತೀಯ ಶಿಕ್ಷಣ ಮಂಡಲದ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಶಂಕರಾನಂದ ಜಿ. ಅವರು ಅಭಿಪ್ರಾಯಪಟ್ಟರು.

ಅವರು ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಶ್ರೀಮತಿ ವೀರಮ್ಮ ಗಂಗಸಿರಿ ಮಹಿಳಾ ಪದವಿ

ಮಹಾವಿದ್ಯಾಲಯದಲ್ಲಿ ನಡೆದ ಭಾರತೀಯ ಶಿಕ್ಷಣ ಮಂಡಲದಿಂದ ಪ್ರಾಂತ ಮಟ್ಟದ ಶಿಕ್ಷಕರ ಚಿಂತನಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಬೆಳಗ್ಗೆ ಹತ್ತರಿಂದ ಸಂಜೆ ಐದರ ನಡುವೆ ನಡೆಯುವ ಪಾಠಪ್ರವಚನವೇ ಶಿಕ್ಷಣವಲ್ಲ. ಅದು ಈ ವ್ಯಾಪ್ತಿಯನ್ನು ಮೀರಿದ ಒಂದು ಪ್ರಕ್ರಿಯೆ. ಬದುಕುವುದಕ್ಕೆ ಇಂಗ್ಲಿಷ್ ಅನಿವಾರ್ಯ ಎಂಬ ತಪ್ಪುಕಲ್ಪನೆಯನ್ನು ಇಡೀ ಸಮಾಜಲ್ಲಿ ಬಿತ್ತಲಾಗಿದೆ. ಈ ಭ್ರಮೆಯಿಂದ ಹೊರಬರುವ ಅಗತ್ಯವಿದೆ. ವ್ಯವಹಾರಕ್ಕೆ ಇಂಗ್ಲಿಷ್ ಬೇಕು. ಆದರೆ ಪ್ರಾಥಮಿಕ ಶಿಕ್ಷಣ

ಮಾತೃಭಾಷೆಯಲ್ಲೇ ನಡೆಯಬೇಕು. ಇದನ್ನು ಪ್ರತಿಪಾದಿಸುವ ರಾಷ್ಟ್ರೀಯ ಶಿಕ್ಷಣ ನೀತಿಯ ಪರಿಣಾಮಕಾರಿ ಅನುಷ್ಠಾನ ಆಗಬೇಕಿದೆ ಎಂದರು.

ಭಾರತೀಯ ಶಿಕ್ಷಣ ಮಂಡಳವು ಇದೆ ದಿಸೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು 1969 ರಲ್ಲಿ ರಾಮನವಮಿಯ ದಿನದಂದೆ ಭಾರತೀಯ ಶಿಕ್ಷಣ ಮಂಡಳವು ಜನಿಸಿತು. ಶಿಕ್ಷಣ ಕ್ಷೇತ್ರದಲ್ಲಿ ರಾಮತ್ವ ಅಳವಡಿಸಿಕೊಳ್ಳಬೇಕು ಅಂದರೆ ರಾಷ್ಟ್ರೀಯ ಪುನರುತ್ಥಾನ ವಾಗಬೇಕು ಎಂಬ ಉದ್ದೇಶದಿಂದ ಈ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ. ಇದು ಸಮಗ್ರ ಭಾರತೀಯ ದೃಷ್ಟಿಕೋನದ ಆಧಾರದ ಮೇಲೆ ರಾಷ್ಟ್ರೀಯ ಶಿಕ್ಷಣ ನೀತಿ, ಪಠ್ಯಕ್ರಮ, ವ್ಯವಸ್ಥೆ ಮತ್ತು ವಿಧಾನಗಳನ್ನು ವಿಕಸಿಸುವ ಗುರಿಯನ್ನು ಹೊಂದಿದೆ. ದೇಶದ ಎಲ್ಲಾ ಭಾಗಗಳಲ್ಲಿ ಹಲವಾರು ಶೈಕ್ಷಣಿಕ, ಬೌದ್ಧಿಕ ಮತ್ತು ಪ್ರಾಯೋಗಿಕ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ ಈ ಮೂಲಕ ರಾಷ್ಟ್ರದ ಒಟ್ಟಾರೆ ಅಭಿವೃದ್ಧಿಯತ್ತ ಗಮನವನ್ನು ಕೇಂದ್ರೀಕರಿಸಿದೆ ಎಂದು ಹೇಳಿದರು.

ಭಾರತೀಯ ಶಿಕ್ಷಣ ಪದ್ಧತಿಯಲ್ಲಿ 'ಬೋಧನೆ'ಗಿಂತಲೂ ಕಲಿಕೆಗೆ ಹೆಚ್ಚಿನ ಮಹತ್ವ. ಇದರ ಪ್ರಕಾರ ಯಾವುದನ್ನೂ

ಹೊಸತಾಗಿ ಕಲಿಸಲಾಗದು, ಕಲಿಕಾರ್ಥಿ ತನ್ನ ಶ್ರದ್ಧೆಯಿಂದ ಕಲಿತುಕೊಳ್ಳಬಲ್ಲ ಅಷ್ಟೇ. ನಮ್ಮ ಶಿಕ್ಷಣ ಮಾಹಿತಿ,

ವ್ಯಾಖ್ಯಾನ, ವಿಮರ್ಶೆಯ ಹಂತವನ್ನು ದಾಟಿ ಸೌಂದರ್ಯಶಾಸ್ತ್ರದ ಹಂತದವರೆಗೆ ವಿಸ್ತರಿಸಿಕೊಂಡಿದೆ.

ಆತ್ಮನಿರ್ಭರತೆಯನ್ನು ಸಾಧಿಸುವುದೇ ಶಿಕ್ಷಣದ ಉದ್ದೇಶ ಎಂದರು.

ಸದ್ಯದ ಶಿಕ್ಷಣ ವ್ಯವಸ್ಥೆ ವಿದ್ಯಾರ್ಥಿ ಕೇಂದ್ರಿತವಾಗಿದ್ದು, ಕಲಿಯುವುದರಲ್ಲಿ ಹಾಗೂ ಕಲಿಸುವುದರಲ್ಲಿ ಯಾರಿಗೂ ಆಸಕ್ತಿ ಇಲ್ಲವಾಗಿದೆ. ಇದರಿಂದಾಗಿಯೇ, ವಿದ್ಯಾರ್ಥಿಗಳ ಆತ್ಮಹತ್ಯೆ ಹೆಚ್ಚಾಗಿದೆ ಎಂದು ಹೇಳಿದರು.

ಶಿಕ್ಷಣ ವ್ಯವಸ್ಥೆ ಭಾರತೀಕರಣಗೊಳ್ಳಬೇಕಾದರೆ ನೀತಿ, ಬದ್ಧತೆ, ಪಠ್ಯಕ್ರಮ ಹಾಗೂ ಮೌಲ್ಯಾಂಕನದಲ್ಲಿ

ಬದಲಾವಣೆಗೊಂಡು ಆಧ್ಯಾತ್ಮಿಕರಣವಾಗಬೇಕಿದೆ. ವೇದಗಳು, ಉಪನಿಷತ್, ದರ್ಶನಗಳು, ಪುರಾಣ, ರಾಮಾಯಣ ಹಾಗೂ ಮಹಾಭಾರತ ಪಠ್ಯಕ್ರಮದಲ್ಲಿ ಅಳವಡಿಕೆಯಾಗಬೇಕಿದೆ' ಎಂದರು ಮನೆ ಸರಿಯಾದರೆ ಮಕ್ಕಳು ಸರಿಯಾಗ್ತಾರೆ ಮಕ್ಕಳು ಸರಿಯಾದರೆ ಶಾಲೆ ಸರಿಯಾಗುತ್ತದೆ ಆಗ ರಾಷ್ಟ್ರ ಪುನರ್ ನಿರ್ಮಾಣವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ ರಾಜೇಂದ್ರ ಕೊಂಡಾ ಮಾತನಾಡಿದರು

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ವಿಶೇಷ ಅಧಿಕಾರಿ ಹಾಗೂ

ಭಾರತೀಯ ಶಿಕ್ಷಣ ಮಂಡಳದ ಉನ್ನತ ಶಿಕ್ಷಣ ಗತಿ ವಿಧಿ ಪ್ರಮುಖರಾದ ಡಾ ಪರಮೇಶ ಬಿರಾದಾರ, ಭಾರತೀಯ ಶಿಕ್ಷಣ ಮಂಡಳ ಪ್ರಾಂತ ಅಧ್ಯಕ್ಷರಾದ ಡಾ ಬಸವರಾಜ ಅನಾಮಿ, ಜಿಲ್ಲಾ ಉಪಾಧ್ಯಕ್ಷ ಶಿವಾನಂದ ಖಜೂರಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು ಕಾಲೇಜಿನ ಉಪ ಪ್ರಾಚಾರ್ಯರಾದ ಡಾ ವೀಣಾ ಹೊನಗುಂಟಿಕರ್ ಪ್ರಾರ್ಥಿಸಿದರು ಜಿಲ್ಲಾ ಕಾರ್ಯದರ್ಶಿ ಶಿವಶರಣ ಉದನೂರ ಸ್ವಾಗತಿಸಿದರು ಮಲ್ಲಯ್ಯ ಹೀರಾತ ಕಾರ್ಯಕ್ರಮ ನಿರೂಪಿಸಿದರು ಶರಬಯ್ಯ ಉದನೂರ ವಂದಿಸಿದರು.

# ಸಿರುಗುಪ್ಪ ನಗರ ಹಾದು ಹೋಗುವ ರಸ್ತೆಯಲ್ಲಿ ಹೆಚ್ಚುತ್ತಿರುವ ಅಪಘಾತಗಳು

ಮಲ್ಲಮ್ಮ ನುಡಿ ವಾರ್ತೆ

ಸಿರುಗುಪ್ಪ,ಆ.23: ನಗರದ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ 150ಎ ರಲ್ಲಿ ಸತತ ಮಳೆಯಿಂದಾಗಿ ದೊಡ್ಡ ಪ್ರಮಾಣದಲ್ಲಿ ಗುಂಡಿಗಳು ಬಿದ್ದಿದ್ದು, ನಿತ್ಯವು ಈ ರಸ್ತೆಯಲ್ಲಿ ಸಾರ್ವಜನಿಕರು ವಾಹನಗಳೊಂದಿಗೆ ಸಂಚರಿಸಲು ಗೊಳಾಡುವ ಪರಿಸ್ಥಿತಿ ಉಂಟಾಗಿದೆ.



ತಾಲೂಕಿನಲ್ಲಿ ಮಳೆ ಬಂದರೆ ಸಾಕು ಗುಂಡಿಗಳ ದರ್ಬಾರು ಮಳೆ ಬರದೇ ಹೋದರೆ ಧೂಳು ಕಾಟಕ್ಕೆ ತಾಲೂಕಿನ ಜನತೆ ದಿನೇ ದಿನೇ ಬೇಸೆತ್ತು ಹೋಗಿದ್ದಾರೆ. ಮದುವೆ, ಕಾರ್ಯಕ್ರಮ, ಕೆಲಸದ ಚಟುವಟಿಕೆಗಳಿಗೆ ಸಿರುಗುಪ್ಪ ನಗರಕ್ಕೆ ಬೇರೆ ಬೇರೆ ತಾಲೂಕು, ಜಿಲ್ಲೆಯಿಂದ ಆಗಮಿಸುವ ಜನರು ಸಿರುಗುಪ್ಪ ಎಂದರೆ ಸಾಕು ಧೂಳು ಅಥವಾ ಗುಂಡಿಗಳಿಂದ ಬೇಸತ್ತು ಹೋಗಿದ್ದಾರೆ.

ಗುರುವಾರ ಇಬ್ರಾಹಿಂಪುರ ಗ್ರಾಮದಲ್ಲಿ ಕೆಕೆಆರ್ ಟಿಸಿ ಬಸ್ ಗುಂಡಿಯಲ್ಲಿ ಸಿಕ್ಕು ಪ್ರಯಾಣಿಕರು ಪರದಾಡುವಂತಾಯಿತು.

ಅಲ್ಲದೇ ಸಿರುಗುಪ್ಪ ನಗರದ ಆಕ್ಸಿಸ್ ಬ್ಯಾಂಕ್ ಮುಂಭಾಗದಲ್ಲಿ ನೀರಿನ ಟ್ಯಾಂಕರ್ ಉರುಳಿಬಿದ್ದಿದೆ. ಇದ–ರಿಂದಾಗಿ ತಾಸುಗಟ್ಟಲೆ ಸಮಚಾರ ವ್ಯತ್ಯಯಗೊಂಡಿತು.

ಹೆಸರಿಗಷ್ಟೇ ರಾಷ್ಟ್ರೀಯ ಹೆದ್ದಾರಿ ಆದರೆ ಇಲ್ಲಿನ ದೊಡ್ಡ ದೊಡ್ಡ ಗುಂಡಿಗಳಿಂದಾಗಿ ನಿತ್ಯವೂ ಸಾರ್ವಜನಿಕರು ಪರಿತಪಿಸುವಂತಾಗಿದೆ.

ನಗರದ ದೇವಲಾಪುರ ಕ್ರಾಸ್ ನಿಂದ ಧಡೇಸೂಗೂರು ವರೆಗಿನ ಕೇವಲ ಎಂಟು ಕಿಮೀ ಪ್ರಯಾಣಿಸಲು ಒಂದು ಗಂಟೆ ಸಮಯ ತೆಗೆದುಕೊಳ್ಳುತ್ತದೆ ಎಂದು ವಕೀಲ ಯು.ವೆಂಕೋಬ ಬೇಸರ ವ್ಯಕ್ತಪಡಿಸಿದರು.

# ಸೈದಾಪುರ:ಮನೆ ಮನೆಗೆ ಪೊಲೀಸ್ ಸೇವೆ



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಅ.22: ಪಟ್ಟಣದಲ್ಲಿ ಪೊಲೀಸ್ ಠಾಣೆ ವತಿಯಿಂದ ಮನೆ ಮನೆಗೆ ಪೊಲೀಸ್ ಸೇವೆ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಮುಖ್ಯ ಪೇದೆ ಸಕ್ರೆಪ್ಪ ಸಾರ್ಜನಿಕರಿಗೆ ಬಿತ್ತಿ ಪತ್ರಗಳನ್ನು ವಿತರಣೆ ಮಾಡಿ ಮಾತನಾಡಿ, ಪೊಲೀಸರು ನಿಮ್ಮ ಸ್ನೇಹಿತರಿದ್ದಂತೆ ಏನೇ ಸಮಸ್ಯೆ ಇದ್ದರೂ ಕೂಡಲೇ ಸಂಪರ್ಕ ಮಾಡಿ. ಅನುಮಾನಾಸ್ಪದ ವ್ಯಕ್ತಿಗಳು ಕಂಡು ಬಂದಲ್ಲಿ ಹಾಗೂ ಅಹಿತಕರ ಘಟನೆಯಾದಲ್ಲಿ ದೂರವಾಣಿ ಸಂಖ್ಯೆ 7829188532 ಹಾಗೂ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆಗಳಾದ 08423224233, 9480803582 ಈ ನಂಬರಿಗಳಿಗೆ ಸಂಪರ್ಕ ಮಾಡುವಂತೆ ತಿಳಿಸಿದರು. ಈ ಸಂದರ್ಭದಲ್ಲಿ ಗ್ರಾಮಸ್ಥರು ಸೇರಿದಂತೆ ಇತರರಿದ್ದರು.

ಪ್ರವಾಹ ಪೀಡಿತ ಪ್ರದೇಶಕ್ಕೆ ಪ್ರಾದೇಶಿಕ ಆಯುಕ್ತೆ ಜಾನಕಿ ಭೇಟಿ

## ಮಿರ್ಜಿ ಸಂತ್ರಸ್ತರಿಗೆ ಶಾಶ್ವತ ಪರಿಹಾರ ಕಲ್ಪಿಸಲು ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.23–ಮುಧೋಳ ತಾಲೂಕಿನ ಮಿರ್ಜಿಗ್ರಾಮದಕ್ಕೆ ಪ್ರತಿ ವರ್ಷ ಪ್ರವಾಹಕ್ಕೆ ಈಡಾಗುತ್ತಿದ್ದು, ಗ್ರಾಮದ ಸಂತ್ರಸ್ತರಿಗೆ ಶಾಶ್ವತ ಪರಿಹಾರಕ್ಕೆ ಕ್ರಮಕೈಗೊಳ್ಳುವಂತೆ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಾನಕಿ ಕೆ.ಎಂ ಅಧಿಕಾರಿಗಳಿಗೆ ಸೂಚಿಸಿದರು.

ಶುಕ್ರವಾರ ಮುಧೋಳ ತಾಲೂಕಿನ ಮಿರ್ಜಿ ಗ್ರಾಮದಲ್ಲಿ ಪ್ರವಾಹಕ್ಕೆ ತುತ್ತಾದ ಮನೆಗಳನ್ನು ವೀಕ್ಷಣೆ ಮಾಡಿ ನಂತರ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ ಸಂತ್ರಸ್ತರ ಯೋಗಕ್ಷೇಮ ವಿಚಾರಿಸಿ ಮಾತನಾಡಿದ ಅವರು, ಪ್ರತಿ ವರ್ಷ ಪ್ರವಾಹ ಬಂದಾಗಲೆಲ್ಲ ಗ್ರಾಮಗಳಲ್ಲಿಯ ಮನೆಗಳಿಗೆ ನೀರು ಬರುತ್ತಿದೆ. ಬಾಧಿತಗೊಳ್ಳುವ ಕುಟುಂಬಗಳನ್ನು ಪಟ್ಟಿ ಮಾಡಿಕೊಂಡು ಸರಕಾರಿ ಜಾಗೆ ಗುರುತಿಸಿ ಸ್ಥಳಾಂತರಿಸುವ ಕೆಲಸವಾಗಬೇಕು ಎಂದರು.

ಮುಗುಳಖೋಡ ಗ್ರಾಮದಲ್ಲಿ ಸರಕಾರಿ ಗೌಂಟೌನ್ ಜಾಗ ಇರುವುದಾಗಿ ತಿಳಿಸಿದಾಗ ಪ್ರವಾಹಕ್ಕೆ ಬಾಧಿತಗೊಂಡ ಕುಟುಂಬಗಳಿಗೆ ಜಾಗ ನೀಡಿ ಸರಕಾರದ ವಿವಿಧ ವಸತಿ ಯೋಜನೆಗಳಲ್ಲಿ ಮನೆ ಕಟ್ಟಿಕೊಡುವ ಕೆಲಸ ಮಾಡಲು ತಿಳಿಸಿದ ಜಾನಕಿ, ಕಾಳಜಿ ಕೇಂದ್ರದಲ್ಲಿ ಊಟ, ವಸತಿ ಹಾಗೂ ಇತರೆ ಸೌಲಭ್ಯಗಳ ಪರಿಶೀಲನೆ ನಡೆಸಿದರು. ಸಂತ್ರಸ್ತರಿಗೆ ಯಾವುದೇ ರೀತಿಯ ತೊಂದ–ರೆಯಾಗದಂತೆ ಸೌಲಭ್ಯಗಳನ್ನು ಒದಗಿಸುವ ಕಾರ್ಯವಾಗಬೇಕು ಎಂದು ಸೂಚಿಸಿದರು.

ನಂತರ ಯಾದವಾಡ ಸೇತುವೆಗೆ ಭೇಟಿ ನೀಡಿ ನೀರಿನಮಟ್ಟ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಜಮಖಂಡಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ತಹಶೀಲ್ದಾರ ಮಹಾದೇವ ಸುನಮೂರಿ, ಸಿಪಿಐ ಮಹಾದೇವ ಶಿರಟ್ಟಿ, ನೋಡಲ್ ಅಧಿಕಾರಿ ಪ್ರಕಾಶ ವಡ್ಡರ ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಪರಿಶಿಷ್ಟ ಜಾತಿ ಸಿ ಗುಂಪಿನ ಒಳಮೀಸಲಾತಿ

## 'ಸ್ಪೃಶ್ಯಜಾತಿ' ಪದ ತೆಗೆಯಲು ಸಿದ್ಧರಾಮೇಶ್ವರ ಶ್ರೀಗಳ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.23–ಪರಿಶಿಷ್ಟಜಾತಿ ಒಳಮೀಸಲಾತಿಯಲ್ಲಿನ ಸಿ ಗುಂಪಿಗೆ ಅಸಂವಿಧಾನಕ ಪದ "ಸ್ಪೃಶ್ಯ ಜಾತಿ' ಎಂಬುದನ್ನು ಕಡತದಿಂದ ತೆಗೆದು "ವಿಮುಕ್ತ ಸಮುದಾಯ"ಗಳೆಂದು ಗುರುತಿಸುವಂತೆ ಭೋವಿ ಗುರುಪೀಠದ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಆಗ್ರಹಿಸಿದ್ದಾರೆ.



ನಗರದ ಭೋವಿ ಮಠದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಸಚಿವ ಸಂಪುಟದಲ್ಲಿ ನ್ಯಾ. ನಾಗಮೋಹನದಾಸ್ ಶಿಫಾರಸ್ಸುಗಳನ್ನು ಕೆಲವು ಮಾರ್ಪಾಟುಗಳೊಂದಿಗೆ ರಾಜಕೀಯ ಒತ್ತಡದಲ್ಲಿ ಅಂಗೀಕರಿಸಿದೆ ಎಂದು ಹೇಳಿದರು.

ಪರಿಶಿಷ್ಟ ಜಾತಿಗಳಲ್ಲಿರುವ ಎಲ್ಲಾ 101 ಜಾತಿಗಳಿಗೆ ಶಿಕ್ಷಣ, ಉದ್ಯೋಗಾವಕಾಶ ಹಾಗೂ ಇನ್ನಿತರೆ ವಿಷಯಗಳಲ್ಲಿ ಅವಕಾಶಗಳನ್ನು ಒದಗಿಸುವಲ್ಲಿ ಸಮಾನತೆ ಮತ್ತು ನ್ಯಾಯ ಸಮ್ಮತೆಯನ್ನು ಖಚಿತಪಡಿಸಿಕೊಳ್ಳುವ ದೃಷ್ಟಿಯಿಂದ ನ್ಯಾ.ನಾಗಮೋಹನದಾಸ್ ಆಯೋಗದ ಶಿಫಾರಸ್ಸನ್ನು ಸಚಿವ ಸಂಪುಟ ಎ,ಬಿ,ಸಿ ಎಂದು ಮೂರು ಪ್ರವರ್ಗಗಳನ್ನಾಗಿ ವಿಭಾಗಿಕರಿಸಿ 6:6:5 ಅನುಪಾತದಲ್ಲಿ ಒಳಮೀಸಲಾತಿ ನೀಡಲು ತೀರ್ಮಾನಿಸಿದೆ.

ಸ್ವಾತಂತ್ರ್ಯ ನಂತರದಲ್ಲಿ 1952 ರಲ್ಲಿ ಕೇಂದ್ರ ಸರ್ಕಾರ ಅನಂತ ಶಯನಂ ಅಯ್ಯಂಗಾರ್ ಸಮಿತಿ ಶಿಫಾರಸ್ಸಿನಂತೆ ಕೊರಮ, ಕೊರಚ, ಭೋವಿ ಲಂಬಾಣಿ ಸಮುದಾಯಗಳನ್ನು ವಿಮುಕ್ತ ಸಮುದಾಯಗಳು ಎಂದು ಭಾರತ ಸರ್ಕಾರ ಅಧಿಕೃತವಾಗಿ ಮತ್ತು ಕಾನೂನು ಬದ್ಧವಾಗಿ ಗುರುತಿಸಿದೆ.

ಹಾಗಾಗಿ ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟಜಾತಿಯಲ್ಲಿ ಬರುವ ಕೊರಮ, ಕೊರಚ, ಭೋವಿ (ವಡ್ಡ, ಒಡ್ಡ) ಸಮುದಾಯಗಳು ಸ್ಪೃಶ್ಯರಲ್ಲ. ಇದು ಅಸಂವಿಧಾನಿಕ ಪದ ಪ್ರಯೋಗವಾಗಿದೆ ಎಂದು ಹೇಳಿದ ಶ್ರೀಗಳು, ಮೀಸಲಾತಿ ಉಪವರ್ಗೀಕರಣದ ಕಡತದಿಂದ "ಸ್ಪೃಶ್ಯ" ಎಂಬ ಪದ ತೆಗೆದು ವಿಮುಕ್ತ ಜಾತಿಗಳು ಅಥವಾ ವಿಮುಕ್ತ ಸಮುದಾಯಗಳು ಎಂಬ ಪದ ಸೇರಿಸಬೇಕು ಎಂದು ಒತ್ತಾಯಿಸಿದರು. ಸಿ ಗುಂಪಿಗಿದ್ದ ಶೇ.4 ಮೀಸಲಾತಿಯನ್ನು ಸಚಿವ ಶಿವರಾಜ ತಂಗಡಗಿ ಭೋವಿ, ಬಂಜಾರ, ಕೊರಮ, ಕೊರಚ, ಸಮುದಾಯಗಳ ಧ್ವನಿಯಾಗಿ ಶೇ. 5 ರಷ್ಟು ಮಾಡಿಸಿರುವುದು ಅಭಿನಂದನಾರ್ಹ. ಆದರೆ ಈ ಗುಂಪಿಗೆ ಅಲೆಮಾರಿಗಳನ್ನು ಸೇರಿಸಿದಾಗ ಶೇ.6ರಷ್ಟು ಹೆಚ್ಚಿಸಬೇಕಾಗಿತ್ತು ಎಂದು ಅವರು ಹೇಳಿದರು. ಕರ್ನಾಟಕ ಸರ್ಕಾರ ಈಗ ಕೈಗೊಂಡಿರುವ ತೀರ್ಮಾನದಲ್ಲಿ ಯಾವುದಾದರೂ ಮಾರ್ಪಾಡುಗಳ ಅಗತ್ಯತೆ ಕಂಡುಬಂದರೆ ಅವುಗಳನ್ನು ಮುಂದಿನ ರಾಷ್ಟ್ರೀಯ ಜನಗಣತಿಯಲ್ಲಿನ ಅಂಕಿ–ಅಂಶಗಳನ್ನು ಆಧರಿಸಿ ಬದಲಾವಣೆಗೆ ಒಳಪಡಿಸುವ ಷರತ್ತಿಗೆ ಬದ್ಧವಾಗಿದೆ ಎಂದು ಹೇಳಿರುವುದನ್ನು ಸ್ವಾಗತಿಸುವುದಾಗಿ ಇಮ್ಮಡಿ ಸಿದ್ಧರಾಮೇಶ್ವರ ಶ್ರೀಗಳು ಹೇಳಿದರು.

## ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ಉಪ ಪ್ರಾಚಾರ್ಯ ಬಸವರಾಜ್ ಪತ್ತಾರ ರವರನ್ನ ಅಮಾನತು ಗೊಳಿಸುವಂತೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಹಿಂದುಗಡೆ ಇರುವ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ಉಪ ಪ್ರಾಚಾರ್ಯ ಬಸವರಾಜ್ ಪತ್ತಾರ ರವರನ್ನ ಅಮಾನತು ಗೊಳಿಸುವಂತೆ ಒತ್ತಾಯಿಸಿ 26–8– 2025 ರಂದು ಅನಿರ್ದಿಷ್ಟ ಅವಧಿ ಧರಣಿ ಮಾಡಲು ಒತ್ತಾಯಿಸಿ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಜಯ ಕರ್ನಾಟಕ ರಕ್ಷಣಾ ಸೇನೆ ಅಧ್ಯಕ್ಷ ಹನುಮಂತ ನಾಯಕ ಶಾಲಾ ಅವಧಿಯಲ್ಲಿ ವಿದ್ಯಾರ್ಥಿಗಳಿಂದ ಅಪಾಯಕಾರಿ ಕೆಲಸಕ್ಕೆ ಬಳಕೆ ಮಾಡಿಕೊಳ್ಳಲಾಗುತ್ತಿದ್ದು ಅಕ್ಕಿ ಮೂಟೆ, ತರಿಸುವುದು ಮತ್ತು ಬೇರೆ ಬೇರೆ ಕೆಲಸ ಮಾಡಿಸುವುದು ಕಾನೂನು ಬಾಹಿರ ನಾಯಕ್ ಒತ್ತಾಯಿಸಿದ್ದಾರೆ. ಎಂದು ಗೊತ್ತಿದ್ದರೂ ಅದನ್ನೇ ಮುಂದುವರೆಸಿದ್ದು ಶಾಲೆಯ ಕಂಪೌಂಡ್ ಬಿದ್ದು 2 ವರ್ಷ ಕಳೆದಿವೆ. ದುರಸ್ತಿ ಕಾರ್ಯವನ್ನು ಮಾಡುತ್ತಿಲ್ಲ, ಇದರಿಂದಾಗಿ, ಸಂಜೆಯಾಗುತ್ತಿದ್ದಂತೆ ಪುಂಡ ಪೋಕರಿಗಳು ಪ್ರೌಢಶಾಲೆಯ ಆವರಣಕ್ಕೆ ನುಗ್ಗಿ ಜೂಜಾಟ, ಶಾಲೆಯ ಆವರಣದಲ್ಲಿ ಮದ್ಯಪಾನ ಮಾಡಿ ಬಾಟಲಿ ಶಾಲೆಯಲ್ಲಿ ಬೀಸಾಡಿ ಹೋಗುತ್ತಿದ್ದಾರೆ. ಆದರೆ ಈ ಬಗ್ಗೆ ಗಮನ ಹರಿಸಬೇಕಾದ ಉಪ ಪ್ರಾಚಾರ್ಯರು

ಏನಾದರೂ ಆಗಲಿ ಹಾಳಾಗಿ ಹೋಗಲಿ ನಮಗೇಕೆಬೇಕು ಎಂದು ಕಣ್ಣು ಚ್ಚಿಕೊಂಡು ಕುಳಿತ್ತಿದ್ದಾರೆ. ಈ ಬಗ್ಗೆ ವಿಚಾರಿಸಿದರೆ ಅದೆನ್ನೆಲ್ಲ ಕೇಳುವವರು ನೀವು ಯಾರು? ಶಾಲೆಯನ್ನು ಅಭಿವೃದ್ಧಿಪಡಿಸಿದರೆ ದಾಖಲಾತಿ ಹೆಚ್ಚುತ್ತದೆ ಎಂದರೆ ನಮಗೆ ದಾಖಲಾತಿ ಹೆಚ್ಚಾಗುವುದು ಬೇಡ ಎಂದು ಹೇಳುತ್ತಿರುವ ಉಪ ಪ್ರಾಚಾರ್ಯರರಿಗೆ ಕರ್ತವ್ಯ ನಿಷ್ಠೆ ಮತ್ತು ಬದ್ಧತೆ ಇಲ್ಲದಂತೆ ಮಾತನಾಡುತ್ತಾರೆ. ಎಸ್‌ಡಿ ಎಂಸಿ ಯನ್ನು ರಚನೆ ಮಾಡಿಲ್ಲ. ಇದರಿಂದಾಗ ನೀವು ಯಾರು ಕೇಳಲು ಎಂದು ಉಡಾಫೆ ಉತ್ತರ ನೀಡುತ್ತಿದ್ದಾರೆ. ಶಾಲೆಗೆ ಬಂದ ಅನುದಾನದ ಬಗ್ಗೆ ವಿವರವಾದ ಮಾಹಿತಿ ನೀಡಿ ಎಂದು ಮಾಹಿತಿ ಹಕ್ಕು ಅಧಿನೀಯಮ ದಡಿ ಮಾಹಿತಿ ಕೇಳಲಾಗಿದ್ದು ಸರಿಯಾದ ಮಾಹಿತಿ ನೀಡಿಲ್ಲ, :09–07–2005 ರಂದು ಲಿಂಗಸುಗೂರ ಎಸಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿತ್ತು : 14–08–2025 ರಂದು ಉಪ ನಿರ್ದೇಶಕ ಲಿಂಗಸುಗೂರು, ಶಿಕ್ಷಣ ಇಲಾಖೆ ಇವರಿಗೆ ದಾಖಲೆಗಳ ಸಮೇತ ದೂರು ನೀಡಿದರು ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಳ್ಳದ ಕಾರಣ. ಅಧಿಕಾರಿಗಳ ವಿಳಂಭ ನೀತಿಯನ್ನು ಖಂಡಿಸಿ, ಉಪ ಪ್ರಾಚಾರ್ಯ ಬಸವರಾಜ ಪತ್ತಾರ ಇವರ ಅಮಾನತ್ತಿಗೆ ಆಗ್ರಹಿಸಿ ಜಯ ಕರ್ನಾಟಕ ರಕ್ಷಣಾ ಸೇನೆ ತಾಲೂಕು ಘಟಕದ ವತಿಯಿಂದ ದಿನಾಂಕ:26–08–2025ರಂದು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಮುಂದೆ ಉಪ ಪ್ರಚಾರವನ್ನು ಅಮಾನತ್ತು ಮಾಡುವವರೆಗೂ ಅನಿರ್ಧಿಷ್ಟಾವಧಿ –ಧರಣಿಯನ್ನು ಹಮ್ಮಿ ಕೊಳ್ಳುತ್ತಿದ್ದು ಶಾಲೆಯ ಪಾಲಕರು ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಬೆಂಬಲಿಸಬೇಕು ಎಂದು ಜಯ ಕರ್ನಾಟಕ ರಕ್ಷಣಾ ಸೇನೆ ವೇದಿಕೆ ಅಧ್ಯಕ್ಷ ಹನುಮಂತ್ ನಾಯಕ್ ಪತ್ರಿಕೆ ಮುಖಾಂತರ ಮನವಿ ಮಾಡಿದರು.

ಈಸಂದರ್ಭದಲ್ಲಿ ಪ್ರವೀಣ್ ಕುಮಾರ್, ನಿಂಗಪ್ಪ,ಆದಪ್ಪ ನಾಯಕ, ಮಂಜುನಾಥ ನಾಯಕ, ಮಲ್ಲೇಶ್ , ಅಮರೇಗೌಡ, ಮೋಹಿನ್, ಸೇರಿದಂತೆ ಉಪಸ್ಥಿತರಿದ್ದರು.

ಆಯುರ್ವೇದ ಕಾಲೇಜಿನಲ್ಲಿ ಕೃಷ್ಣ ಜನ್ಮಾಷ್ಟಮಿ

## ಕೃಷ್ಣನ ತೂಗಿ ಲಾಲಿ ಹಾಡಿದ ವಿದ್ಯಾರ್ಥಿನಿಯರು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.23–ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಆಯುರ್ವೇದಿಕ ಕಾಲೇಜಿನಲ್ಲಿ ಕೃಷ್ಣಜನ್ಮಾಷ್ಟಮಿಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಈ ಸಂಬಂಧ ವಿಶೇಷ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಕಾಲೇಜು ಆವರಣದ ಗೋಡೆಗಳನ್ನು ಹೂವಿನಿಂದ ಅಲಂಕರಿಸಿ ಆಕರ್ಷಕ ತೊಟ್ಟಿಲು ಕಟ್ಟಿ ಬಾಲ ಕೃಷ್ಣನನ್ನು ತೊಟ್ಟಿಲಲ್ಲಿ ಹಾಕಿ ಲಾಲಿ ಹಾಡು ಹೇಳಿ ವಿದ್ಯಾರ್ಥಿನಿಯರು ಸಂಭ್ರಮಿಸಿದರು.

ನಂತರ ವಿದ್ಯಾರ್ಥಿಗಳಿಂದ ಗಡಿಗೆ ಒಡೆಯುವ ಸ್ಪರ್ಧೆ ನಡೆಯಿತು. ಐದು ತಂಡಗಳಾಗಿ ಭಾಗವಹಿಸಿದ್ದ ವಿದ್ಯಾರ್ಥಿಗಳು ಆಸಕ್ತಿಯಿಂದ ಮೊಸರು ಗಡಿಗೆ ಒಡೆದು ಸಂಭ್ರಮಿಸಿದರು. ವಿದ್ಯಾರ್ಥಿನಿಯರು ಸಹ ಮೊಸರು ಗಡಿಗೆ ಒಡೆದು ಗಮನ ಸೆಳೆದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಾಚಾರ್ಯ ಎಂ.ಎಸ್.ಹಿರೇಮಠ, ಇಂದಿನ ವಿದ್ಯಾರ್ಥಿಗಳಿಗೆ ನಾಡಿನ ಸಾಂಸ್ಕೃತಿಕ ಉತ್ಸವಗಳ ಮಹತ್ವ ಮತ್ತು ಅದರಲ್ಲಿನ ವೈಜ್ಞಾನಿಕ ಜ್ಞಾನದ ಅರಿವು ಮೂಡಿಸಲು ಇಂತಹ ಅನೇಕ ಕಾರ್ಯಕ್ರಗಳನ್ನು ಮಹಾವಿದ್ಯಾಲಯ ಆಯೋಜಿಸುತ್ತಾ ಬಂದಿದೆ ಎಂದರು.

ಡಾ.ಆರ್.ಆಯ.ಜಂಬಗಿ,ಡಾ.ವಿ.ಎಸ್. ಚೌದರಿ, ಡಾ.ಚೈತ್ರಾ, ಡಾ.ಎಸ್.ಎಸ್. ಕಲ್ಯಾಣಿ, ಡಾ.ಪ್ರಮೋದಕುಮಾರ ಭಾಗವಹಿಸಿದ್ದರು.

## ಆಧುನಿಕ ಜಗತ್ತಿಗೆ ಕೃತಕ ಬುದ್ಧಿಮತ್ತೆ ಜ್ಞಾನ ಅಗತ್ಯ : ರುದ್ರಾಕ್ಷಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.23–ಆಧುನಿಕ ಜಗತ್ತಿಗೆ ಕೃತಕ ಬುದ್ಧಿಮತ್ತೆ ಜ್ಞಾನ ಅಗತ್ಯವಾಗಿದೆ ಎಂದು ಬೆಂಗಳೂರಿನ ಲೋಡಶೇರ್ ನೆಟ್‌ವರ್ಕ್ಸನ ಸಾಫ್ಟವೇರ್ ಇಂಜಿನಿಯರ್ ಪ್ರಜ್ವಲ್ ರುದ್ರಾಕ್ಷಿ ಹೇಳಿದರು.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ ಮತ್ತು ಕಂಪ್ಯೂಟರ್ ವಿಜ್ಞಾನ ವಿಭಾಗದಡಿಯಲ್ಲಿ ಬಿಸಿಎ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಕೃತಕ ಬುದ್ಧಿಮತ್ತೆ ಕುರಿತು ಒಂದು ದಿನದ ವಿಶೇಷ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಕೃತಕ ಬುದ್ಧಿಮತ್ತೆ ತಂತ್ರಜ್ಞಾನವು ಇಂದು ನಮ್ಮ ದೈನಂದಿನ ಬದುಕು, ಉದ್ಯಮ, ಆರೋಗ್ಯ, ಶಿಕ್ಷಣ, ರಕ್ಷಣಾ ವ್ಯವಸ್ಥೆ ಸೇರಿದಂತೆ ವಿವಿಧ ಹಲವಾರು ವಲಯಗಳಲ್ಲಿ ಕಾಂತ್ರಿಕಾರಿಯಾಗಿ ಪರಿಣಮಿಸಿದ್ದು, ವಿದ್ಯಾರ್ಥಿಗಳು ಅದರ ಮಹತ್ವವನ್ನು ಅರಿತು–ಕೊಂಡು ಆ ನಿಟ್ಟಿನಲ್ಲಿ ಕೌಶಲ್ಯಗಳನ್ನು ಅಳವಡಿಸಿಕೊಂಡಾಗ ಮಾತ್ರ ಆಧುನಿಕ ಸ್ಪರ್ಧಾತ್ಮಕ ಜಗತ್ತಿನಲ್ಲಿ ಯಶಸ್ವಿಯಾಗಲು ಸಾಧ್ಯವಿದೆ ಎಂದು ರುದ್ರಾಕ್ಷಿ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಮಾತನಾಡಿ, ತಂತ್ರಜ್ಞಾನದಲ್ಲಿ ಕೃತಕ ಬುದ್ಧಿಮತ್ತೆ ಪ್ರಮುಖ ಪಾತ್ರವನ್ನು ವಹಿಸುತ್ತಿದೆ. ಮಾನವ ಬುದ್ಧಿಮತ್ತೆಯಂತೆ ಯಂತ್ರಗಳು ಯೋಚಿಸಲು, ನಿರ್ಧಾರ ತೆಗೆದುಕೊಳ್ಳಲು ಮತ್ತು ಕೃತಕವಾಗಿ ಬುದ್ಧಿವಂತಿಕೆ ಪ್ರದರ್ಶಿಸಲು ಸಹಾಯ ಮಾಡಲು ಉಪಯುಕ್ತವಾದ ತಂತ್ರಜ್ಞಾನವಾಗಿದ್ದು, ಮಾನವ ಪ್ರಗತಿಯ ಹೆಗ್ಗಳಿಕೆ ಆಗಿದೆ. ಸರಿಯಾಗಿ ಬಳಸದಿದ್ದರೆ ಅದು ಸಮಸ್ಯೆಗಳ ಮೂಲವಾಗುತ್ತದೆ. ಅದನ್ನು ಜವಾಬ್ದಾರಿಯುತವಾಗಿ ಬಳಸಿದರೆ ಸಮಾಜದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಚಮತ್ಕಾರಗಳನ್ನುಂಟು ಮಾಡಬಹುದೆಂದು ಹೇಳಿದರು.

ಐಕ್ಯೂಎಸಿ ಸಂಚಾಲಕ ಡಾ.ಬಸವರಾಜ ಬೀಳಗಿ, ಸಂಯೋಜಕ ಶ್ರೀಶೈಲ ಶಿರೋಳ, ವಿಭಾಗದ ಮುಖ್ಯಸ್ಥ ಸಾಗರ ಚಿಂಗಳಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಪ್ರೊ.ಸುನಂದಾ ಬೂದಿಹಾಳ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕರು ಮತ್ತು ಬೋಧ–ಕೇತರ ಸಿಬ್ಬಂದಿ ವರ್ಗದವರು, ಬಿಸಿಎ ವಿಭಾಗದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಕೊಪ್ಪಳ ಗವಿಸಿದ್ದೇಶ್ವರ ಶ್ರೀಗಳ ನುಡಿ ಧಾವಂತದ ಬದುಕು ವ್ಯಕ್ತಿಯ ಸ್ವಾಸ್ಥ್ಯ ಕೆಡಿಸಿದೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.23–ಆಧುನಿಕ ಆಡಂಬರ, ಸಂಪತ್ತಿನ ಆಸೆ ಮತ್ತು ಐಹಿಕ ಭೋಗದ ಮೋಹದಿಂದ ಜನಸಮುದಾಯ ಹೊರಗೆ ಬರಬೇಕು ಎಂದು ಕೊಪ್ಪಳದ ಅಭಿನವ ಗವಿಸಿದ್ದೇಶ್ವರ ಶ್ರೀಗಳು ಹೇಳಿದರು.

ಜಿಲ್ಲೆಯ ಹುನಗುಂದ ನಗರದಲ್ಲಿ ವಿಜಯ ಮಹಾಂತ ಶಿವಯೋಗಿಗಳ ಪುರಾಣ ಮಂಗಲ ಮತ್ತು ಪುನರ್ ನಿರ್ಮಾಣಗೊಂಡ ಶ್ರೀ ವಿಜಯ ಮಹಾಂತೇಶ್ವರ ಶಿಲಾ ಮಂಟಪವನ್ನು ಶುಕ್ರವಾರ ಉದ್ಘಾಟಿಸಿ ಪೂಜ್ಯರು ಮಾತನಾಡಿದರು.

ಆಧುನಿಕ ಧಾವಂತದ ಬದುಕು ಮನುಷ್ಯನ ಸ್ವಾಸ್ಥ್ಯವನ್ನು ಕೆಡಿಸಿದೆ. ಸಮಾಜ ಅಹಮ್ಮಿಕೆ ತೊರೆದು ಸಮಾಧಾನ ಸಂತೃಪ್ತಿ ಹಾದಿಯಲ್ಲಿ ಸಾಗಬೇಕು. ನಿಸರ್ಗದ ಇಚ್ಛೆಯ ವಿರುದ್ಧ ನಡೆಯಬಾರದು. ನಮ್ಮ ಅರಿವಿನ ವಿಸ್ತಾರ ಆಗಬೇಕು. ಇಂಥ ಅತ್ಯಾಧುನಿಕ ದಿನಮಾನದಲ್ಲಿ ಮೌಢ್ಯಾಚರಣೆ ಇನ್ನೂ ನಡೆಯುತ್ತಿರುವುದು ಖೇದದ ಸಂಗತಿ ಎಂದರು.

ಅನುಭಾವಿಗಳು ಮತ್ತು ದಾರ್ಶನಿಕರ ಬೋಧನೆಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಮಾತ್ರ ಸೌಖ್ಯ ಸಿಗುತ್ತದೆ. ಸನ್ಯಾಸದ ಶ್ರೇಷ್ಠತೆ ಹಾಗೂ ಘನತೆಗೆ ಕುಂದು ಬರಬಾರದು. ಸರಳತೆ ಮತ್ತು ನಿರಾಡಂಬರ ಸನ್ಯಾಸಿಗಳ ದಾರಿಗಳಾಗಿ ಭಕ್ತರ ಜೀವನ ಹಾದಿಯ ಬೆಳಕಾಗಬೇಕು. ಭಕ್ತರ ಮತ್ತು ಸಮಾಜದ ಉನ್ನತಿಗೆ ಮಠಗಳು ಶ್ರಮಿಸಬೇಕು ಎಂದು ಗವಿಸಿದ್ದೇಶ್ವರ ಶ್ರೀಗಳು ಹೇಳಿದರು.

ಸಾನಿಧ್ಯ ವಹಿಸಿದ್ದ ಚಿತ್ತರಗಿ–ಇಳಕಲ್ಲ ಗುರುಮಹಾಂತ ಶ್ರೀಗಳು ಮಾತನಾಡಿ, ಜಗತ್ತು ನೈಸರ್ಗಿಕ ಮತ್ತು ಸಾರ್ವತ್ರಿಕ ಪ್ರೇಮಕ್ಕೆ ಆದ್ಯತೆ ಕೊಡಬೇಕು. ಮಾನವೀಯತೆ ಹಾಗೂ ಸಮಾಜ ಸೂಕ್ಷ್ಮತೆಯ ಒಳಿತಿನ ಬೆಳಕು ನಮ್ಮ ಕಣ್ಮುಂದೆ ಇದ್ದಾಗ ಅದರಂತೆ ನಡೆಯಬೇಕು ಎಂದರು.

ಕೂಡಲಸಂಗಮದ ಬಸವಜಯ ಮೃತ್ಯುಂಜಯ ಶ್ರೀಗಳು, ಗುಳೇದಗುಡ್ಡ ಗುರುಸಿದ್ದೇಶ್ವರ ಶ್ರೀಗಳು, ಶಿರೂರಿನ ಡಾ.ಬಸವಲಿಂಗ ಶ್ರೀಗಳು, ಲಿಂಗಸ್ಗೂರು ಸಿದ್ದಲಿಂಗ ಶ್ರೀಗಳು, ಸಂತೆಕೆಲೂರಿನ ಶಿವಲಿಂಗ ಶರಣರು, ಮನಗೂಳಿಯ ವಿರತಿಶಾನಂದ ಶ್ರೀಗಳು ವೇದಿಕೆಯಲ್ಲಿದ್ದರು.


ವಿಜಯ ಮಹಾಂತೇಶ ಸಂಘದ ಗೌರವ ಕಾರ್ಯದರ್ಶಿ ಡಾ.ಮಹಾಂತೇಶ ಕಡಪಟ್ಟಿ, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಮುರಳೀಧರ ದೇಶಪಾಂಡೆ, ಬಸವ ಕೇಂದ್ರದ ಅಧ್ಯಕ್ಷ ಶಿವಪ್ಪ ನಾಗೂರ ಉಪಸ್ಥಿತರಿದ್ದರು.

ಬೆಳಗಾವಿಯ ಶರಣಬಸವ ಅಪ್ಪಗಳು ಪ್ರವಚನ ಮಂಗಲ ಮಾಡಿದರು. ಇದೇ ಸಂದರ್ಭದಲ್ಲಿ ಅಕ್ಕಮಹಾದೇವಿ ಮೂರ್ತಿ ಅನಾವರಣ ಮತ್ತು ದಾನಿಗಳ ಸನ್ಮಾನ ನಡೆಯಿತು.

ವೀರಣ್ಣ ಬಳೂಟಗಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸದಾಶಿವ ಬೆಣಗಿ ಪರಿವಾರ ಪ್ರಾರ್ಥಿಸಿದರು. ಸಂಗಮೇಶ ಹೊದ್ಲೂರ ನಿರೂಪಿಸಿದರು. ನಾಗರತ್ನ ಭಾವಿಕಟ್ಟಿ ವಂದಿಸಿದರು.

ಮುಂಜಾನೆ ಬಸವಾದಿ ಶರಣರ ವಚನ ಕಟ್ಟುಗಳ ಮೆರವಣಿಗೆ ನಗರದ ಪ್ರಮುಖ ಬೀದಿಗಳಲ್ಲಿ ನಡೆಯಿತು. ಬಂದ ಭಕ್ತರಿಗೆ ಮಹಾಪ್ರಸಾದ ಏರ್ಪಡಿಸಲಾಗಿತ್ತು.

## ಬದುಕು ಶಾಶ್ವತವಲ್ಲ, ಕಾರ್ಯಗಳು ಶಾಶ್ವತ–ಸೋಮಶೇಖರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.24–ವ್ಯಕ್ತಿಯ ಬದುಕು ಶಾಶ್ವತ ಅಲ್ಲ. ಬದುಕಿನ ಅವಧಿಯಲ್ಲಿ ಆತ ಮಾಡುವ ಕಾರ್ಯಗಳು ಶಾಶ್ವತ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ಸಿ.ಸೋಮಶೇಖರ ಹೇಳಿದರು.

ಜಿಲ್ಲೆಯ ಹುನಗುಂದ ನಗರದಲ್ಲಿ ಶನಿವಾರ ತಾಲೂಕು ಶರಣ ಸಾಹಿತ್ಯ ಪರಿಷತ್ತು ಹಾಗೂ ಇತರೆ ಸಂಘಟನೆಗಳ ಸಹಯೋಗದಲ್ಲಿ ಶರಣರ ಗದ್ದುಗೆಯಲ್ಲಿ ನಡೆದ ಬಸವಪ್ಪ ಹಾದಿಮನಿ ಶರಣರ 44ನೇ ಪುಣ್ಯಸ್ಮರಣೆ, ದತ್ತಿ ಉಪನ್ಯಾಸ, ಕೃಷಿ ಪ್ರಶಸ್ತಿ ಪ್ರದಾನ ಹಾಗೂ 34ನೇ ಮನೆ ಮನಗಳಿಗೆ ವಚನ ಸೌರಭ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಸವಪ್ಪ ಹಾದಿಮನಿ ಶರಣರು ಕೃಷಿಕರಾಗಿ ಬೆವರು ಮತ್ತು ಶ್ರಮ ಸಂಸ್ಕೃತಿಯ ಮೂಲಕ ಇಂದಿನ ಯುವ ಪೀಳಿಗೆಗೆ ಮಾದರಿಯಾಗಿದ್ದಾರೆ. ಯಾವುದೇ ಕಾಯಕವಿರಲಿ ಅದನ್ನು ಶ್ರದ್ಧೆ, ನಿಷ್ಠೆಯಿಂದ ಮಾಡಬೇಕು ಎಂದಿರುವ ಬಸವಾದಿ ಶರಣರ ಮಾತು ಅರಿತು ನಡೆಯಬೇಕು ಎಂದು ಹೇಳಿದರು.

ಬೆಳವಿ ಚರಂತೇಶ್ವರಮಠದ ಶರಣಬಸವ ಸ್ವಾಮೀಜಿ ಮಾತನಾಡಿ, ಸರ್ಕಾರ ಸಾವಯುವ ಕೃಷಿಕರಿಗೆ ಬೆಂಬಲ ನೀಡಬೇಕು. ಸಾವಯವ ಉತ್ಪನ್ನಗಳ ಮಾರಾಟಕ್ಕೆ ಸೂಕ್ತ ಮಾರುಕಟ್ಟೆ ಕಲ್ಪಿಸಿ ಕೊಡಬೇಕು ಎಂದರು.

ಮಹಾಲಿಂಗಪುರದ ಸಾಹಿತಿ ಅಶೋಕ ನರೋಡೆ ಶರಣ ಸಂಸ್ಕೃತಿ ಹಾಗೂ ಬಸವಪ್ಪ ಶರಣರ ಕಾಯಕ ನಿಷ್ಠೆ ಕುರಿತು ದತ್ತಿ ಉಪನ್ಯಾಸ ನೀಡಿದರು. ಲೇಖಕಿ ಲಲಿತಾ ಹೊಸಪ್ಯಾಟಿ ಪ್ರಾಸ್ತಾವಿಕ ಮಾತು ಹೇಳಿದರು.

ಕೃಷಿಯಲ್ಲಿ ಸಾಧನೆ ತೋರಿದ ನಿಂಬಲಗುಂದಿಯ ಪುಂಡಲೀಕಪ್ಪ ಸುಂಕದ, ಬೆನಕಟ್ಟಿಯ ಅಶೋಕ ಮೆಳ್ಳಿ ಹಾಗೂ ಕಮತಗಿಯ ಪುಷ್ಪಾ ಅಂಗಡಿ ಅವರಿಗೆ ಜಿಲ್ಲಾಮಟ್ಟದ ಕೃಷಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಹೆಚ್ಚು ಅಂಕ ಗಳಿಸಿದ ಹಿರೇಬಾದವಾಡಗಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಬಹುಮಾನ ನೀಡಲಾಯಿತು.

ಇಳಕಲ್‌ದ ಗುರುಮಹಾಂತ ಸ್ವಾಮೀಜಿ, ಅಮೀನಗಡದ ಶಂಕರರಾಜೇಂದ್ರ ಸ್ವಾಮೀಜಿ, ಸಂಗನಬಸವ ಸ್ವಾಮೀಜಿ, ಶಿರೂರಿನ ಬಸವಲಿಂಗ ಸ್ವಾಮೀಜಿ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎ.ಎಸ್.ಪಾವಟೆ, ವಿ.ಎಂ. ಹಾದಿಮನಿ, ರಮೇಶ ಕಮತಗಿ, ಎಸ್. ಎನ್.ಹಾದಿಮನಿ, ಪ್ರಭು ಮಾಲಗಿತ್ತಿಮಠ ಮತ್ತಿತರರು ಇದ್ದರು.

## ಆಗಸ್ಟ್ 29 ಹಾಗೂ 30 ರಂದು ಕಲಬುರಗಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಆಯೋಜನೆ

ಕಲಬುರಗಿ,ಆ.23 –ಪ್ರಸಕ್ತ 2025–26ನೇ ಸಾಲಿನ ಕಲಬುರಗಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಇದೇ ಆಗಸ್ಟ್ 29 ಹಾಗೂ 30 ರಂದು ಬೆಳಿಗ್ಗೆ 9 ಗಂಟೆಯಿಂದ ಕಲಬುರಗಿ ನಗರದ ಚಂದ್ರಶೇಖರ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದು, ಈ ಕ್ರೀಡಾಕೂಟದ ಅಂಗವಾಗಿ ಪುರುಷ/ಮಹಿಳೆಯರಿಗಾಗಿ ಕೆಳಕಂಡ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದು ಕಲಬುರಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಇದೇ ಆಗಸ್ಟ್ 29 ರಂದು ಪುರುಷ ಮತ್ತು ಮಹಿಳೆಯರಿಗಾಗಿ ಅಥ್ಲೇಟಿಕ್ಸ್, ವಾಲಿಬಾಲ್, ಖೋ–ಖೋ, ಕಬಡ್ಡಿ, ಥ್ರೋಬಾಲ್, ಯೋಗ ಕ್ರೀಡೆಗಳು ಹಾಗೂ ಪುರುಷರಿಗೆ ಮಾತ್ರ ಫುಟ್ಬಾಲ್ ಕ್ರೀಡೆ ಆಯೋಜಿಸಲಾಗಿದೆ. ಅದೇ ರೀತಿ ಆಗಸ್ಟ್ 30 ರಂದು ಪುರುಷ ಮತ್ತು ಮಹಿಳೆಯರಿಗಾಗಿ ಬಾಸ್ಕೆಟ್‌ಬಾಲ್, ಕುಸ್ತಿ, ಬ್ಯಾಡ್ಮಿಂಟನ, ಹಾಕಿ, ಹ್ಯಾಂಡಬಾಲ್, ಟೇಬಲ್ ಟೆನ್ನಿಸ್, ಬಾಲ್ ಬ್ಯಾಡ್ಮಿಂಟನ್ ಕ್ರೀಡೆಗಳು ಹಾಗೂ ಟೆನ್ನಿಸ್, ನೆಟ್‌ಬಾಲ್ ಮತ್ತು ಈಜು ನೇರ ಆಯ್ಕೆ ಕ್ರೀಡೆಗಳಾಗಿವೆ. ಈ ಆಯೋಜಿಸಿರುವ ಕ್ರೀಡೆಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಆನ್‌ಲೈನ್ ನೋಂದಣಿ ಕಡ್ಡಾಯವಾಗಿರುತ್ತದೆ.

ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಿ ವಿಜೇತರಾದ ವೈಯಕ್ತಿಕ ಪ್ರಥಮ, ದ್ವಿತೀಯ ಹಾಗೂ ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದ ತಂಡಗಳಿಗೆ ಜಿಲ್ಲಾ ಮಟ್ಟದಲ್ಲಿ ಭಾಗವಹಿಸಬಹುದಾಗಿದ್ದು, ವಿಜೇತ ಕ್ರೀಡಾಪಟುಗಳು ಆನ್‌ಲೈನ್ ನೋಂದಣೆ ಕಡ್ಡಾಯವಾಗಿ ಮಾಡಿರಬೇಕು.

ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ತಮ್ಮ ಆಧಾರ್ ಕಾರ್ಡ್ ಮತ್ತು ಬ್ಯಾಂಕ್ ಖಾತೆ–ಯ (ಪಾಸ್‌ಬುಕ್ ಜೆರಾಕ್ಸ್) ವಿವರ ಕಡ್ಡಾಯವಾಗಿ ಸಲ್ಲಿಸಬೇಕು. ಒಂದು ತಾಲೂಕಿನಿಂದ ಒಂದು ಬಾರಿ ಭಾಗವಹಿಸಿದ ನಂತರ, ಬೇರೆ ತಾಲ್ಲೂಕಿನಿಂದ/ ಜಿಲ್ಲೆಯಿಂದ ಸ್ಪರ್ಧಿಸುವಂತಿಲ್ಲ. ಕ್ರೀಡಾಕೂಟದಲ್ಲಿ ರಕ್ಷಣಾ ಪಡೆ, ಅರೆ ರಕ್ಷಣಾ ಪಡೆಗೆ ಸೇರಿದ ಕ್ರೀಡಾಪಟುಗಳು ಭಾಗವಹಿಸುವಂತಿಲ್ಲ.

ತಾಲ್ಲೂಕು ಮಟ್ಟದಲ್ಲಿ ಸ್ಪರ್ಧಿಸಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳಿಗೆ ಮಧ್ಯಾಹ್ನದ ಊಟದ ವ್ಯವಸ್ಥೆ ಇರುತ್ತದೆ. ಆಯಾ ತಾಲ್ಲೂಕಿನ ಕೇಂದ್ರ ಸ್ಥಾನದಿಂದ ಕಲಬುರಗಿಗೆ ಹೋಗಿ ಬರುವ ಸಾಮಾನ್ಯ ಪ್ರಯಾಣ ಭತ್ಯೆ ನೀಡಲಾಗುತ್ತದೆ. ಈ ಪ್ರಯಾಣ ಭತ್ಯೆಯನ್ನು ಆನ್‌ಲೈನ್ ಮೂಲಕ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತದೆ. ಸರ್ಕಾರದ ಶಕ್ತಿ ಯೋಜನೆ ಜಾರಿಯಲ್ಲಿರುವುದರಿಂದ ಮಹಿಳಾ ಕ್ರೀಡಾಪಟುಗಳಿಗೆ ಪ್ರಯಾಣ ಭತ್ಯೆ ನೀಡಲಾಗುವುದಿಲ್ಲ.

ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಗುಂಪು ಕ್ರೀಡೆಯಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳಿಗೆ ವಿಭಾಗ ಮಟ್ಟದಲ್ಲಿ ಭಾಗವಹಿಸಲು ಅರ್ಹರಿರುತ್ತಾರೆ. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಚಂದ್ರಶೇಖರ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಖುದ್ದಾಗಿ ಸಂಪರ್ಕಿಸಲು ಕೋರಲಾಗಿದೆ.



ಬಾಗಲಕೋಟೆ: ಜಿಲ್ಲೆಯ ಇಳಕಲ್ಲ ತಾಲೂಕಿನ ಸುಕ್ಷೇತ್ರ ಸಿದ್ಧನಕೊಳ್ಳದಲ್ಲಿ ಬೆಟ್ಟದ ಮೇಲಿಂದ ಸುರಿಯುತ್ತಿರುವ ನೀರಿನ ರಮಣೀಯ ನೋಟ.

# 9.25 ಕೋಟಿ ತೆರಿಗೆ ಕಟ್ಟದೆ ವಂಚಿಸಿದ
## ರಾಹುಲ್ ಕುಲಕರ್ಣಿ ಬಂಧನ: ಯಾಸ್ಮಿನ್ ವಾಲಿಕಾರ






ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 23 : ಕಳೆದ 4 ವರ್ಷಗಳಿಂದ ಸುಮಾರು 34 ಕೋಟಿ ವ್ಯವಹರಿಸಿ 132 ಜನರಿಗೆ ತನ್ನ ವಿವಿಧ ನಾಲ್ಕು ಸಂಸ್ಥೆಗಳ ಮುಖೇನ ಸುಳ್ಳು ದಾಖಲೆ ಸೃಷ್ಟಿಸಿ, ನಕಲಿ ಬಿಲ್‌ಗಳು ನೀಡಿ ಆ 132 ಜನರಿಗೂ ವಂಚಿಸಿದಲ್ಲದೇ ಸರ್ಕಾರದ ಬೊಕ್ಕಸಕ್ಕೆ 9 ಕೋಟಿ 25 ಲಕ್ಷ ತೆರಿಗೆ ಕಟ್ಟದೆ ವಂಚಿಸಿರುವ ಹಿನ್ನೆಲೆ ಬೀದರ್ ಜಿಲ್ಲೆಯ ನಿವಾಸಿ ರಾಹುಲ ತಂದೆ ಕಿಶನ ಕುಲಕರ್ಣಿ ಅವರನ್ನು ಕಲಬುರಗಿಯ ಪೂರ್ವ ವಲಯದ ಜಾರಿ ವಿಭಾಗದ ಅಧಿಕಾರಿಗಳು, ಬೆಂಗಳೂರು ಮತ್ತು ಶಿವಮೊಗ್ರದ ಅಧಿಕಾರಿಗಳು ಹಾಗೂ ತೆಲಂಗಾಣ ರಾಜ್ಯದ ಸರಕು ಮತ್ತು ಸೇವಾ ತೆರಿಗೆ ಅಧಿಕಾರಿಗಳ ಸಹಯೋಗದಿಂದ ಹೈದರಾಬಾದಿನಲ್ಲಿ ದಸ್ತಗಿರಿ ಮಾಡಿ ಕಸ್ಟಡಿಗೆ ಪಡೆಯಲಾಗಿದೆ ಎಂದು ಕಲಬುರಗಿ ಪೂರ್ವ ವಲಯ ವಾಣಿಜ್ಯ ತೆರಿಗೆ(ಜಾರಿ) ಇಲಾಖೆಯ ಜಂಟಿ ಆಯುಕ್ತೆ ಯಾಸ್ಮಿನ್ ಬೇಗಂ ಜಿ ವಾಲಿಕಾರ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಉದ್ದೇಶಿಸಿ ಮಾತನಾಡಿರುವ ಅವರು, ಶನಿವಾರ ರಾಹುಲನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಅಪಾದಿತ ತೆರಿಗೆದಾರ ತನ್ನ ಕುಟುಂಬ ಸದಸ್ಯರ ಹಾಗೂ ಸ್ನೇಹಿತರ ಆಧಾರ ಹಾಗೂ ಪ್ಯಾನ್ ಕಾರ್ಡಗಳನ್ನು ದುರುಪಯೋಗಪಡಿಸಿಕೊಂಡು, ಜಿಎಸ್‌ಟಿ ನೋಂದಣಿಗಳನ್ನು ಪಡೆದು, ಬ್ಯಾಂಕ್ ಖಾತೆಗಳನ್ನು ನಿರ್ವಹಿಸುತ್ತಾ ಸರಕು ಅಥವಾ ಸೇವೆಗಳನ್ನು ಪೂರೈಕೆ ಮಾಡದೇ ನಕಲಿ ಬಿಲ್ಲುಗಳನ್ನು ನೀಡಿ ಆ ಮೂಲಕ ನಕಲಿ ಹೂಡುವಳಿ ತೆರಿಗೆಯ ಕ್ಲೇಮು ಮಾಡಲು ಸಹಕರಿಸುತ್ತಿದ್ದನು. ಈ ಪ್ರಕರಣದಲ್ಲಿ ಇನ್ನಷ್ಟು ವ್ಯಕ್ತಿಗಳು ಭಾಗಿಯಾಗಿದ್ದು ಇವರಲ್ಲಿ ಬಹುತೇಕ ಲಾಭಾಂಶಿಗಳು ಕಾಮಗಾರಿ ಗುತ್ತಿಗೆದಾರರಾಗಿದ್ದು ಇವರು ಪಡೆದಿರುವ ನಕಲಿ ಹೂಡುವಳಿ ತೆರಿಗೆಯ ಬಗ್ಗೆ ತನಿಖೆ ಪ್ರಗತಿಯಲ್ಲಿರುತ್ತದೆ. ನಕಲಿ ಹೂಡುವಳಿ ತೆರಿಗೆ ಪಡೆದಿರುವ ಎಲ್ಲಾ ವ್ಯಕ್ತಿಗಳ ಮೇಲೆ ಕಟ್ಟುನಿಟ್ಟಾದ ಕ್ರಮ ತೆಗೆದುಕೊಳ್ಳಲಾಗುವುದು. ನಕಲಿ ಹೂಡುವಳಿ ತೆರಿಗೆ ಕ್ಲೇಮು ಮಾಡಿರುವವರಿಂದ ತೆರಿಗೆಯನ್ನು ಬಡ್ಡಿ ಮತ್ತು ದಂಡದ ಸಮೇತ ವಸೂಲಿ ಮಾಡಲಾಗುವುದು ಎಂದರು. ಸರ್ಕಾರಕ್ಕೆ ವಂಚಿಸಿದ ಆರೋಪದಡಿ ರಾಹುಲ್‌ಗೆ ಕೋರ್ಟ್ ಕನಿಷ್ಟ 5 ವರ್ಷ ಜೈಲು ಹಾಗೂ ದಂಡ ವಿಧಿಸುತ್ತದೆ. ಇಲ್ಲಿಯ ವರೆಗೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಇಂಥ ದೊಡ್ಡ ವಂಚನೆ ಇದಾಗಿದೆ ಲ್ದು ಯಾಸ್ಮಿನ್ ವಾಲಿಕಾರ ತಿಳಿಸಿದರು.

ಇಲಾಖೆಯ ಬೀದರ್ ಸಹಾಯಕ ಆಯುಕ್ತ ಪರ್ವತಗೌಡ.ಎಸ್, ಇಲಾಖೆಯ ಅಧಿಕಾರಿಗಳಾದ ಖಾಜಾ ಖಲಿಲೂಲ್ಲಾ, ಶಿವಕುಮಾರ ಸ್ವಾಮಿ, ಅಶೋಕ ಶೆಂಬೆಳ್ಳೆ, ಮಹೇಶಕುಮಾರ ಮಾಶೆಟ್ಟೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಅತಿವೃಷ್ಟಿ ಬೆಳೆ ಹಾನಿ ಪರಿಶೀಲಿಸಿದ
## ಶಾಸಕ ಅಲ್ಲಮಪ್ರಭು ಪಾಟೀಲ್



ಕಲಬುರಗಿ:ಅ.23:ದಕ್ಷಿಣಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ಪಟ್ಟಣ, ಭೀಮಳ್ಳಿ, ಮೇಳಕುಂದಾ ಸೇರಿ ಹಲವು ಗ್ರಾಮಗಳಿಗೆ ಭೇಟಿ ನೀಡಿ ಅತಿವೃಷ್ಟಿಯಿಂದ ಉಂಟಾದ ಬೆಳೆ ಹಾನಿಯನ್ನು ಪರಿಶೀಲಿಸಿದರು. ಒಂದುವಾರ ಸುರಿದ ನಿರಂತರ ಮಳೆಯಿಂದಾಗಿ ಹೆಸರು, ಉದ್ದು, ತೊಗರಿ ಸೇರಿದಂತೆ ಮುಂಗಾರು ಬೆಳೆಗಳು ನಾಶವಾದ ಕಾರಣ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಹಿನ್ನಲೆಯಲ್ಲಿ ತಹಶೀಲ್ದಾರರು ಹಾಗೂ ಕೃಷಿ ಇಲಾಖೆ ಅಧಿಕಾರಿಗಳೊಂದಿಗೆ ಖುದ್ದಾಗಿ ಭೇಟಿ ನೀಡಿದ ಶಾಸಕರು ಹಾನಿಗೀಡಾದ ಕೃಷಿಭೂಮಿಗಳನ್ನು ಪರಿಶೀಲಿಸಿದರು. ಬೆಳೆ ಹಾನಿಗೆ ಸರ್ಕಾರದಿಂದ

ಸೂಕ್ತ ಪರಿಹಾರ ದೊರಕುವಂತೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ ಶಾಸಕರು, ರೈತರಿಗೆ ಧೈರ್ಯ ತುಂಬಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರು, ಅಧಿಕಾರಿಗಳು ಗ್ರಾಮಸ್ಥರು ಇದ್ದರು.

# ಅತೀವೃಷ್ಟಿಗೆ ಬೆಳೆ ಹಾನಿ,ಎಕರೆಗೆ 25 ಸಾವಿರ ಪರಿಹಾರಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.23:ಔರಾದ(ಬಿ) ಹಾಗೂ ಕಮಲಗನರ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಶನಿವಾರ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಭೇಟಿ ನೀಡಿ

ಅತೀವೃಷ್ಟಿಯಿಂದಬಾಧಿತಗೊಂಡಿರುವ ಪ್ರದೇಶಕ್ಕೆಮಳೆಯಿಂದಾದ ಹಾನಿಯನ್ನು ಪರಿಶೀಲಿಸಿದರು.

ಬೋಂತಿ ಪಂಚಾಯಿತಿ ವ್ಯಾಪ್ತಿಯ ನಾಮಾನಾಯಕ್ ತಾಂಡಾ, ಬಾವಲಗಾಂವ, ಚೊಂಡಿಮುಖೇಡ್, ಚಿಕ್ಲಿ(ಯು) ತಾಂಡಾ, ಅಕನಾಪೂರ, ಗಂಗನಬೀಡ, ದಾಬಕಾ, ಮುತಖೇಡ್, ನಂದಿ ಬಿಜಲಗಾಂವ, ಚಿಮ್ಮೇಗಾಂವ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಸಂಚರಿಸಿ ಕೆರೆ–ಕಟ್ಟೆ, ಸೇತುವೆಗಳು ಒಡೆದು ಉಂಟಾಗಿರುವ ಹಾನಿಯ ಮಾಹಿತಿ ಪಡೆದರು.

ಮಳೆನೀರಿನ ವಿಪರೀತ ಹರಿವಿನಿಂದಾಗಿ ಸೇತುವೆ ಒಡೆದು ನೀರೆಲ್ಲ ರೈತರ ಹೊಲಗಳಿಗೆ ನುಗ್ಗಿ ಎಲ್ಲ ಬೆಳೆಗಳು ನೀರುಪಾಲಾಗಿವೆ. ಸೋಯಾ, ಉದ್ದು, ಹೆಸರು ಹಾಗೂ ಮತ್ತಿತರೆ ಬೆಳೆಗಳು ಈ ವರ್ಷ ಸರಿಯಾಗಿದ್ದವು. ಎಕಾಎಕಿ ಸುರಿದ ಧಾರಾಕಾರ ಮಳೆಗೆ ಎಲ್ಲ ಬೆಳೆಗಳು ಕೊಚ್ಚಿಹೋಗಿವೆ ಎಂದು ರೈತರು ಶಾಸಕರೆದುರು ಗೋಳು ತೋಡಿಕೊಂಡರು. ಇದೇ ವೇಳೆ ಶಾಸಕರು ಕೃಷಿಭೂಮಿಯಲ್ಲಿ ಓಡಾಡಿ ಬೆಳೆಹಾನಿಯನ್ನು ಗಮನಿಸಿದರು.

ಒಂದೇ ದಿನ 300 ಎಂ.ಎ. ಮಳೆಯಾಗಿದ್ದರಿಂದ ನೀರಿನ ರಭಸಕ್ಕೆ ಕೆರೆ–ಕಟ್ಟೆಗಳು, ಸೇತುವೆಗಳು ಒಡೆದು ತೀವ್ರ ಹಾನಿಯಾಗಿದೆ. ಕಾಲುವೆಗಳ ನೀರು ಕೃಷಿ ಭೂಮಿಗಳಿಗೆ ನುಗ್ಗಿ ಬಹಳಷ್ಟು ಹಾನಿಯಾಗಿದೆ. ಜನ–ಜಾನುವಾರುಗಳ ಸಾವಾಗಿರುವ ಪ್ರಕರಣಗಳಿಗೆ ಕೂಡಲೇ ಪರಿಹಾರ ವಿತರಿಸಲು ಕ್ರಮ ವಹಿಸಬೇಕು.

ಹಾನಿಯಾಗಿರುವ ರಸ್ತೆ, ಕೆರೆ–ಕಟ್ಟೆ ಮತ್ತು ಸೇತುವೆಗಳ ದುರಸ್ಥಿ ಅಥವಾ ಪುನರ್ ನಿರ್ಮಾಣಕ್ಕಾಗಿ ಸರ್ಕಾರಕ್ಕೆ ಕೂಡಲೇ ಪ್ರಸ್ತಾವನೆ ಸಲ್ಲಿಸಬೇಕು. ಬೆಳೆ ಹಾನಿಯ ಕುರಿತು ಕಂದಾಯ ಇಲಾಖೆ, ಕೃಷಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳು ಹಾನಿಯಾದ ಸ್ಥಳಕ್ಕೆ ಖುದ್ದಾಗಿ ಭೇಟಿ ನೀಡಿ ವರದಿ ಸಲ್ಲಿಸಬೇಕು. ಈ ವಿಷಯದಲ್ಲಿ ನಿರ್ಲಕ್ಷವಹಿಸಿದರೆ ಸುಮ್ಮನಿರುವುದಿಲ್ಲ ಎಂದು ಎಚ್ಚರಿಸಿದರು. ಕೆಲವೆಡೆ ಇಂದಿಗೂ ವಿದ್ಯುತ್ ಕಂಬಗಳು ಟ್ರಾನ್ಸ್‌ಫಾರ್ಮರಗಳನ್ನು ದುರಸ್ಥಿ ಮಾಡದಿರುವ ಬಗ್ಗೆ ಸಾರ್ವಜನಿಕರು ಗಮನಕ್ಕೆ ತಂದಾಗ ಶಾಸಕರು ಅಧಿಕಾರಿಗಳಿಗೆ ತೀವ್ರ ತರಾಟೆಗೆ ತೆಗೆದುಕೊಂಡರು.

ಈಗಾಗಲೇ ಜನ ಸಮಸ್ಯೆಯಲ್ಲಿದ್ದಾರೆ. ಅವರಿಗೆ ಇನ್ನಷ್ಟು ಸಮಸ್ಯೆಗೆ ದೂಡುತ್ತಿರುವುದು ಸರಿಯಲ್ಲವೆಂದು ಕೋಪಗೊಂಡರು. ವಿದ್ಯುತ್ ಕಂಬಗಳು, ಟ್ರಾನ್ಸ್‌ಫಾರ್ಮರಗಳನ್ನು ಬೇಗ ಸರಿಪಡಿಸಿ ವಿದ್ಯುತ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕೆಂದು ಸೂಚನೆ ನೀಡಿದರು.

ಅಧಿಕಾರಿಗಳಿಗೆ ತರಾಟೆ:

ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮಲೆಕ್ಕಾಧಿಕಾರಿಗಳು, ಎಂಜಿನೀಯರ್‌ಗಳ ಕಾರ್ಯವೈಖರಿಯ ಬಗ್ಗೆ ಸಾರ್ವಜನಿಕರು ಬೇಸರ ವ್ಯಕ್ತಪಡಿಸುತ್ತಿದ್ದು ತಾವೇನು ಮಾಡುತ್ತಿದ್ದೀರಿ ಎಂದು ತರಾಟೆಗೆ ತೆಗೆದುಕೊಂಡರು. ಎಲ್ಲರೂ ತಮ್ಮ ತಮ್ಮ ಕರ್ತವ್ಯಗಳನ್ನು ಸರಿಯಾಗಿ ನಿಭಾಯಿಸಬೇಕು. ಸಂಕಷ್ಟದಲ್ಲಿರುವ ಜನತೆಗೆ ಸ್ಪಂದಿಸಬೇಕು. ನೊಂದವರಿಗೆ ಸರ್ಕಾರದ ಪರಿಹಾರವನ್ನು ತಲುಪಿಸಲು ಪ್ರಮಾಣಿಕವಾಗಿ ಪ್ರಯತ್ನಿಸಬೇಕು ಎಂದು ತಿಳಿಸಿದರು.

ರೈತರಿಗೆ ಬೆಳೆವಿಮೆಯ ಸೌಲಭ್ಯ ಸಿಗಲಿ:

ಕ್ಷೇತ್ರದ ಎಲ್ಲ ರೈತರು ಬೆಳೆವಿಮೆ ಮಾಡಿಸಿಕೊಂಡಿದ್ದಾರೆ. ಅವರಿಗೆ ಲಾಭವಾಗುವ ದಿಶೆಯಲ್ಲಿ ಅಧಿಕಾರಿಗಳು ಕೆಲಸ ಮಾಡಬೇಕು. ಸಮೀಕ್ಷೆ ಮಾಡಲು ಹೋಗುವ ಮುನ್ನ ಗ್ರಾಮದಲ್ಲಿ ಡೊಂಗೂರ ಸಾರಿಸಿ ಹೋಗಬೇಕು. ಸಮೀಕ್ಷೆಯಿಂದ ಯಾವೊಂದು ಕೃಷಿ ಭೂಮಿಯೂ ಬಿಟ್ಟು ಹೋಗದಂತೆ ನೋಡಿಕೊಳ್ಳಬೇಕು. ಬೆಳೆ ವಿಮೆ ವಿಷಯದಲ್ಲಿ ರೈತರಿಗೆ ಸಾಕಷ್ಟು ಅನ್ಯಾಯವಾಗುತ್ತಿರುವುದು ಗಮನಕ್ಕೆ ಬಂದಿದೆ. ಈ ಬಾರಿ ಅತೀವೃಷ್ಟಿಯಿಂದ ರೈತರು ಸಾಕಷ್ಟು ತೊಂದರೆಯಲ್ಲಿದ್ದಾರೆ. ಅವರಿಗೆ ವಿಮೆಯ ಲಾಭ ಸಿಗಬೇಕು. ಕೃಷಿ, ತೋಟಗಾರಿಕೆ, ಕಂದಾಯ ಇಲಾಖೆಯ ಅಧಿಕಾರಿಗಳು ರೈತರಿಗೆ ಸಹಕರಿಸಬೇಕು ಎಂದು ಶಾಸಕರು ಸೂಚಿಸಿದರು. ಬಳಿಕ ಮಾತನಾಡಿದ ಶಾಸಕರು, ಅತೀವೃಷ್ಟಿಯಿಂದಾಗಿ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕುಗಳಲ್ಲಿ ಸಾಕಷ್ಟು ಹಾನಿಯಾಗಿದೆ. ಬೆಳೆ ನಷ್ಟವಾಗಿ ರೈತರು ಕಂಗಾಗಲಾಗಿದ್ದಾರೆ. ಪರಿಸ್ಥಿತಿಯ ಗಂಭೀರತೆಯನ್ನು ಮನಗಂಡು ಈಗಾಗಲೇ ಮುಖ್ಯಮಂತ್ರಿಗಳು ಹಾಗೂ ಸಂಬಂಧಪಟ್ಟ ಸಚಿವರನ್ನು ಭೇಟಿಯಾಗಿ ಅತೀವೃಷ್ಟಿ ಪೀಡಿತ ಪ್ರದೇಶಗಳಿಗೆ ಪರಿಹಾರ ಘೋಷಿಸುವಂತೆ ಮನವಿ ಸಲ್ಲಿಸಿದ್ದೇನೆ. ವಿಧಾನಸಭಾ ಅಧಿವೇಶನದಲ್ಲಿಯೂ ಹಾನಿಯ ಬಗ್ಗೆ ಸರ್ಕಾರದ ಗಮನ ಸೆಳೆದಿದ್ದೇನೆ. ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿ ಅಂದಾಜು 10 ಸಾವಿರ ಹೆಕ್ಟೇರ್‌ಗೂ ಹೆಚ್ಚು ಬೆಳೆ ಹಾನಿಯಾಗಿದೆ. ಪ್ರತಿ ಎಕರೆಗೆ ಸುಮಾರು 25 ಸಾವಿರ ಪರಿಹಾರ ಘೋಷಿಸಬೇಕೆಂದು ಸರ್ಕಾರಕ್ಕೆ ಆಗ್ರಹಿಸಿದ್ದೇನೆ. ನಾನು ನಿಮ್ಮೊಂದಿಗಿದ್ದು ಯಾವುದೇ ಕಾರಣಕ್ಕೂ ಆತಂಕಪಡಬಾರದು ಎಂದು ರೈತರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಔರಾದ(ಬಿ) ತಹಸೀಲ್ದಾರರಾದ ಮಹೇಶ ಪಾಟೀಲ, ಕಮಲನಗರ ತಹಸೀಲ್ದಾರರಾದ ಅಮಿತಕುಮಾರ ಕುಲಕರ್ಣಿ, ಔರಾದ, ಕಮಲಗನರ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕಿರಣ ಪಾಟೀಲ, ಹಣಮಂತ ಕೌಟಗೆ, ಪಂಚಾಯತ್ ರಾಜ್ ಇಲಾಖೆಯ ಎಇಇ ಸುನೀಲ ಚಿಲ್ಲರ್ಗೆ, ಲೋಕೋಪಯೋಗಿ ಇಲಾಖೆಯ ಎಇಇ ಪ್ರೇಮಸಾಗರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಎಇಇ ಮಾರುತಿ ರಾಠೋಡ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಇಮಲಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜೆ.ರಂಗೇಶ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕಂದಾಯ ಇಲಾಖೆ ಸೇರಿದಂತೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಶಿವಾಜಿರಾವ ಪಾಟೀಲ ಮುಂಗನಾಳ, ಸತೀಷ ಪಾಟೀಲ, ಯೋಗೇಶ ಪಾಟೀಲ, ಧೊಂಡಿಬಾ ನರೋಟೆ, ಪ್ರವೀಣ ಕಾರಬಾರಿ, ಭರತ ಕದಂ, ಮಂಜು ಸ್ವಾಮಿ, ಸಚಿನ ರಾಠೋಡ, ಸುಜಿತ ರಾಠೋಡ, ಪ್ರದೀಪ ಪವಾರ, ಧನಾಜಿ ರಾಠೋಡ, ಸಂಜು ಮುರ್ಕೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪತ್ನಿ ಕೊಲೆಗೈದ ಆರೋಪಿಗೆ ಜೀವಾವಧಿ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.23–ಸಾರಾಯಿ ಕುಡಿಯಬೇಡ ಕುಡಿದರೆ ಜೀವನ ಸಾಗಿಸುವುದು ತೊಂದರೆಯಾಗುತ್ತದೆ ಎಂದು ಬುದ್ಧಿವಾದ ಹೇಳಿದ್ದ ಪತ್ನಿಯನ್ನೇ ಕೊಲೆ ಮಾಡಿದ ಆರೋಪಿಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಜೀವಾವಧಿ ಶಿಕ್ಷೆ ಮತ್ತು ದಂಡ ವಿಧಿಸಿ ತೀರ್ಪು ನೀಡಿದೆ.

ಜಿಲ್ಲೆಯ ಬೀಳಗಿ ತಾಲೂಕಿನ ಬೂದಿಹಾಳ ಎಸ್.ಎ. ಗ್ರಾಮದ ಮಲ್ಲಪ್ಪ ಫಕೀರಪ್ಪ ಹೆರಕಲ್ಲ ಶಿಕ್ಷೆಗೆ ಒಳಗಾದ ವ್ಯಕ್ತಿ. ಮನೆಯಲ್ಲಿ ಚಿಕ್ಕಮಕ್ಕಳು ಇದ್ದಾರೆ. ನೀನು ನಿತ್ಯ ಸಾರಾಯಿ ಕುಡಿದರೆ ಜೀವನ ಹೇಗೆ ಸಾಗಿಸುವುದು ಎಂದು ಹೆಂಡತಿ ಪಾರ್ವತಿ ಈತನಿಗೆ ಹೇಳಿದ್ದಕ್ಕೆ ಆಕೆಗೆ ಚಿತ್ರಹಿಂಸೆ ನೀಡಿ 2022 ರ ಅಕ್ಟೋಬರ್ 27 ರಂದು ಕೊಡಲಿಯಿಂದ ಹೊಡೆದು ಕೊಲೆ ಮಾಡಿದ್ದನು.

ಈ ಕುರಿತು ಬೀಳಗಿ ಪೊಲೀಸ್ ಠಾಣೆಯಲ್ಲಿ ಅಂದಿನ ಪೋಲಿಸ್ ಇನ್ಸಪೆಕ್ಟರ್ ಶಿವಾನಂದ ಕಮತಗಿ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡು ಸಾಕ್ಷಾದಾರಗಳನ್ನು ಸಂಗ್ರಹಿಸಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್.ವಿ.ವಿಜಯ್

ಸಾಕ್ಷಿಪುರಾವೆಗಳನ್ನು ಅವಲೋಕಿಸಿ, ಆರೋಪಿ ಮಲ್ಲಪ್ಪ

ಫಕೀರಪ್ಪ ಹೆರಕಲ್ಲಗೆ ಕಲಂ. 302 ಐಪಿಸಿ ಅಡಿ ಜೀವಾವಧಿ ಶಿಕ್ಷೆ ಮತ್ತು 5 ಸಾವಿರ ರೂ. ದಂಡ ಮತ್ತು ಕಲಂ 498(ಎ) ಐಪಿಸಿ ನೇದ್ದಕ್ಕೆ 1 ವರ್ಷ ಶಿಕ್ಷೆ ಮತ್ತು 5 ಸಾವಿರ ರೂ.ಗಳ ದಂಡ ವಿಧಿಸಿದ್ದಾರಲ್ಲದೇ, ನೊಂದವರಿಗೆ 4 ಲಕ್ಷ ರೂ.ಗಳ ಪರಿಹಾರವನ್ನು ನೀಡುವಂತೆ ಆದೇಶಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಪ್ರಧಾನ ಸರ್ಕಾರಿ ಅಭಿಯೋಜಕ ವಿ.ಜಿ.ಹೆಬಸೂರ ವಾದ ಮಂಡಿಸಿದ್ದರು.

# ದೇಶದ ಅತ್ಯಂತ ಶ್ರೀಮಂತ ಮುಖ್ಯಮಂತ್ರಿಗಳ ಪಟ್ಟಿ
## ರಿಲೀಸ್ : ಸಿಎಂ ಸಿದ್ದರಾಮಯ್ಯಗೆ ಮೂರನೇ ಸ್ಥಾನ



ನವದೆಹಲಿ:ಅ.23: ದೇಶದ ಅತ್ಯಂತ ಶ್ರೀಮಂತ ಮುಖ್ಯಮಂತ್ರಿಗಳ ಪಟ್ಟಿಯಲ್ಲಿ ಕರ್ನಾಟಕದ ಸಿಎಂ ಸಿದ್ದರಾಮಯ್ಯ ಅವರು ಮೂರನೇ ಸ್ಥಾನದಲ್ಲಿದ್ದಾರೆ.

ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಬಿಡುಗಡೆ ಮಾಡಿದ ಪಟ್ಟಿಯಲ್ಲಿ ದೇಶದ ಅತ್ಯಂತ ಶ್ರೀಮಂತ ಮುಖ್ಯಮಂತ್ರಿಗಳ ಪೈಕಿ ಸಿಎಂ ಸಿದ್ದರಾಮಯ್ಯ ಅವರು 51 ಕೋಟಿ ರೂ. ಆಸ್ತಿ ಹೊಂದುವ ಮೂಲಕ ಮೂರನೇ ಸ್ಥಾನ ಪಡೆದುಕೊಂಡಿದ್ದಾರೆ.

ದೇಶಾದ್ಯಂತ ಎಲ್ಲಾ ರಾಜ್ಯಗಳ ಮತ್ತು ಕೇಂದ್ರಾಡಳಿತ ಪ್ರದೇಶಗಳ 30 ಪ್ರಸ್ತುತ ಮುಖ್ಯಮಂತ್ರಿಗಳು ಸಲ್ಲಿಸಿರುವ ಪ್ರಮಾಣಪತ್ರಗಳನ್ನು ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ (ಎಡಿಆರ್) ವಿಶ್ಲೇಷಿಸಿ ಈ ಮಾಹಿತಿಯನ್ನು ನೀಡಿದೆ. ವಿಶ್ಲೇಷಣೆಯ ಪ್ರಕಾರ, ಮಣಿಪುರವನ್ನು ಹೊರತುಪಡಿಸಿ ಭಾರತದ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಸೇರಿದಂತೆ 30 ಮುಖ್ಯಮಂತ್ರಿಗಳ ಸರಾಸರಿ ಆಸ್ತಿ 54.42 ಕೋಟಿ ರೂ.ಗಳಷ್ಟಿದೆ ಎಂದು ತಿಳಿದುಬಂದಿದೆ.

30 ಸಿಎಂಗಳ ಒಟ್ಟು ಆಸ್ತಿ 1,632 ಕೋಟಿ ರೂ.ಗಳಷ್ಟಿದ್ದು, ಆಂಧ್ರಪ್ರದೇಶದ ಸಿಎಂ ನಾರಾಚಂದ್ರಬಾಬು ನಾಯ್ಡು ಅವರು ಒಟ್ಟು 931 ಕೋಟಿ ರೂ. ಮೌಲ್ಯದ ಆಸ್ತಿ ಹೊಂದುವ ಮೂಲಕ ಮೊದಲ ಸ್ಥಾನದಲ್ಲಿದ್ದರೆ. ಅರುಣಾಚಲ ಪ್ರದೇಶದ ಸಿಎಂ ಪೇಮಾ ಖಂಡು ಅವರು 332 ಕೋಟಿ ರೂ.ಗೂ ಹೆಚ್ಚು ಆಸ್ತಿ ಹೊಂದುವ ಮೂಲಕ ಎರಡನೇ ಸ್ಥಾನದಲ್ಲಿದ್ದಾರೆ. ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 51 ಕೋಟಿ ರೂ. ಮೌಲ್ಯದ ಆಸ್ತಿ ಹೊಂದುವ ಮೂಲಕ ಮೂರನೇ ಸ್ಥಾನ ಪಡೆದುಕೊಂಡಿದ್ದಾರೆ.

ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ 1.18 ಕೋಟಿ ರೂ., ಕೇಂದ್ರಾಡಳಿತ ಪ್ರದೇಶದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ 55.24 ಲಕ್ಷ ರೂ. ಗೂ ಹೆಚ್ಚು ಹಾಗೂ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ 15.38 ಲಕ್ಷ ರೂ.ಗೂ ಹೆಚ್ಚು ಆಸ್ತಿ ಹೊಂದುವ ಮೂಲಕ ಅತಿ ಕಡಿಮೆ ಆಸ್ತಿ ಹೊಂದಿರುವ ಮುಖ್ಯಮಂತ್ರಿಗಳಾಗಿದ್ದಾರೆ.

ರಾಜಸ್ಥಾನದ ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ (1.46 ಕೋಟಿ ರೂ.), ಉತ್ತರ ಪ್ರದೇಶದ ಯೋಗಿ ಆದಿತ್ಯನಾಥ್ (1.54 ಕೋಟಿ ರೂ.), ಬಿಹಾರದ ನಿತೀಶ್ ಕುಮಾರ್ (1.64 ಕೋಟಿ ರೂ.), ಪಂಜಾಬ್‌ನ ಭಗವಂತ್ ಮಾನ್ (1.97 ಕೋಟಿ ರೂ.), ಒಡಿಶಾದ ಮೋಹನ್ ಚರಣ್ ಮಾಝಿ (1.97 ಕೋಟಿ ರೂ.) ಮತ್ತು ಛತ್ತೀಸ್‌ಗಢದ ವಿಷ್ಣು ದೇವ್ ಸಾಯಿ (3.80 ಕೋಟಿ ರೂ.) ಕಡಿಮೆ ಆಸ್ತಿ ಹೊಂದಿರುವ ಇತರ ಸಿಎಂಗಳಾಗಿದ್ದಾರೆ.

# ಆ.25 ರಿಂದ ಅಮೆರಿಕಗೆ ಅಂಚೆ ಸೇವೆ ಸ್ಥಗಿತಗೊಳಿಸಿದ ಭಾರತ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ: ಅ.23:ಟ್ರಂಪ್ ಸುಂಕ ಕ್ರಮಗಳ ನಂತರ ಆಗಸ್ಟ್ 25 ರಿಂದ ಭಾರತ, ಅಮೆರಿಕಕ್ಕೆ ಅಂಚೆ ಸೇವೆಗಳನ್ನು ಸ್ಥಗಿತಗೊಳಿಸಲಿದೆ. ಈ ತಿಂಗಳ ಕೊನೆಯಲ್ಲಿ ಜಾರಿಗೆ ಬರಲಿರುವ ಯುಎಸ್ ಕಸ್ಟಮ್ಸ್ ನಿಯಮಗಳಲ್ಲಿನ ಬದಲಾವಣೆಗಳನ್ನು ಉಲ್ಲೇಖಿಸಿ, ಆ.25 ರಿಂದ ಅಮೆರಿಕಕ್ಕೆ ಎಲ್ಲಾ ಅಂಚೆ ಸೇವೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವುದಾಗಿ ಅಂಚೆ ಇಲಾಖೆ ಶನಿವಾರ ಪ್ರಕಟಿಸಿದೆ.

ಈ ನಿರ್ಧಾರವು ಜು.30 ರಂದು ಗಖ ಆಡಳಿತವು ಹೊರಡಿಸಿದ ಕಾರ್ಯನಿರ್ವಾಹಕ ಆದೇಶ

ಸಂಖ್ಯೆ 14324 ಅನ್ನು

ಅನುಸರಿಸುತ್ತದೆ. ಇದು 800 ಡಾಲರ್ ವರೆಗಿನ ಸರಕುಗಳಿಗೆ ಸುಂಕ–ಮುಕ್ತ ಡಿ ಮಿನಿಮಿಸ್ ವಿನಾಯಿತಿಯನ್ನು ಹಿಂತೆಗೆದುಕೊಳ್ಳುತ್ತದೆ.

# ಧರ್ಮಸ್ಥಳ ಪ್ರಕರಣದ ಹಿಂದಿನ 'ಪಿತೂರಿಗಾರರನ್ನು'
## ಬಯಲು ಮಾಡಲು ತನಿಖೆಯನ್ನು ಎನ್‌ಐಎಗೆ ವಹಿಸಿ: ಬಿಜೆಪಿ



ಬೆಂಗಳೂರು:ಅ.23:ಧರ್ಮಸ್ಥಳದಲ್ಲಿ ಕಳೆದ ಎರಡು ದಶಕಗಳಲ್ಲಿ "ಹಲವು ಕೊಲೆಗಳು, ಅತ್ಯಾಚಾರಗಳು ದೂರುದಾರರ ಹಿಂದಿನ "ಪಿತೂರಿಗಾರರು, ವಿದೇಶಿ ಕೈಗಳು ಮತ್ತು ಆರ್ಥಿಕ ನೆರವನ್ನು" ಬಹಿರಂಗಪಡಿಸಲು ತನಿಖೆಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆ(ಎನ್‌ಐಎ)ಗೆ ಹಸ್ತಾಂತರಿಸುವಂತೆ ಕರ್ನಾಟಕ ಬಿಜೆಪಿ ಶನಿವಾರ ಕಾಂಗ್ರೆಸ್ ಸರ್ಕಾರವನ್ನು ಒತ್ತಾಯಿಸಿದೆ.

ಧರ್ಮಸ್ಥಳ ಮತ್ತು ಅಲ್ಲಿನ ದೇವಾಲಯವನ್ನು ಗುರಿಯಾಗಿಸಿಕೊಂಡು ನಡೆಯುತ್ತಿರುವ ಅಭಿಯಾನದ ಹಿಂದೆ "ದೊಡ್ಡ ಪಿತೂರಿ" ಇದೆ ಎಂದು ರಾಜ್ಯದ ವಿರೋಧ ಪಕ್ಷ ಆರೋಪಿಸಿದೆ.

ಮಾಸ್ಕ್‌ಮ್ಯಾನ್ ಎಂದೇ ಕುಖ್ಯಾತಿ ಗಳಿಸಿರುವ ಸಿ ಎನ್ ಚಿನ್ನಯ್ಯ ಎಂದು ಗುರುತಿಸಲಾದ ದೂರುದಾರರನ್ನು ಶನಿವಾರ ಬಂಧಿಸಲಾಗಿದೆ. ಈ ದೂರುದಾರರು ನಮಗೆ ಮುಖ್ಯವಲ್ಲ, ಅವರ ಹಿಂದಿನ ಪಿತೂರಿದಾರರು ಮುಖ್ಯ. ಇದನ್ನು ತನಿಖೆ ಮಾಡಬೇಕಾಗಿದೆ. ಸರ್ಕಾರ ನ್ಯಾಯಯುತ ತನಿಖೆ ನಡೆಸುತ್ತಿದೆ ಮತ್ತು ಅವರು ಹಿಂದೂಗಳನ್ನು ಅವಮಾನಿಸುತ್ತಿಲ್ಲ ಎಂದು ಸಾಬೀತುಪಡಿಸಲು, ಅವರು ಇದಕ್ಕಾಗಿ ಪ್ರತ್ಯೇಕ ಎಸ್‌ಐಟಿಯನ್ನು ರಚಿಸಬೇಕಾಗುತ್ತದೆ, ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್ ಅಶೋಕ ಹೇಳಿದ್ದಾರೆ.

"ಕಾಂಗ್ರೆಸ್ ಮತ್ತು ಡಿ ಕೆ ಶಿವಕುಮಾರ್ (ಉಪಮುಖ್ಯಮಂತ್ರಿ) ಅವರಿಗೆ ಗೌರವವಿದ್ದರೆ, ಪಿತೂರಿಗಾರರು ಬಹಿರಂಗಗೊಳ್ಳುವುದನ್ನು ಅವರು ಖಚಿತಪಡಿಸಿಕೊಳ್ಳಬೇಕು. ಇದಕ್ಕಾಗಿ ಅವರು ಎಸ್‌ಐಟಿ ರಚಿಸಬೇಕು ಅಥವಾ ಅದನ್ನು ಎನ್‌ಐಎಗೆ ನೀಡಬೇಕು. ವಿದೇಶ ಮತ್ತು ಇತರ ರಾಜ್ಯಗಳಿಂದ ಹಣ ಬಂದಿದೆ ಎಂದು ಹೇಳಲಾಗುತ್ತಿರುವುದರಿಂದ, ಎನ್‌ಐಎ ತನಿಖೆಯ ಅಗತ್ಯವಿರುತ್ತದೆ" ಎಂದು ಅಶೋಕ್ ಹೇಳಿದ್ದಾರೆ.

ಹಲವಾರು ಬಿಜೆಪಿ ಸಂಸದರು ಎನ್‌ಐಎ ತನಿಖೆ ಕೋರಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ ಎಂದು ಗಮನಿಸಿದ ಅವರು, "ಕೇಂದ್ರ ಆದೇಶಿಸುವ ಮೊದಲು ರಾಜ್ಯ ಎನ್‌ಐಎ ತನಿಖೆಗೆ ನೀಡಿದರೆ ಒಳ್ಳೆಯದು. ರಾಜ್ಯ ಕಾಂಗ್ರೆಸ್ ಸರ್ಕಾರ ಅದನ್ನು ಎನ್‌ಐಎಗೆ ನೀಡದಿದ್ದರೆ, ಇದರಲ್ಲಿ ಕಾಂಗ್ರೆಸ್ ಪಾತ್ರ ಸ್ಪಷ್ಟವಾಗುತ್ತದೆ" ಎಂದು ಆರೋಪಿಸಿದ್ದಾರೆ. ರಾಜ್ಯ ಸರ್ಕಾರ ರಚಿಸಿದ ಎಸ್‌ಐಟಿ, ಕಳೆದ ಎರಡು ದಶಕಗಳಲ್ಲಿ ಧರ್ಮಸ್ಥಳದ ವಿವಿಧ ಸ್ಥಳಗಳಲ್ಲಿ ನಡೆದ ಬಹು ಕೊಲೆಗಳು, ಅತ್ಯಾಚಾರಗಳು ಮತ್ತು ಸಮಾಧಿಗಳ ಆರೋಪಗಳನ್ನು ತನಿಖೆ ಮಾಡುತ್ತಿದೆ.

ತನಿಖೆಯ ಭಾಗವಾಗಿ, ಧರ್ಮಸ್ಥಳದ ನೇತ್ರಾವತಿ ನದಿಯ ದಡದಲ್ಲಿರುವ ಅರಣ್ಯ ಪ್ರದೇಶಗಳಲ್ಲಿ ದೂರುದಾರರು ಗುರುತಿಸಿದ ಬಹು ಸ್ಥಳಗಳಲ್ಲಿ ಎಸ್‌ಐಟಿ ಅಸ್ಥಿಪಂಜರಗಳನ್ನು ಹೊರತೆಗೆಯಲಾಗಿದೆ, ಅಲ್ಲಿ ಇಲ್ಲಿಯವರೆಗೆ ಎರಡು ಸ್ಥಳಗಳಲ್ಲಿ ಕೆಲವು ಅಸ್ಥಿಪಂಜರ ಅವಶೇಷಗಳು ಕಂಡುಬಂದಿವೆ.

ಕಾಂಗ್ರೆಸ್ ಸರ್ಕಾರ ಪೊಲೀಸರ "ಕೈಗಳನ್ನು ಕಟ್ಟಿಹಾಕಿದೆ" ಮತ್ತು ಪ್ರಕರಣದಲ್ಲಿ ಅವರ ತನಿಖೆಯನ್ನು ಕೇವಲ ಹೊರತೆಗೆದು ಮೂಳೆಗಳು ಅಥವಾ ತಲೆಬುರುಡೆಗಳನ್ನು ಹುಡುಕಲು ಸೀಮಿತಗೊಳಿಸಿದೆ ಎಂದು ಆರೋಪಿಸಿದ ಅಶೋಕ್, ಬಿಜೆಪಿ ತನಿಖೆ ಮತ್ತು ತೆಳುವಾದ ಪ್ರಚಾರದ ಬಗ್ಗೆ ಪ್ರಶ್ನೆಗಳನ್ನು ಎತ್ತಲು ಪ್ರಾರಂಭಿಸಿದಾಗ ಮತ್ತು ಹಲವಾರು ಹೊರತೆಗೆದ ನಂತರವೂ ಏನೂ ಪತ್ತೆಯಾಗದಿದ್ದಾಗ, ತನಿಖೆಯ ಮಾರ್ಗವು ಬದಲಾಗಲು ಪ್ರಾರಂಭಿಸಿತು ಎಂದು ಹೇಳಿದರು.

"(ದೂರುದಾರರ) ಬಂಧನ ಮಾತ್ರ ಸಾಕಾಗುವುದಿಲ್ಲ, ಪಿತೂರಿಯನ್ನು ಬಹಿರಂಗಪಡಿಸಬೇಕು ಮತ್ತು ಪಿತೂರಿಗಾರರನ್ನು ಬಹಿರಂಗಪಡಿಸಬೇಕು... ಇದು ಧಾರ್ಮಿಕ ಮತಾಂತರದ ಕೋನವನ್ನು ಹೊಂದಿರುವಂತೆ ತೋರುತ್ತದೆ. ಇದನ್ನು ತನಿಖೆ ಮಾಡಬೇಕು. ಪ್ರತ್ಯೇಕ ಎಸ್‌ಐಟಿ ರಚಿಸಬೇಕು, ಅಥವಾ ಅದನ್ನು ಎನ್‌ಐಎಗೆ ನೀಡಬೇಕು. ಅವರು ಇದರ ಹಿಂದೆ ವಿದೇಶಿ ಕೈಗಳನ್ನು ಕಂಡುಕೊಳ್ಳುತ್ತಾರೆ" ಎಂದು ಅವರು ಹೇಳಿದರು.

ಧರ್ಮಸ್ಥಳದ ವಿರುದ್ಧ ಪಿತೂರಿ ನಡೆಸಿದವರ ವಿರುದ್ಧ ಸೂಕ್ತ ತನಿಖೆ ನಡೆಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಬಿಜೆಪಿ ರಾಜ್ಯ ಅಧ್ಯಕ್ಷ ಬಿ ವೈ ವಿಜಯೇಂದ್ರ ಒತ್ತಾಯಿಸಿದರು.

"ಧರ್ಮಸ್ಥಳದ ವಿರುದ್ಧ ಪಿತೂರಿ ನಡೆಸಲಾಗುತ್ತಿದೆ ಎಂದು ನಾವು ಹೇಳಿದ್ದೆವು, ಅದು ಈಗ ನಿಜವಾಗಿದೆ. ದೂರುದಾರರ ಬಂಧನವು ಸತ್ಯದ ಮೇಲೆ ಬೆಳಕು ಚೆಲ್ಲಿದೆ. ಈ ವ್ಯಕ್ತಿಯ ಹಿಂದೆ ಇರುವ ಶಕ್ತಿಗಳು ಯಾರು? ಪಿತೂರಿ ನಡೆಸಿದ ಜನರು ಯಾರು?" "ಘ'ನಲ್ಲಿ ಪೋಸ್ಟ್‌ನಲ್ಲಿ ವಿಜಯೇಂದ್ರ ಪ್ರಶ್ನಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.